ಕರ್ನಾಟಕ ವಿಧಾನ ಪರಿಷತ್ತು

# ನೂರ ಐವತ್ತೊಂದನೆಯ ಅಧಿವೇಶನ

# ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

(ದಿನಾಂಕ: 04.12.2023 ರಿಂದ 15.12.2023ರವರೆಗೆ)

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯ

ವಿಧಾನ ಸೌಧ, ಬೆಂಗಳೂರು-560 001

# ನೂರ ಐವತ್ತೊಂದನೆಯ ಅಧಿವೇಶನ

# ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

(ದಿನಾಂಕ: 04.12.2023 ರಿಂದ 15.12.2023ರವರೆಗೆ)

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯ

ವಿಧಾನ ಸೌಧ, ಬೆಂಗಳೂರು-560 001

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೊಂದನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಸೋಮವಾರ, ದಿನಾಂಕ:04.12.2023**

**(01)**

ದಿನಾಂಕ:04.12.2023 ರಂದು ಬೆಳಗ್ಗೆ 11.05 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**‘ವಂದೇ ಮಾತರಂ’** ಗೀತೆಯೊಂದಿಗೆ ಗೌರವ ಸೂಚಿಸುವ ಮೂಲಕ ಸದನದ ಕಾರ್ಯಕಲಾಪಗಳು ವಿದ್ಯುಕ್ತವಾಗಿ ಆರಂಭಗೊಂಡಿತು.

## 1. ಭಾರತದ ಸಂವಿಧಾನ

### ಪೀಠಿಕೆ

ಮಾನ್ಯ ಸಭಾಪತಿಯವರು ಎಲ್ಲಾ ಶಾಸಕರಿಗೂ ಸಂವಿಧಾನದ ಪೀಠಿಕೆಯನ್ನು ಬೋಧಿಸಿದರು.

**“**ಭಾರತದ ಜನಗಳಾದ ನಾವು ಭಾರತವನ್ನು ಒಂದು ಸಾರ್ವಭೌಮ ಸಮಾಜವಾದಿ ಸರ್ವಧರ್ಮ ಸಮಭಾವದ ಪ್ರಜಾಸತ್ತಾತ್ಮಕ ಗಣರಾಜ್ಯವಾಗಿ ರಚಿಸಲು ಮತ್ತು ಅದರ ಸಮಸ್ತ ನಾಗರಿಕರಿಗೆ; ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯ: ವಿಚಾರ, ಅಭಿವ್ಯಕ್ತಿ, ವಿಶ್ವಾಸ, ಧರ್ಮಶ್ರದ್ಧೆ ಮತ್ತು ಉಪಾಸನಾ ಸ್ವಾತಂತ್ರ್ಯ: ಸ್ಥಾನಮಾನ ಹಾಗೂ ಅವಕಾಶ ಸಮಾನತೆ ದೊರೆಯುವಂತೆ ಮಾಡಲು ಮತ್ತು ವ್ಯಕ್ತಿ ಗೌರವವನ್ನು ರಾಷ್ಟ್ರದ ಏಕತೆಯನ್ನು ಹಾಗೂ ಅಖಂಡತೆಯನ್ನು ಸುನಿಶ್ಚಿತಗೊಳಿಸಿ ಅವರಲ್ಲಿ ಭ್ರಾತೃಭಾವನೆಯನ್ನು ವೃದ್ಧಿಗೊಳಿಸಲು ಶ್ರದ್ಧಾಪೂರ್ವಕ ಸಂಕಲ್ಪ ಮಾಡಿದವರಾಗಿ; ನಮ್ಮ ಸಂವಿಧಾನ ಸಭೆಯಲ್ಲಿ 1949ನೆಯ ಇಸವಿ ನವೆಂಬರ್ ತಿಂಗಳ ಇಪ್ಪತ್ತಾರನೆಯ ದಿನದಂದು ನಮ್ಮ ಸಂವಿಧಾನವನ್ನು ಅಂಗೀಕರಿಸಿ, ಅಧಿನಿಯಮಿಸಿ ಅರ್ಪಿಸಿಕೊಂಡಿದ್ದೇವೆ**”**.

## 2. ಸಂತಾಪ ಸೂಚನೆಗಳು

ಕಳೆದ ಅಧಿವೇಶನದ ನಂತರ ನಿಧನ ಹೊಂದಿದ ಈ ಕೆಳಕಂಡ ಗಣ್ಯರುಗಳಿಗೆ ಮಾನ್ಯ ಸಭಾಪತಿಯವರು ಸಂತಾಪ ಸೂಚನಾ ನಿರ್ಣಯವನ್ನು ಸದನದಲ್ಲಿ ಮಂಡಿಸಿದರು.

01. ಡಿ.ಬಿ. ಚಂದ್ರೇಗೌಡ, ಮಾಜಿ ಸಚಿವರು, ವಿಧಾನ ಪರಿಷತ್ತು, ವಿಧಾನ ಸಭೆ, ಲೋಕಸಭೆ ಮತ್ತು ರಾಜ್ಯ ಸಭೆಯ ಮಾಜಿ ಸದಸ್ಯರು

02. ಬಿ.ಎಸ್. ವಿಶ್ವನಾಥ್, ವಿಧಾನ ಪರಿಷತ್ತಿನ ಮಾಜಿ ಸದಸ್ಯರು

03. ಪ್ರೊ: ಎಂ.ಆರ್. ಸತ್ಯನಾರಾಯಣರಾವ್, ಹಿರಿಯ ವಿಜ್ಞಾನಿ

04. ಡಾ: ವಿ.ಎಸ್. ಅರುಣಾಚಲಂ, ಭಾರತೀಯ ಹಿರಿಯ ವಿಜ್ಞಾನಿ

05. ಡಾ:ಕಲ್ಯಂಪುಡಿ ರಾಧಾಕೃಷ್ಣರಾವ್, ಹಿರಿಯ ಗಣಿತ ಪಂಡಿತರು ಹಾಗೂ ಭಾರತದ ಸಂಖ್ಯಾಶಾಸ್ತ್ರಜ್ಞರು

06. ಡಾ: ಎಂ.ಎಸ್. ಸ್ವಾಮಿನಾಥನ್, ಹಿರಿಯ ಕೃಷಿ ವಿಜ್ಞಾನಿ ಹಾಗೂ ಹಸಿರು ಕ್ರಾಂತಿಯ ಹರಿಕಾರ

07. ಮಮತಾ ಗುಡೂರ, ಚಲನಚಿತ್ರ ಹಾಗೂ ರಂಗಭೂಮಿ ನಟಿ

08. ಡಾ: ಕಮಲಾ ಹೆಮ್ಮಿಗೆ, ಹಿರಿಯ ಲೇಖಕಿ ಹಾಗೂ ಸಂಶೋಧಕರು

09. ಜಿ.ಎನ್. ರಂಗನಾಥ್‌ರಾವ್, ಹಿರಿಯ ಪತ್ರಕರ್ತ ಹಾಗೂ ಪ್ರಜಾವಾಣಿ ಪತ್ರಿಕೆಯ ನಿವೃತ್ತ ಕಾರ್ಯನಿರ್ವಾಹಕ ಸಂಪಾದಕ

10. ಹನುಮಣ್ಣನಾಯಕ ದೊರೆ, ಗಂಗೂಬಾಯಿ ಹಾನಗಲ್ ಸಂಗೀತ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಹಾಗೂ ಹಿರಿಯ ಹಿಂದೂಸ್ತಾನಿ ಗಾಯಕ

ಮಾನ್ಯ ಸಭಾನಾಯಕರು ಸಂತಾಪ ಸೂಚನಾ ನಿರ್ಣಯವನ್ನು ಅನುಮೋದಿಸಿ ಮಾತನಾಡಿದರು.

ಮಾನ್ಯ ವಿರೋಧ ಪಕ್ಷದ ಸದಸ್ಯರಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿ ಅವರು ಸಂತಾಪ ಸೂಚನಾ ನಿರ್ಣಯಕ್ಕೆ ಸಹಮತಿಯನ್ನು ವ್ಯಕ್ತಪಡಿಸಿ ಮಾತನಾಡಿದರು.

ಮೃತರ ಆತ್ಮಕ್ಕೆ ಶಾಂತಿ ಕೋರಿ ಮೌನ ಆಚರಿಸಲಾಯಿತು. ಅವರ ಕುಟುಂಬದವರಿಗೆ ಸಂತಾಪ ಸೂಚನಾ ನಿರ್ಣಯದ ಪ್ರತಿಯನ್ನು ಕಳುಹಿಸಿಕೊಡಲಾಗುವುದೆಂದು ಮಾನ್ಯ ಸಭಾಪತಿಯವರು ತಿಳಿಸಿದರು.

ಬೆಳಗ್ಗೆ 11.41 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು**(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಬೆಳಗ್ಗೆ 11.52 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 3. ನಿಲುವಳಿ ಸೂಚನೆ

**ಶ್ರೀಯುತರುಗಳಾದ ಕೋಟ ಶ್ರೀನಿವಾಸ ಪೂಜಾರಿ, ಎನ್. ರವಿಕುಮಾರ್, ನಿರಾಣಿ ಹಣಮಂತ್ ರುದ್ರಪ್ಪ ಹಾಗೂ ಛಲವಾದಿ ಟಿ. ನಾರಾಯಣಸ್ವಾಮಿ** ಅವರುಗಳು ರಾಜ್ಯದಲ್ಲಿ ಉಂಟಾಗಿರುವ ಬರಗಾಲದ ಪರಿಸ್ಥಿತಿಗೆ ಮುಂಜಾಗ್ರತಾ ಕ್ರಮಕೈಗೊಳ್ಳಲು ವಿಫಲವಾಗಿರುವ ಬಗ್ಗೆ ನಿಯಮ 59ರಡಿ ಪ್ರಸ್ತಾಪಿಸಿದರು.

ಪ್ರಶ್ನೋತ್ತರ ನಂತರ ಪ್ರಸ್ತಾಪಿಸಲು ಅವಕಾಶ ನೀಡುವುದಾಗಿ ಮಾನ್ಯ ಸಭಾಪತಿಯವರು ತಿಳಿಸಿದರು.

## 4. ಪ್ರಶ್ನೋತ್ತರ

ದಿನಾಂಕ:04.12.2023ರಂದು ಸದನದಲ್ಲಿ ಉತ್ತರಿಸುವ ಸಮೂಹ–I ರ 1ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 1 (24)
2. 2(94)

3. 3(46)
4. 4(11)
5. 5(84)
6. 6(61)
7. 7(101)
8. 8(77)
9. 9(53+55)
10. 10(67+90)
11. 11(30)
12. 12(194)
13. 13(57)
14. 14(88)
15. 15(31)

ದಿನಾಂಕ:04.12.2023ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–Iರ 1ನೇ ಪಟ್ಟಿಯ ಒಟ್ಟು 92 ಪ್ರಶ್ನೆಗಳ ಪೈಕಿ 61 ಪ್ರಶ್ನೆಗಳಿಗೆ ಮಾನ್ಯ ಸಭಾನಾಯಕರು ಉತ್ತರಗಳನ್ನು ಮಂಡಿಸಿದರು.

**5. ನೂತನ ಸದಸ್ಯರುಗಳ ಪರಿಚಯ**

ಮಾನ್ಯ ಸರ್ಕಾರಿ ಮುಖ್ಯ ಸಚೇತಕರು ನೂತನವಾಗಿ ವಿಧಾನ ಪರಿಷತ್ತಿನ ಸದಸ್ಯರಾಗಿ ನಾಮನಿರ್ದೇಶಿತಗೊಂಡಿರುವ ಶ್ರೀಮತಿ ಉಮಾಶ್ರೀ, ಶ್ರೀ ಹೆಚ್.ಪಿ. ಸುಧಾಮ ದಾಸ್ ಹಾಗೂ ಶ್ರೀ ಎಂ.ಆರ್. ಸೀತಾರಾಂ ಅವರುಗಳನ್ನು ಸದನಕ್ಕೆ ಪರಿಚಯಿಸಿದರು.

## 6. ಶೂನ್ಯ ವೇಳೆ

1. **ಶ್ರೀ ಎಂ. ನಾಗರಾಜು** ಅವರು ರಾಜ್ಯದಲ್ಲಿ ರಕ್ತಹೀನತೆ ಮತ್ತು ಅಪೌಷ್ಠಿಕತೆಯ ನಿವಾರಣೆ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಉತ್ತರಿಸಿದರು.

2. **ಶ್ರೀ ಯು.ಬಿ. ವೆಂಕಟೇಶ್** ಅವರು ಅನಧಿಕೃತ ಸ್ಕ್ಯಾನಿಂಗ್ ಸೆಂಟರ್‌ಗಳಲ್ಲಿ ಅಕ್ರಮ ಗರ್ಭಪಾತ ಮತ್ತು ಹೆಣ್ಣು ಭ್ರೂಣ ಹತ್ಯೆ ನಡೆಸುತ್ತಿರುವುದನ್ನು ತಡೆಗಟ್ಟುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಉತ್ತರಿಸಿದರು.

3. **ಶ್ರೀಮತಿ ಹೇಮಲತಾ ನಾಯಕ್** ಅವರು ಆಂಧ್ರಪ್ರದೇಶ ಮೂಲದ ಬುಡ ಜಂಗಮ ವರ್ಗಕ್ಕೆ ಸೇರಿದ ಅಲೆಮಾರಿ ಕಲಾವಿದರುಗಳ ಜೀವನ ನಿರ್ವಹಣೆಗೆ ಅನುಕೂಲ ಕಲ್ಪಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 7. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

| **ಕ್ರಮ ಸಂಖ್ಯೆ** | **ವಿಧೇಯಕಗಳ ಪಟ್ಟಿ** | **ಒಪ್ಪಿಗೆಯನ್ನು ಪಡೆದ ದಿನಾಂಕ** | **ಒಪ್ಪಿಗೆಯನ್ನು ನೀಡಿದವರು** |
|---|---|---|---|
| **1.** | ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ) (ತಿದ್ದುಪಡಿ) ವಿಧೇಯಕ, 2023 **(ವಿಧೇಯಕ ಸಂ.01)** | 18.07.2023 | **ರಾಜ್ಯಪಾಲರು** |

| ಕ್ರಮ ಸಂಖ್ಯೆ | ವಿಧೇಯಕಗಳ ಪಟ್ಟಿ | ಒಪ್ಪಿಗೆಯನ್ನು ಪಡೆದ ದಿನಾಂಕ | ಒಪ್ಪಿಗೆಯನ್ನು ನೀಡಿದವರು |
|---|---|---|---|
| | THE KARNATAKA LEGISLATURE (PREVENTION OF DISQUALIFICATION) (AMENDMENT) BILL, 2023 | | |
| **2.** | ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2023 **(ವಿಧೇಯಕ ಸಂಖ್ಯೆ–06)**<br>THE KARNATAKA GOODS AND SERVICES TAX (AMENDMENT) BILL, 2023 | 18.07.2023 | ರಾಜ್ಯಪಾಲರು |
| **3.** | ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ,2023 **(ವಿಧೇಯಕ ಸಂ.05)**<br>THE KARNATAKA TRANSPARENCY PUBLIC PROCUREMENTS (AMENDMENT) BILL, 2023 | 18.07.2023 | ರಾಜ್ಯಪಾಲರು |
| **4.** | ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2023 **(ವಿಧೇಯಕ ಸಂಖ್ಯೆ–07)**<br>THE KARNATAKA STATE ROAD SAFETY AUTHORITY (AMENDMENT) BILL, 2023 | 19.07.2023 | ರಾಜ್ಯಪಾಲರು |
| **5.** | ಕರ್ನಾಟಕ ಅಗ್ನಿಶಾಮಕ ದಳ (ತಿದ್ದುಪಡಿ) ವಿಧೇಯಕ, 2023 **(ವಿಧೇಯಕ ಸಂ.03)** | 19.07.2023 | ರಾಜ್ಯಪಾಲರು |

| ಕ್ರಮ ಸಂಖ್ಯೆ | ವಿಧೇಯಕಗಳ ಪಟ್ಟಿ | ಒಪ್ಪಿಗೆಯನ್ನು ಪಡೆದ ದಿನಾಂಕ | ಒಪ್ಪಿಗೆಯನ್ನು ನೀಡಿದವರು |
|---|---|---|---|
| | THE KARNATAKA FIRE FORCE (AMENDMENT) BILL, 2023 | | |
| 6 | ಕರ್ನಾಟಕ ಸರ್ಕಾರಿ ವ್ಯಾಜ್ಯ ನಿರ್ವಹಣೆ ವಿಧೇಯಕ, 2023 (ವಿಧೇಯಕ ಸಂಖ್ಯೆ–14)<br>THE KARNATAKA CONDUCT OF GOVERNMENT LITIGATION BILL, 2023 | 20.07.2023 | ರಾಜ್ಯಪಾಲರು |

## 8. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸಭಾನಾಯಕರು ಹಾಗೂ ಸಂಬಂಧಪಟ್ಟ ಸಚಿವರು ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ ಒಂದನೇ ಮತ್ತು ಎರಡನೇ ಪಟ್ಟಿಯನ್ನು ಸದನದಲ್ಲಿ ಮಂಡಿಸಿದರು.

ಮಧ್ಯಾಹ್ನ 1.55 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರಾದ **ಶ್ರೀ ಎಂ.ಕೆ. ಪ್ರಾಣೇಶ್** ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

## ನಿಲುವಳಿ ಸೂಚನೆ ಪ್ರಸ್ತಾವ

ಮಾನ್ಯ ಸದಸ್ಯರಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿಯವರು ಪ್ರಸ್ತಾಪಿಸಿದ ನಿಲುವಳಿ ಸೂಚನೆಯನ್ನು ನಿಯಮಾವಳಿಗಳ ಅನ್ವಯ ಪರಿಶೀಲಿಸಿ ನಿಯಮ 68ಕ್ಕೆ ಪರಿವರ್ತಿಸಿ ಚರ್ಚಿಸಲು ಅನುಮತಿ ನೀಡಲಾಗಿದೆ ಎಂದು ಮಾನ್ಯ ಸಭಾಪತಿಯವರು ತಿಳಿಸಿದರು.

ಮಧ್ಯಾಹ್ನ 2.00 ಗಂಟೆಗೆ ಸದನವನ್ನು ಮುಂದೂಡಿ 03.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಪ್ರಕಟಿಸಿದರು.

ಮಧ್ಯಾಹ್ನ 3.29 ಗಂಟೆಗೆ ಮಾನ್ಯ ಸಭಾಪತಿಯವರ **(ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 9. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

ಶ್ರೀ ಕೋಟ ಶ್ರೀನಿವಾಸ ಪೂಜಾರಿ ಅವರು ರಾಜ್ಯದಲ್ಲಿ ಉಂಟಾಗಿರುವ ಬರಗಾಲದ ಪರಿಸ್ಥಿತಿಯನ್ನು ನಿಭಾಯಿಸಲು ಮುಂಜಾಗ್ರತಾ ಕ್ರಮಕೈಗೊಳ್ಳುವಲ್ಲಿ ಸರ್ಕಾರ ವಿಫಲವಾಗಿರುವ ಕುರಿತು ಚರ್ಚೆಯನ್ನು ಪ್ರಾರಂಭಿಸಿದರು.

## 10. ಪ್ರಕಟಣೆಗಳು

ಮಾನ್ಯ ಸಭಾಪತಿಯವರು ಈ ಕೆಳಕಂಡ ಪ್ರಕಟಣೆಗಳನ್ನು ಪ್ರಕಟಿಸಿದರು.

1. ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಲಿಕೆಯ ನಿಯಮ 9ರ ಮೇರೆಗೆ ಮಾನ್ಯ ಸಭಾಪತಿಯವರ ಮತ್ತು ಮಾನ್ಯ ಉಪ ಸಭಾಪತಿಯವರ ಗೈರು ಹಾಜರಿಯಲ್ಲಿ ಮಾನ್ಯ ಸಭಾಪತಿಯವರ ಸ್ಥಾನದಲ್ಲಿ ಪದಧಾರಣ ಮಾಡಲು ಈ ಮುಂದಿನ ಮಾನ್ಯ ಶಾಸಕರುಗಳನ್ನು ನಾಮನಿರ್ದೇಶನ ಮಾಡಲಾಗಿದೆ.

   **ಶ್ರೀಮತಿ/ಶ್ರೀಯುತರುಗಳಾದ:**

   1. ಶಶೀಲ್ ಜಿ. ನಮೋಶಿ
   2. ಡಾ: ತೇಜಸ್ವಿನಿ ಗೌಡ
   3. ಮರಿತಿಬ್ಬೇಗೌಡ
   4. ಮಂಜುನಾಥ್ ಭಂಡಾರಿ

2. ನಮ್ಮ ರಾಜ್ಯ ಕರ್ನಾಟಕ ಎಂದು ನಾಮಕರಣಗೊಂಡು 50 ವರ್ಷಗಳು ಪೂರ್ಣಗೊಂಡಿರುವ ಈ ಸುವರ್ಣ ಸಂಭ್ರಮದ ಪ್ರಯುಕ್ತ ಬೆಳಗಾವಿಯ ಸುವರ್ಣ ವಿಧಾನಸೌಧ ಕಟ್ಟಡಕ್ಕೆ ವಿವಿಧ ರಂಗಿನ ವಿಶೇಷ ವಿನ್ಯಾಸವುಳ್ಳ ಶಾಶ್ವತ ದೀಪಾಲಂಕಾರವನ್ನು ಅಳವಡಿಸಲಾಗಿರುತ್ತದೆ. ಇಂದು ದಿನಾಂಕ:04.12.2023 ರಂದು ಸಂಜೆ 7.00 ಗಂಟೆಗೆ ಸುವರ್ಣ ವಿಧಾನಸೌಧದ ಪಶ್ಚಿಮದ್ವಾರದ (ಗ್ರ್ಯಾಂಡ್ ಸ್ಟೆಪ್ಸ್) ಮೆಟ್ಟಿಲುಗಳ ಮುಂಭಾಗದಲ್ಲಿ ಸನ್ಮಾನ್ಯ ಸಭಾಪತಿಗಳು ಹಾಗೂ ಸನ್ಮಾನ್ಯ ಸಭಾಧ್ಯಕ್ಷರ ಉಪಸ್ಥಿತಿಯಲ್ಲಿ ಸನ್ಮಾನ್ಯ

ಮುಖ್ಯಮಂತ್ರಿಗಳು ಶಾಶ್ವತ ದೀಪಾಲಂಕಾರವನ್ನು ಉದ್ಘಾಟಿಸಲಿದ್ದಾರೆ. ಸದರಿ ಸಮಾರಂಭದಲ್ಲಿ ಎಲ್ಲಾ ಮಾನ್ಯ ಶಾಸಕರುಗಳು ಪಾಲ್ಗೊಳ್ಳಬೇಕೆಂದು ತಿಳಿಸಲಾಗಿದೆ.

## 11. ನಿಯಮ 330ರ ಮೇರೆಗೆ

1. **ಶ್ರೀಯುತರುಗಳಾದ ಮಧು ಜಿ. ಮಾದೇಗೌಡ, ಮರಿತಿಬ್ಬೇಗೌಡ, ಎಸ್.ಎಲ್. ಭೋಜೇಗೌಡ ಹಾಗೂ ಶಶೀಲ್ ಜಿ. ನಮೋಶಿ** ಅವರುಗಳು 2016ನೇ ಸಾಲಿನಿಂದ ಅನುದಾನಿತ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಬೋಧಕ/ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಪ್ರಸ್ತಾಪಿಸಿದರು.

   ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

   1. ಡಾ: ವೈ.ಎ. ನಾರಾಯಣಸ್ವಾಮಿ
   2. ಶ್ರೀ ಸುನೀಲ್ ವಲ್ಯಾಪುರೆ
   3. ಶ್ರೀ ಕೆ. ಅಬ್ದುಲ್ ಜಬ್ಬಾರ್
   4. ಶ್ರೀ ಎಸ್.ವ್ಹಿ. ಸಂಕನೂರ
   5. ಡಾ: ತೇಜಸ್ವಿನಿಗೌಡ

   ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖಾ ಸಚಿವರು ಉತ್ತರಿಸಿದರು.

   ಸದನವನ್ನು ಮಧ್ಯಾಹ್ನ 4.50 ಗಂಟೆಯಲ್ಲಿ ಮುಂದೂಡಿ ದಿನಾಂಕ:05.12.2023ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು(ಶ್ರೀ **ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೊಂದನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಮಂಗಳವಾರ, ದಿನಾಂಕ:05.12.2023**

**(02)**

ದಿನಾಂಕ:05.12.2023 ರಂದು ಬೆಳಗ್ಗೆ 11.02 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಸಂತಾಪ ಸೂಚನೆಗಳು

**ಕ್ಯಾಪ್ಟನ್ ಎಂ.ವಿ.ಪ್ರಾಂಜಲ್ ಹಾಗೂ ವೀರ ಯೋಧರುಗಳು** ದಿನಾಂಕ: 22.11.2023ರಂದು ಹಾಗೂ ಐತಿಹಾಸಿಕ ಮೈಸೂರು ದಸರಾದ ಕೇಂದ್ರ ಬಿಂದುವಾಗಿದ್ದ ಗಜರಾಜ ವೀರ **"ಅರ್ಜುನ"** ದಿನಾಂಕ:04.12.2023ರಂದು ನಿಧನ ಹೊಂದಿದ್ದು, ಮಾನ್ಯ ಸಭಾಪತಿಯವರು ಸಂತಾಪ ಸೂಚನಾ ನಿರ್ಣಯವನ್ನು ಮಂಡಿಸಿದರು.

ಮಾನ್ಯ ಸಭಾನಾಯಕರು ಮಾನ್ಯ ಸಭಾಪತಿಯವರು ಮಂಡಿಸಿದ ಸಂತಾಪ ಸೂಚನಾ ನಿರ್ಣಯವನ್ನು ಅನುಮೋದಿಸಿ ಮಾತನಾಡಿದರು.

ಮಾನ್ಯ ವಿರೋಧ ಪಕ್ಷದ ಸದಸ್ಯರಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿ ಅವರು ಮಾನ್ಯ ಸಭಾಪತಿಯವರು ಮಂಡಿಸಿದ ಸಂತಾಪ ಸೂಚನಾ ನಿರ್ಣಯವನ್ನು ಅನುಮೋದಿಸಿ ಮಾತನಾಡಿದರು.

ಮೃತರುಗಳ ಆತ್ಮಕ್ಕೆ ಶಾಂತಿ ಕೋರಿ ಮೌನ ಆಚರಿಸಲಾಯಿತು.

## 2. ಪ್ರಶ್ನೋತ್ತರ

ದಿನಾಂಕ:05.12.2023ರಂದು ಸದನದಲ್ಲಿ ಉತ್ತರಿಸುವ ಸಮೂಹ–II ರ 2ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 16 (19)
2. 29(124)
3. 17(115)
4. 18(161)
5. 20(180)
6. 22(132)
7. 23(158)
8. 24(122)
9. 25(185)
10. 26(116)
11. 27(109)
12. 28(169)
13. 30(134) ಮಾನ್ಯ ಶಾಸಕರಾದ ಶ್ರೀ ಪ್ರಕಾಶ್ ಕೆ. ರಾಥೋಡ್ ಅವರ ಪರವಾಗಿ ಶ್ರೀ ಅರವಿಂದ ಕುಮಾರ್ ಅರಳಿ
14. 19(174) ತಡೆಹಿಡಿಯಲಾಯಿತು
15. 21(152) ತಡೆಹಿಡಿಯಲಾಯಿತು

ದಿನಾಂಕ:05.12.2023ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IIರ 2ನೇ ಪಟ್ಟಿಯ ಒಟ್ಟು 73 ಪ್ರಶ್ನೆಗಳ ಪೈಕಿ 58 ಪ್ರಶ್ನೆಗಳಿಗೆ ಮಾನ್ಯ ಸಭಾನಾಯಕರು ಉತ್ತರಗಳನ್ನು ಮಂಡಿಸಿದರು.

### 3. ಶೂನ್ಯ ವೇಳೆ

1. **ಶ್ರೀ ಮರಿತಿಬ್ಬೇಗೌಡ** ಅವರು ಶಾಲಾ ಶಿಕ್ಷಕರನ್ನು ಬಿ.ಎಲ್.ಓ.ಗಳಾಗಿ ನಿಯೋಜಿಸಿರುವುದರಿಂದ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ

ತೊಂದರೆಯಾಗುತ್ತಿದ್ದು ಪರೀಕ್ಷೆಗಳು ಸಮೀಪಿಸುತ್ತಿರುವುದರಿಂದ ಅವರುಗಳನ್ನು ಬಿಡುಗಡೆಗೊಳಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಹಕಾರ ಸಚಿವರು ತಿಳಿಸಿದರು.

2. **ಶ್ರೀ ಯು.ಬಿ. ವೆಂಕಟೇಶ್** ಅವರು ರಾಜ್ಯದಲ್ಲಿ ಮಕ್ಕಳ ಮಾರಾಟ ಹಾಗೂ ನಾಪತ್ತೆ ಪ್ರಕರಣಗಳನ್ನು ತಡೆಗಟ್ಟಲು ಸೂಕ್ತ ಕಾನೂನು ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಹಕಾರ ಸಚಿವರು ತಿಳಿಸಿದರು.

3. **ಶ್ರೀ ಗೋವಿಂದರಾಜು** ಅವರು ಕೋಲಾರ ಜಿಲ್ಲೆಯಲ್ಲಿ ಅಕ್ರಮ ಮದ್ಯ ಮತ್ತು ಮಾದಕ ವಸ್ತುಗಳ ಮಾರಾಟ ಪತ್ತೆ ಹಚ್ಚುವ ಮತ್ತು ಮೆಡಿಕಲ್ ಶಾಪ್‌ಗಳ ನಿರ್ವಹಣೆಗೆ ಲೈಸೆನ್ಸ್ ಪಡೆದಿರುವ ಸಂಬಂಧ ತನಿಖೆ ನಡೆಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಹಕಾರ ಸಚಿವರು ತಿಳಿಸಿದರು.

4. **ಶ್ರೀ ಎಂ. ನಾಗರಾಜು** ಅವರು ಬೆಂಗಳೂರು ನಗರ ಹಾಗೂ ಗ್ರಾಮಾಂತರ ಪ್ರದೇಶದ ವ್ಯಾಪ್ತಿಯಲ್ಲಿರುವ ಶಾಲೆಗಳಲ್ಲಿ ಹುಸಿ ಬಾಂಬ್ ಬೆದರಿಕೆ ಕರೆ ಸ್ವೀಕರಿಸಿದ್ದು, ತನಿಖೆ ನಡೆಸುವಲ್ಲಿ ವಿಳಂಬವಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ಡಿ.ಎಸ್. ಅರುಣ್** ಅವರು ಹೊಸನಗರ ತಾಲ್ಲೂಕಿನ ನಗರ ಹೋಬಳಿಯ ಬಿದನೂರಿನ ಕೊಪ್ಪಲ ಮಠದಲ್ಲಿರುವ ಕೆಳದಿ ಅರಸರ ಐತಿಹಾಸಿಕ ಸ್ಮಾರಕಗಳನ್ನು ಸಂರಕ್ಷಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಂದಾಯ ಸಚಿವರು ಮಾನ್ಯ ಪ್ರವಾಸೋದ್ಯಮ ಸಚಿವರೊಂದಿಗೆ ಸಮಾಲೋಚಿಸಿ ಉತ್ತರ ಕೊಡಿಸುವುದಾಗಿ ತಿಳಿಸಿದರು.

6. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಬಾಗಲಕೋಟೆ ಜಿಲ್ಲೆಯ ತೇರದಾಳ ತಾಲ್ಲೂಕಿನ ಮಹಾಲಿಂಗಪೂರ ಪಟ್ಟಣವನ್ನು ತಾಲ್ಲೂಕು ಕೇಂದ್ರವನ್ನಾಗಿ ಘೋಷಿಸುವಂತೆ ಕೋರಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಂದಾಯ ಸಚಿವರು ಉತ್ತರ ಒದಗಿಸುವುದಾಗಿ ತಿಳಿಸಿದರು.

7. **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರು ಡಯಾಲಿಸಿಸ್ ಸಿಬ್ಬಂದಿಗಳು ESKEG ಸಂಸ್ಥೆಯವರು 20 ತಿಂಗಳಿನಿಂದ PF ಮತ್ತು ESI ಸೌಲಭ್ಯಗಳನ್ನು ನೀಡದಿರುವುದರಿಂದ ಅನಿರ್ದಿಷ್ಟ ಪ್ರತಿಭಟನೆ ನಡೆಸುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ಮಂಜುನಾಥ್ ಭಂಡಾರಿ** ಅವರು 2016ರಲ್ಲಿ ತಿದ್ದುಪಡಿಯಾಗಿದ್ದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆಗೆ ಸೂಕ್ತ ನಿಯಮಗಳನ್ನು ರೂಪಿಸದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ)** ಅವರು ಕೊಡಗು ಜಿಲ್ಲೆಯ ಮಾಂದಲಪಟ್ಟಿ ಪ್ರವಾಸ ತಾಣವನ್ನು ಅಭಿವೃದ್ಧಿಗೊಳಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

10. **ಶ್ರೀ ಕೆ.ಎಸ್. ನವೀನ್** ಅವರು ಬೆಳಗಾವಿಯ ಭಾರತೀಯ ಜನತಾ ಪಕ್ಷದ ಕಾರ್ಯಕರ್ತರಾದ ಶ್ರೀ ಪೃಥ್ವಿಸಿಂಗ್‌ರವರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿರುವವರ ವಿರುದ್ಧ ಯಾವುದೇ ಕಾನೂನು ಕ್ರಮ ಜರುಗಿಸದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

11. **ಶ್ರೀ ಎಸ್.ಎಲ್. ಭೋಜೇಗೌಡ** ಅವರು ಚಿಕ್ಕಮಗಳೂರು ನಗರದಲ್ಲಿ ವಕೀಲರ ಮೇಲೆ ಪೊಲೀಸರು ಹಲ್ಲೆ ನಡೆಸಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ಸಚಿವರು ತಿಳಿಸಿದರು.

## 4. ನಿಲುವಳಿ ಸೂಚನೆ

**ಮಾನ್ಯ ಸದಸ್ಯರಾದ ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರು ಕೃಷ್ಣ, ತುಂಗಭದ್ರ, ಮಲಪ್ರಭಾ, ಘಟಪ್ರಭಾ ಮಹದಾಯಿ ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸದಿರುವ ಬಗ್ಗೆ ನಿಯಮ 59ರಡಿ ಪ್ರಸ್ತಾಪಿಸಿದರು.

ಮಾನ್ಯ ಸಭಾಪತಿಯವರು ನಿಲುವಳಿ ಸೂಚನೆಯನ್ನು ನಿಯಮ 68ರ ಅಡಿಯಲ್ಲಿ ಪರಿವರ್ತಿಸಿ ಚರ್ಚೆಗೆ ಅವಕಾಶ ನೀಡುವುದಾಗಿ ತಿಳಿಸಿದರು.

## 5. ಸದಸ್ಯರ ಹೇಳಿಕೆ

ಮಾಜಿ ವಿರೋಧ ಪಕ್ಷದ ನಾಯಕರಾದ ಶ್ರೀ ಬಿ.ಕೆ. ಹರಿಪ್ರಸಾದ್ ಅವರು ಮಾನ್ಯ ಸಭಾಪತಿಯವರ ಅನುಮತಿ ಪಡೆದು ಮಾತನಾಡಿದರು.

## 6. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಗೋವಿಂದರಾಜು** ಅವರು ಕೋಲಾರ ಜಿಲ್ಲೆಯ ಆರು ತಾಲ್ಲೂಕುಗಳಲ್ಲಿ ಬೆಳೆ ಹಾನಿಯಿಂದ ನಷ್ಟ ಉಂಟಾಗಿರುವ ಕುರಿತು ಮಾನ್ಯ ಕೃಷಿ ಸಚಿವರ ಗಮನ ಸೆಳೆದರು.

ಮಾನ್ಯ ಕೃಷಿ ಸಚಿವರು ಉತ್ತರಿಸಿದರು.

ಮಧ್ಯಾಹ್ನ 1.21 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿಯವರ ಪೀಠದಲ್ಲಿ ಆಸೀನರಾದರು.

2. **ಶ್ರೀಯುತರುಗಳಾದ ಸಿ.ಎನ್. ಮಂಜೇಗೌಡ ಹಾಗೂ ಕೆ.ಎ. ತಿಪ್ಪೇಸ್ವಾಮಿ** ಅವರುಗಳು ರಾಜ್ಯದಲ್ಲಿ ಹಂಸಧ್ವನಿ ಕಿವುಡ ಮತ್ತು ಮೂಕ ಮಕ್ಕಳ ವಸತಿ ಶಾಲೆಯನ್ನು ಪ್ರಾರಂಭಿಸದಿರುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಗಮನ ಸೆಳೆದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಶ್ರೀ ಎಸ್.ಎಲ್. ಭೋಜೇಗೌಡ
2. ಶ್ರೀ ವೈ.ಎಂ. ಸತೀಶ್
3. ಡಾ: ತೇಜಸ್ವಿನಿ ಗೌಡ
4. ಶ್ರೀ ಎನ್. ರವಿಕುಮಾರ್
5. ಶ್ರೀ ಯು.ಬಿ. ವೆಂಕಟೇಶ್
6. ಶ್ರೀಮತಿ ಉಮಾಶ್ರೀ
7. ಶ್ರೀ ಕೆ.ಎಸ್. ನವೀನ್
8. ಶ್ರೀ ಶಶೀಲ್ ಜಿ. ನಮೋಶಿ
9. ಶ್ರೀ ಗೋವಿಂದರಾಜು

ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಉತ್ತರಿಸಿದರು.

ಮಧ್ಯಾಹ್ನ 2.15 ಗಂಟೆಗೆ ಸದನವನ್ನು ಮುಂದೂಡಿ ಸಂಜೆ 3.15 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.31 ಗಂಟೆಗೆ ಮಾನ್ಯ ಉಪ ಸಭಾಪತಿಯವರ **(ಶ್ರೀ ಎಂ.ಕೆ. ಪ್ರಾಣೇಶ್)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 7. ನಿಯಮ 330ರ ಮೇರೆಗೆ

**1.** **ಡಾ: ವೈ.ಎ. ನಾರಾಯಣಸ್ವಾಮಿ** ಅವರು ರಾಜ್ಯದಲ್ಲಿನ ಸರ್ಕಾರಿ ನೌಕರರುಗಳಿಗೆ 7ನೇ ವೇತನ ಆಯೋಗದ ವರದಿಯನ್ನು ಶೀಘ್ರವಾಗಿ ಅನುಷ್ಠಾನಗೊಳಿಸುವ ಕುರಿತು ಪ್ರಸ್ತಾಪಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಶ್ರೀ ಎಸ್.ವ್ಹಿ. ಸಂಕನೂರ
2. ಶ್ರೀ ಅಡಗೂರ್ ಹೆಚ್. ವಿಶ್ವನಾಥ್
3. ಶ್ರೀ ಎಸ್.ಎಲ್. ಭೋಜೇಗೌಡ
4. ಶ್ರೀ ಚಿದಾನಂದ್ ಎಂ. ಗೌಡ
5. ಶ್ರೀ ಶಶೀಲ್ ಜಿ. ನಮೋಶಿ
6. ಡಾ: ತೇಜಸ್ವಿನಿ ಗೌಡ
7. ಶ್ರೀ ನಿರಾಣಿ ಹಣಮಂತ್ ರುದ್ರಪ್ಪ
8. ಶ್ರೀ ಎಂ.ಎಲ್. ಅನಿಲ್ ಕುಮಾರ್

ಮಾನ್ಯ ಸಭಾನಾಯಕರು ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಉತ್ತರಿಸಿದರು.

ಮಾನ್ಯ ಸದಸ್ಯರು ಸ್ಪಷ್ಟೀಕರಣ ಕೋರಿದರು.

1. ಡಾ: ವೈ.ಎ. ನಾರಾಯಣಸ್ವಾಮಿ
2. ಶ್ರೀ ಮರಿತಿಬ್ಬೇಗೌಡ

ಸಂಜೆ 4.52 ಗಂಟೆಯಲ್ಲಿ **ಶ್ರೀ ಶಶೀಲ್ ಜಿ. ನಮೋಶಿ** ಅವರು ಮಾನ್ಯ ಸಭಾಪತಿಯವರ ಪೀಠದಲ್ಲಿ ಆಸೀನರಾದರು.

ಸಂಜೆ 5.00 ಗಂಟೆಯಲ್ಲಿ ಮಾನ್ಯ ಸಭಾಪತಿಯವರ ಪೀಠದಲ್ಲಿ **ಶ್ರೀ ಎಂ.ಕೆ. ಪ್ರಾಣೇಶ್** ಅವರು ಆಸೀನರಾದರು.

ಮಾನ್ಯ ಸಚಿವರು ಸ್ಪಷ್ಟೀಕರಣ ನೀಡಿದರು.

**"ಧರಣಿ"**

7ನೇ ವೇತನ ಆಯೋಗದಿಂದ ಶೀಘ್ರವಾಗಿ ವರದಿಯನ್ನು ಪಡೆದು ಅನುಷ್ಠಾನಗೊಳಿಸಬೇಕೆಂದು ಸರ್ಕಾರವನ್ನು ಒತ್ತಾಯಿಸಿ ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಬಾವಿಗೆ ಬಂದು ಧರಣಿ ನಿರತರಾದರು.

ಸದನವನ್ನು ಸಂಜೆ 5.17 ಗಂಟೆಯಲ್ಲಿ ಮುಂದೂಡಿ ದಿನಾಂಕ:06.12.2023ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೊಂದನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

ಬುಧವಾರ, ದಿನಾಂಕ:06.12.2023

**(03)**

ದಿನಾಂಕ:06.12.2023 ರಂದು ಬೆಳಗ್ಗೆ 11.06 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. "ಧರಣಿ"

ದಿನಾಂಕ:05.12.2023ರಂದು ಡಾ: ವೈ.ಎ. ನಾರಾಯಣಸ್ವಾಮಿ ಅವರು ರಾಜ್ಯದಲ್ಲಿನ ಸರ್ಕಾರಿ ನೌಕರರುಗಳಿಗೆ 7ನೇ ವೇತನ ಆಯೋಗದ ವರದಿಯನ್ನು ಶೀಘ್ರವಾಗಿ ಅನುಷ್ಠಾನಗೊಳಿಸುವ ಕುರಿತು ನಿಯಮ 330ರ ಅಡಿಯಲ್ಲಿ ಪ್ರಸ್ತಾಪಿಸಿದ ವಿಷಯಕ್ಕೆ ಸಚಿವರು ನೀಡಿದ ಉತ್ತರವನ್ನು ಒಪ್ಪದೆ ಮಾನ್ಯ ವಿರೋಧ ಪಕ್ಷದ ಶಾಸಕರುಗಳು ಸದನದ ಬಾವಿಯಲ್ಲಿ ಧರಣಿ ಮುಂದುವರೆಸಿದರು.

ಬೆಳಗ್ಗೆ 11.10 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಬೆಳಗ್ಗೆ 11.25 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## "ಧರಣಿ"

**ಡಾ: ತೇಜಸ್ವಿನಿಗೌಡ ಹಾಗೂ ಇತರರು** ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವಂತೆ ಕೋರಿದರು.

ಮಾನ್ಯ ಮುಖ್ಯಮಂತ್ರಿಯವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾಪತಿಯವರು ತಿಳಿಸಿದರು.

ಧರಣಿಯನ್ನು ಹಿಂಪಡೆದು ವಿರೋಧ ಪಕ್ಷದ ಮಾನ್ಯ ಶಾಸಕರುಗಳು ತಮ್ಮ ಸ್ಥಾನಗಳಿಗೆ ತೆರಳಿದರು.

**2. ಪ್ರಕಟಣೆ**

**ಮಾನ್ಯ ಸಭಾಪತಿಯವರು ಈ ಕೆಳಕಂಡ ಪ್ರಕಟಣೆಯನ್ನು ಪ್ರಕಟಿಸಿದರು.**

ನಮ್ಮ ಭೂಮಂಡಲದಲ್ಲಿ ಪ್ರಸ್ತುತ ತಾಪಮಾನ ದಿನೇದಿನೇ ಹೆಚ್ಚುತ್ತಿದ್ದು, ಇದರಿಂದ ಭೂಮಿಯ ಮೇಲಿನ ಪರಿಸರಕ್ಕೆ ತೀವ್ರವಾದ ಹಾನಿಯುಂಟಾಗುತ್ತಿದೆ. ಆದುದರಿಂದ, ಪ್ರಸಕ್ತ ಸಂದರ್ಭದಲ್ಲಿ ಹಸಿರನ್ನು ಬೆಳೆಸಿ, ಪರಿಸರವನ್ನು ಉಳಿಸುವ ಅನಿವಾರ್ಯತೆ ಉಂಟಾಗುತ್ತಿದೆ. ಪರಿಸರವನ್ನು ಉಳಿಸುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿ ಹಾಗೂ ಕರ್ತವ್ಯವೂ ಹೌದು. ಅದೇ ರೀತಿ ಜನಪ್ರತಿನಿಧಿಗಳಾದ ನಾವು ಈ ನಿಟ್ಟಿನಲ್ಲಿ ಉತ್ತಮ ಕಾರ್ಯಗಳನ್ನು ಕೈಗೊಳ್ಳುವ ಮೂಲಕ ನಾಗರಿಕರಲ್ಲಿ ಜಾಗೃತಿಯನ್ನು ಮೂಡಿಸಬೇಕಾಗಿದೆ.

ಈ ಹಿನ್ನೆಲೆಯಲ್ಲಿ ಬೆಳಗಾವಿಯ ಸುವರ್ಣ ವಿಧಾನಸೌಧದ ಉತ್ತರ ಭಾಗದ ದ್ವಾರದ ಮುಂಭಾಗದಲ್ಲಿ ಮಾನ್ಯ ಶಾಸಕರುಗಳು ಶ್ರೀಗಂಧ, ಸಂಪಿಗೆ, ಅರಳಿ, ಬೇವು ಮುಂತಾದ ಜಾತಿಯ ಸಸಿಗಳನ್ನು ನೆಡಲು ಅರಣ್ಯ ಇಲಾಖೆಯ ಮೂಲಕ ಅವಕಾಶ ಮಾಡಿಕೊಡಲಾಗಿದೆ.

ಆದುದರಿಂದ, ಎಲ್ಲಾ ಮಾನ್ಯ ಸದಸ್ಯರುಗಳು ಸುವರ್ಣ ವಿಧಾನಸೌಧದ ಉತ್ತರ ಭಾಗದಲ್ಲಿ ನಿರ್ಮಿಸಲಾಗಿರುವ ಕೌಂಟರ್ ಬಳಿ ತಮ್ಮ ಆಪ್ತ ಸಹಾಯಕರ ಮೂಲಕ ತಮಗೆ ಸೂಕ್ತವಾದ ಸಮಯದೊಂದಿಗೆ ತಮ್ಮ ಹೆಸರನ್ನು ನೊಂದಾಯಿಸಿಕೊಂಡು ಸಸಿಯನ್ನು ನೆಡಲು ಕೋರಲಾಗಿದೆ.

ಅಂತಹ ಗಿಡಗಳನ್ನು ಸದಸ್ಯರ ಹೆಸರಿನಲ್ಲಿ ಸಂರಕ್ಷಿಸಿ ಪೋಷಿಸಲಾಗುವುದು.

## 3. ಪ್ರಶ್ನೋತ್ತರ

ದಿನಾಂಕ:06.12.2023ರಂದು ಸದನದಲ್ಲಿ ಉತ್ತರಿಸುವ ಸಮೂಹ–IIIರ 3ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 31 (223)
2. 32(227)
3. 33(314)
4. 34(232)

ಮಧ್ಯಾಹ್ನ 12.17 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿಯವರ ಪೀಠದಲ್ಲಿ ಆಸೀನರಾದರು.

5. 36(215)
6. 37(252) ಕಾಲಾವಕಾಶ
7. 38(200)
8. 39(300)
9. 40(400) ಶ್ರೀ ಬಿ.ಎಂ. ಫಾರೂಖ್ ಪರವಾಗಿ ಶ್ರೀ ಕೆ. ಅಬ್ದುಲ್ ಜಬ್ಬರ್
10. 41(216)
11. 42(320)

ಮಧ್ಯಾಹ್ನ 12.44 ಗಂಟೆಯಲ್ಲಿ ಮಾನ್ಯ ಸಭಾಪತಿಯವರು (ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ) ಸಭಾಪತಿ ಪೀಠದಲ್ಲಿ ಆಸೀನರಾದರು.

12. 43(279)
13. 44(237)

14. 45(305)

15. 35(316) ತಡೆಹಿಡಿಯಲಾಯಿತು

ದಿನಾಂಕ:06.12.2023ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IIIರ 3ನೇ ಪಟ್ಟಿಯ ಒಟ್ಟು 121 ಪ್ರಶ್ನೆಗಳ ಪೈಕಿ 91 ಪ್ರಶ್ನೆಗಳಿಗೆ ಮಾನ್ಯ ಸಭಾನಾಯಕರು ಉತ್ತರಗಳನ್ನು ಮಂಡಿಸಿದರು.

**4. ಶೂನ್ಯ ವೇಳೆ**

**1.** **ಶ್ರೀ ಕೇಶವ ಪ್ರಸಾದ್** ಅವರು ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ಹಾಸ್ಟೆಲ್‌ಗಳಲ್ಲಿರುವ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ವರ್ಷದ ಶುಚಿ ಸಂಭ್ರಮ ಕಿಟ್‌ಗಳನ್ನು ವಿತರಿಸದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾ ನಾಯಕರು ತಿಳಿಸಿದರು.

**2.** **ಶ್ರೀ ಎಸ್.ವ್ಹಿ. ಸಂಕನೂರ** ಅವರು ಧಾರವಾಡ ಜಿಲ್ಲೆ ಯರಿಕೊಪ್ಪ ಗ್ರಾಮ ಪಂಚಾಯತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶ್ರೀ ನಾಗರಾಜ ಗಿಣವಾಲರವರು ಆರ.ಟಿ.ಐ ಕಾರ್ಯಕರ್ತನು ಮಾಹಿತಿ ಕೋರಿ ಕಿರುಕುಳ ನೀಡುತ್ತಿದ್ದರಿಂದ ವಿಷ ಸೇವಿಸಿದ್ದು, ಸಂಬಂಧಪಟ್ಟವರ ಮೇಲೆ ಕ್ರಮಕೈಗೊಳ್ಳದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಿಂದ ಲಿಖಿತ ಉತ್ತರವನ್ನು ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

**3.** **ಶ್ರೀಮತಿ ಹೇಮಲತಾ ನಾಯಕ್** ಅವರು ಶಿಶು ಕೇಂದ್ರೀಕೃತ ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶೇಷ ಶಾಲಾ

ಶಿಕ್ಷಕರು ಮತ್ತು ಶಿಕ್ಷಕೇತರರಿಗೆ ಸೇವಾ ಭದ್ರತೆ ನೀಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಉತ್ತರ ಒದಗಿಸುವುದಾಗಿ ತಿಳಿಸಿದರು.

4. **ಶ್ರೀ ಸಿ.ಎನ್. ಮಂಜೇಗೌಡ** ಅವರು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವು ದೇವನೂರು 3ನೇ ಹಂತದಲ್ಲಿ ಸಾಧಕರಿಗೆ ನಿವೇಶನ ಹಂಚಿಕೆಗಾಗಿ ಅರ್ಜಿ ಅಹ್ವಾನಿಸಿದ್ದು ಮುಂಗಡ ಹಣ ಪಾವತಿಸಿದವರಿಗೆ ನಿವೇಶನ ಹಂಚಿಕೆ ಮಾಡಲು ವಿಳಂಬವಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಉತ್ತರಿಸಿದರು.

5. **ಶ್ರೀ ಕೆ. ಹರೀಶ್ ಕುಮಾರ್** ಅವರು ಮಕ್ಕಳ ಶೈಕ್ಷಣಿಕ ಪ್ರವಾಸಕ್ಕೆ ಅಗತ್ಯವಿರುವ ಬಸ್ಸುಗಳನ್ನು ಒದಗಿಸುವಂತೆ ಆಯಾ ನಿಗಮಗಳಿಗೆ ಸೂಚನೆ ನೀಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಉತ್ತರಿಸಿದರು.

6. **ಶ್ರೀ ಗೋವಿಂದರಾಜು** ಅವರು ಕೋಲಾರ ಜಿಲ್ಲಾ ಕೇಂದ್ರದ ಶ್ರೀ ನರಸಿಂಹರಾಜ್ (ಎಸ್.ಎನ್.ಆರ್) ಆಸ್ಪತ್ರೆಗೆ ಮೂಲಸೌಲಭ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀ ಶರವಣ ಟಿ.ಎ.** ಅವರು ಬೆಂಗಳೂರು ನಗರದ ಕಲಾಸಿಪಾಳ್ಯ ಮತ್ತು ಕೆ.ಆರ್. ಮಾರ್ಕೆಟ್‌ನಲ್ಲಿ ಹದೆಗೆಟ್ಟಿರುವ ರಸ್ತೆ ದುರಸ್ಥಿ ಹಾಗೂ ಒತ್ತುವರಿಯಾಗಿರುವ ಫುಟ್‌ಪಾತ್‌ಗಳನ್ನು ತೆರವುಗೊಳಿಸಿ ಸ್ವಚ್ಚತೆಯನ್ನು ಕಾಪಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ವೈ.ಎಂ. ಸತೀಶ್** ಅವರು ಬಳ್ಳಾರಿ ಜಿಲ್ಲೆಯ ಕುರುಗೋಡು ತಾಲ್ಲೂಕಿನಲ್ಲಿ ಕುರುಗೋಡು ಪಟ್ಟಣ ಮತ್ತು ಚಳ್ಳಗುರ್ಕಿ ಗ್ರಾಮದಲ್ಲಿ ಬಾಲಕಿಯರ ವಸತಿ ಶಾಲೆಗಳಿಗೆ ಮೂಲಸೌಕರ್ಯ ಮತ್ತು ಕಟ್ಟಡ ಒದಗಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಮಾಜ ಕಲ್ಯಾಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ಶಶೀಲ್ ಜಿ. ನಮೋಶಿ ಹಾಗೂ ಶ್ರೀ ಎನ್. ರವಿಕುಮಾರ್** ಅವರುಗಳು ಕೆ.ಪಿ.ಎಸ್.ಸಿ ವತಿಯಿಂದ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಪರೀಕ್ಷೆಗಳನ್ನು ನಡೆಸಿದ್ದರೂ ಆಯ್ಕೆ ಪಟ್ಟಿ ಪ್ರಕಟಿಸಲು ವಿಳಂಬವಾಗುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಯವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ಉತ್ತರ ಒದಗಿಸುವುದಾಗಿ ತಿಳಿಸಿದರು.

10. **ಶ್ರೀ ಶಾಂತಾರಾಮ್ ಬುಡ್ನ** ಸಿದ್ದಿ ಅವರು ಉತ್ತರ ಕನ್ನಡ ಜಿಲ್ಲೆಯ ಜೋಯಿಡಾ ತಾಲ್ಲೂಕಿನಲ್ಲಿ ವಾಸಿಸುತ್ತಿರುವ ಹಿಂದುಳಿದ ವರ್ಗದ ಜನರು ಮೂಲ ಸೌಕರ್ಯಗಳಿಂದ ವಂಚಿತರಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 5. ವರದಿಯನ್ನೊಪ್ಪಿಸುವುದು.

ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 2023–24ನೇ ಸಾಲಿನ ಮೊದಲನೇ ಹಾಗೂ ಮಧ್ಯಂತರ ವರದಿಯನ್ನು ಸಮಿತಿಯ ಮಾನ್ಯ ಸದಸ್ಯರಾದ **ಶ್ರೀ ಅರವಿಂದ ಕುಮಾರ್ ಅರಳಿ** ಅವರು ಸದನಕ್ಕೆ ಒಪ್ಪಿಸಿದರು.

## 6. ನಿಲುವಳಿ ಸೂಚನೆ

**ಮಾನ್ಯ ಸದಸ್ಯರಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ರಾಷ್ಟ್ರೀಯ ಶಿಕ್ಷಣ ನೀತಿ 2020ನ್ನು ರದ್ದುಪಡಿಸಿರುವ ಕುರಿತು ನಿಯಮ 59ರ ಅಡಿಯಲ್ಲಿ ಪ್ರಸ್ತಾಪಿಸಲು ಮಾನ್ಯ ಸಭಾಪತಿಯವರ ಅನುಮತಿ ಕೋರಿದರು.

ನಿಯಮ 330ರ ಅಡಿ ಚರ್ಚಿಸಲು ಅವಕಾಶ ಕಲ್ಪಿಸಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಮಧ್ಯಾಹ್ನ 01.48 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಮಧ್ಯಾಹ್ನ 3.16 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**"ಧರಣಿ"**

## 7. ಗಮನ ಸೆಳೆಯುವ ಸೂಚನೆ

1. **ಡಾ: ತಳವಾರ್ ಸಾಬಣ್ಣ** ಅವರು ಕಲ್ಯಾಣ ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಮಂಡಳಿಗೆ ಬಿಡುಗಡೆ ಮಾಡಿರುವ ಅನುದಾನದ ಅಪೂರ್ಣ ಬಳಕೆ ಮತ್ತು ಅವ್ಯವಹಾರಗಳನ್ನು ನಿಯಂತ್ರಿಸಲು ಕೈಗೊಂಡಿರುವ ಕ್ರಮಗಳ ಕುರಿತು ಮಾನ್ಯ ಯೋಜನಾ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆದರು.

   ಮಾನ್ಯ ಯೋಜನಾ ಮತ್ತು ಸಾಂಖ್ಯಿಕ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಸುನೀಲ್ ವಲ್ಯಾಪುರ್
2. ಶ್ರೀ ಶಶೀಲ್ ಜಿ. ನಮೋಶಿ
3. ಶ್ರೀ ರಘುನಾಥ್ ರಾವ್ ಮಲ್ಕಾಪೂರೆ
4. ಡಾ: ತೇಜಸ್ವಿನಿ ಗೌಡ
5. ಶ್ರೀ ಕೆ.ಎ. ತಿಪ್ಪೇಸ್ವಾಮಿ
6. ಶ್ರೀ ಯು.ಬಿ. ವೆಂಕಟೇಶ್
7. ಶ್ರೀ ಎಸ್.ಎಲ್. ಭೋಜೇಗೌಡ
8. ಶ್ರೀ ತಿಪ್ಪಣ್ಣಪ್ಪ
9. ಶ್ರೀ ಎನ್. ರವಿಕುಮಾರ್
10. ಶ್ರೀ ವೈ.ಎಂ. ಸತೀಶ್
11. ಡಾ: ತಳವಾರ್ ಸಾಬಣ್ಣ
12. ಶ್ರೀ ಶಶೀಲ್ ಜಿ. ನಮೋಶಿ ಇವರುಗಳು ಸ್ಪಷ್ಟೀಕರಣ ಕೋರಿದರು.

    ಮಾನ್ಯ ಯೋಜನಾ ಮತ್ತು ಸಾಂಖ್ಯಿಕ ಸಚಿವರು ಸ್ಪಷ್ಟೀಕರಣ ನೀಡಿದರು.

**8. ನಿಯಮ 330ರ ಮೇರೆಗೆ**

**1. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರು ಅರಣ್ಯ ಒತ್ತುವರಿ ಪ್ರಕರಣಗಳಿಗೆ ಅರಣ್ಯ ಹಾಗೂ ಕಂದಾಯ ಇಲಾಖೆಗಳು ಜಂಟಿ ಸರ್ವೆ ಮಾಡಿ ಪರಿಹಾರ ಒದಗಿಸದಿರುವುದರಿಂದ ತೊಂದರೆಯಾಗಿರುವ ಕುರಿತು ಪ್ರಸ್ತಾಪಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಎಸ್.ಎಲ್. ಭೋಜೇಗೌಡ
2. ಡಾ: ತೇಜಸ್ವಿನಿಗೌಡ

3. ಶ್ರೀ ಕೋಟ ಶ್ರೀನಿವಾಸ ಪೂಜಾರಿ
4. ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ)
5. ಶ್ರೀ ಕೇಶವ ಪ್ರಸಾದ್ ಎಸ್
6. ಶ್ರೀ ಗೋವಿಂದರಾಜು
7. ಶ್ರೀಮತಿ ಭಾರತಿ ಶೆಟ್ಟಿ
8. ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ
9. ಶ್ರೀ ಮುನಿರಾಜು ಗೌಡ ಪಿ.ಎಂ.

ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಸ್ಪಷ್ಟೀಕರಣಕ್ಕೆ ಉತ್ತರಿಸಿದರು.

ಸದನವನ್ನು ಸಂಜೆ 6.02 ಗಂಟೆಯಲ್ಲಿ ಮುಂದೂಡಿ ದಿನಾಂಕ:07.12.2023ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೊಂದನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಗುರುವಾರ, ದಿನಾಂಕ:07.12.2023**

**(04)**

ಸದನವು ಬೆಳಗ್ಗೆ: 11.02 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಶ್ನೋತ್ತರ

ದಿನಾಂಕ:07.12.2023ರಂದು ಸದನದಲ್ಲಿ ಉತ್ತರಿಸುವ ಸಮೂಹ–IV ರ 4ನೇ ಪಟ್ಟಿಯ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 46(332)
2. 47(387)
3. 48(416)
4. 49(403)
5. 50(361)
6. 51(368)
7. 52(407)
8. 53(412+386+377)

ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

9. 54(427)
10. 55(454)

11. 56(372)

12. 58(422+371+432)

13. 59(442)

14. 60(351)

15. 57(453) ಕಾಲಾವಕಾಶ

ದಿನಾಂಕ:07.12.2023ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IVರ 4ನೇ ಪಟ್ಟಿಯ ಒಟ್ಟು 115 ಪ್ರಶ್ನೆಗಳ ಪೈಕಿ **53** ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 2. ಶೂನ್ಯವೇಳೆ

1. **ಶ್ರೀ ಮುನಿರಾಜು ಗೌಡ ಪಿ.ಎಂ.** ಅವರು ವಿಜಯಪುರ ಜಿಲ್ಲೆ ತಾಳಿಕೋಟೆಯಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶ ಕಲ್ಪಿಸಿ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣ ದೊರೆಯುವಂತಹ ಯೋಜನೆ ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಕರ್ನಾಟಕ ಹಾಗೂ ಮಹಾರಾಷ್ಟ್ರ ರಾಜ್ಯದ ಗಡಿ ಭಾಗದಲ್ಲಿ ಕನ್ನಡ ಮಾಧ್ಯಮದ ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ಚಿದಾನಂದ್ ಎಂ. ಗೌಡ** ಅವರು ಪತ್ರಕರ್ತರ ಜ್ವಲಂತ ಸಮಸ್ಯೆಗಳ ನಿವಾರಣೆಗೆ ರಕ್ಷಣಾ ಕಾಯ್ದೆ ಜಾರಿಗೊಳಿಸುವ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಡಾ: ತೇಜಸ್ವಿನಿ ಗೌಡ** ಅವರು ಕೊಡಗಿನ ವಿಶಿಷ್ಟ ಸಾಂಸ್ಕೃತಿಕ ಧಾರ್ಮಿಕ ಆಚರಣೆಗಳ ಪವಿತ್ರ ತಾಣಗಳಾದ ಕೊಡವರ 'ಮಂದ್'ಗಳು ಹಾಗೂ ಗೌಡ ಸಮಾಜದ 'ಸುಗ್ಗಿಕಟ್ಟೆ'ಗಳ ಸರ್ವಾಂಗೀಣ ಅಭಿವೃದ್ಧಿ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ಡಿ.ಎಸ್. ಅರುಣ್** ಅವರು ಶಿವಮೊಗ್ಗದ ಕುವೆಂಪು ವಿಶ್ವವಿದ್ಯಾಲಯದಲ್ಲಿ ಘಟಿಸಿರುವ ಹಣ ದುರುಪಯೋಗ ಮತ್ತು ಅನುದಾನ ದುರ್ಬಳಕೆ ಪ್ರಕರಣದಲ್ಲಿ ಭಾಗಿಯಾಗಿರುವವರ ವಿರುದ್ಧ ಕಾನೂನು ರೀತ್ಯಾ ಶಿಸ್ತು ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ಎನ್. ರವಿಕುಮಾರ್** ಅವರು ಕಾರ್ಖಾನೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ರಕ್ಷಣೆ ಒದಗಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಾರ್ಮಿಕ ಸಚಿವರು ಉತ್ತರಿಸಿದರು.

7. **ಶ್ರೀ ಎಸ್.ಎಲ್. ಭೋಜೇಗೌಡ** ಅವರು ಸರ್ಕಾರಿ ನೌಕರರ ಬಂಜೆತನ ಚಿಕಿತ್ಸೆಗೆ ಕಲ್ಪಿಸಿರುವ ನಗಧೀಕರಣ ಆದೇಶವನ್ನು ಪರಿಷ್ಕರಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ಮರಿತಿಬ್ಬೇಗೌಡ** ಅವರು 2009ನೇ ಸಾಲಿನಲ್ಲಿ ಜೆ.ಒ.ಸಿ ಉಪನ್ಯಾಸಕರಿಗೆ ಬಿ.ಎಡ್. ಪದವಿ ವ್ಯಾಸಂಗಕ್ಕಾಗಿ 2 ವರ್ಷ

ಕಾರ್ಯನಿರತ ಸೇವಾವಧಿ ಎಂದು ಪರಿಗಣಿಸಿದಂತೆ, ಸದರಿಯವರುಗಳಿಗೆ 10 ವರ್ಷಗಳ ಕಾಲಮಿತಿಗಳನ್ನು ವೇತನ ಬಡ್ತಿ ಹಾಗೂ ಅರ್ಹ ಸೌಲಭ್ಯಗಳನ್ನು ನೀಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಉತ್ತರ ಒದಗಿಸುವುದಾಗಿ ತಿಳಿಸಿದರು.

9. ಶ್ರೀ **ಕುಶಾಲಪ್ಪ ಎಂ.ಪಿ. (ಸುಜಾ)** ಅವರು ಕೊಡಗು ಜಿಲ್ಲೆಯ ಕೊಳತೋಡು ಗ್ರಾಮದಲ್ಲಿ ವನ್ಯ ಜೀವಿಗಳ ಹಾವಳಿಯನ್ನು ತಡೆಗಟ್ಟಲು ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

10. ಶ್ರೀ **ಯು.ಬಿ. ವೆಂಕಟೇಶ್** ಅವರು ಬೆಂಗಳೂರು ನಗರದಲ್ಲಿ ಆರೋಗ್ಯ ಇಲಾಖೆಯವರು ನ್ಯೂಮೋನಿಯಾ ತಡೆಗಟ್ಟಲು ಹಾಗೂ ರಕ್ಷಣೆಗೆ ಅಗತ್ಯ ಕ್ರಮವಹಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

11. ಶ್ರೀ **ಗೋವಿಂದರಾಜು** ಅವರು ಕೋಲಾರ ಜಿಲ್ಲೆಯಲ್ಲಿ ಕೆ.ಸಿ. ವ್ಯಾಲಿಯಿಂದ ನೀರು ಹರಿಯುತ್ತಿರುವ ಕೆರೆಗಳಲ್ಲಿನ ಜೊಂಡು ನಿವಾರಣೆ ಹಾಗೂ ಕೆರೆಗಳ ಸಂರಕ್ಷಣೆ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಒದಗಿಸುವುದಾಗಿ ತಿಳಿಸಿದರು.

12. ಶ್ರೀ **ಕೋಟ ಶ್ರೀನಿವಾಸ ಪೂಜಾರಿ** ಅವರು ಹುಬ್ಬಳ್ಳಿಯಲ್ಲಿ ನಡೆದ ಸಮಾವೇಶದಲ್ಲಿ ಮಾನ್ಯ ಮುಖ್ಯಮಂತ್ರಿಯವರು ಮುಸ್ಲಿಂ ಸಮುದಾಯಕ್ಕೆ ರೂ. ಹತ್ತು ಸಾವಿರ ಕೋಟಿ ಅನುದಾನ ನೀಡುವುದಾಗಿ ಹೇಳಿಕೆ ನೀಡಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಯವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

**3. ಶೂನ್ಯವೇಳೆಯ ಪ್ರಸ್ತಾವನೆಗಳಿಗೆ ಉತ್ತರ**

1. **ಶ್ರೀ ಎಂ. ನಾಗರಾಜು** ಅವರು ರಾಜ್ಯದಲ್ಲಿ ರಕ್ತಹೀನತೆ ಮತ್ತು ಅಪೌಷ್ಠಿಕತೆಯ ನಿವಾರಣೆ ಬಗ್ಗೆ ದಿನಾಂಕ:04.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

2. **ಶ್ರೀ ಯು.ಬಿ. ವೆಂಕಟೇಶ್** ಅವರು ಅನಧಿಕೃತ ಸ್ಕ್ಯಾನಿಂಗ್ ಸೆಂಟರ್‌ಗಳಲ್ಲಿ ಅಕ್ರಮ ಗರ್ಭಪಾತ ಮತ್ತು ಹೆಣ್ಣು ಭ್ರೂಣ ಹತ್ಯೆ ನಡೆಸುತ್ತಿರುವುದನ್ನು ತಡೆಗಟ್ಟುವ ಬಗ್ಗೆ ದಿನಾಂಕ:04.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

3. **ಶ್ರೀಮತಿ ಹೇಮಲತಾ ನಾಯಕ್** ಅವರು ಆಂಧ್ರಪ್ರದೇಶ ಮೂಲದ ಬುಡ ಜಂಗಮ ವರ್ಗಕ್ಕೆ ಸೇರಿದ ಅಲೆಮಾರಿ ಕಲಾವಿದರುಗಳ ಜೀವನ ನಿರ್ವಹಣೆಗೆ ಅನುಕೂಲ ಕಲ್ಪಿಸುವ ಬಗ್ಗೆ ದಿನಾಂಕ:04.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

4. **ಶ್ರೀ ಮರಿತಿಬ್ಬೇಗೌಡ** ಅವರು ಶಾಲಾ ಶಿಕ್ಷಕರನ್ನು ಬಿ.ಎಲ್.ಓ.ಗಳಾಗಿ ನಿಯೋಜಿಸಿರುವುದರಿಂದ ವಿದಾರ್ಥಿಗಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತಿದ್ದು ಪರೀಕ್ಷೆಗಳು ಸಮೀಪಿಸುತ್ತಿರುವುದರಿಂದ ಅವರುಗಳನ್ನು ಬಿಡುಗಡೆಗೊಳಿಸುವ ಬಗ್ಗೆ ದಿನಾಂಕ: 05.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ

ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

5. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಬಾಗಲಕೋಟೆ ಜಿಲ್ಲೆಯ ತೇರದಾಳ ತಾಲ್ಲೂಕಿನ ಮಹಾಲಿಂಗಪೂರ ಪಟ್ಟಣವನ್ನು ತಾಲ್ಲೂಕು ಕೇಂದ್ರವನ್ನಾಗಿ ಘೋಷಿಸುವಂತೆ ಕೋರಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ಬಗ್ಗೆ ದಿನಾಂಕ:05.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

6. **ಶ್ರೀ ಎಸ್.ಎಲ್. ಭೋಜೇಗೌಡ** ಅವರು ಚಿಕ್ಕಮಗಳೂರು ನಗರದಲ್ಲಿ ವಕೀಲರ ಮೇಲೆ ಪೊಲೀಸರು ಹಲ್ಲೆ ನಡೆಸಿರುವ ಬಗ್ಗೆ ದಿನಾಂಕ:05.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

7. **ಶ್ರೀ ಎಸ್.ವ್ಹಿ. ಸಂಕನೂರ** ಅವರು ಧಾರವಾಡ ಜಿಲ್ಲೆಯ ಯರಿಕೊಪ್ಪ ಗ್ರಾಮ ಪಂಚಾಯತ್ ಪಿ.ಡಿ.ಓ. ಶ್ರೀ ನಾಗರಾಜ ಗಿಣವಾಲರವರು ಆರ್.ಟಿ.ಐ ಕಾರ್ಯಕರ್ತನ ಮಾಹಿತಿ ಕೋರಿ ಕಿರುಕುಳ ನೀಡುತ್ತಿದ್ದರಿಂದ ವಿಷ ಸೇವಿಸಿದ್ದು, ಸಂಬಂಧಪಟ್ಟವರ ಮೇಲೆ ಕ್ರಮಕೈಗೊಳ್ಳದಿರುವ ದಿನಾಂಕ:06.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

### 4. ಸದನ ಸಮಿತಿಗಳ ಕಾಲಾವಕಾಶವನ್ನು ವಿಸ್ತರಿಸಲು ಪ್ರಸ್ತಾವ

ಅ. **ಶ್ರೀ ಎನ್. ರವಿಕುಮಾರ್ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:–**

ರಾಜ್ಯದಲ್ಲಿರುವ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಕ್ಲಬ್‌ಗಳ ಕಾರ್ಯವೈಖರಿ ಮತ್ತು ಚಟುವಟಿಕೆಗಳನ್ನು ಪರಿಶೀಲಿಸಲು

ರಚಿಸಲಾಗಿರುವ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:22.09.2023ರಿಂದ 06 ತಿಂಗಳುಗಳ ಕಾಲಾವಕಾಶವನ್ನು ಸದನದ ಸಹಮತಿಯನ್ನು ಕಾಯ್ದಿರಿಸಿ ವಿಸ್ತರಿಸಲಾಗಿರುವ ಪ್ರಸ್ತಾವನೆಗೆ ಸದನದ ಸಹಮತಿ ಕೋರಿ ಪ್ರಸ್ತಾವವನ್ನು ಮಂಡಿಸಿದರು.

ಸದನದ ಸಹಮತಿ ಪಡೆಯುವ ಪ್ರಸ್ತಾವವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

ಆ. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:–**

ರಾಜ್ಯದ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳ ಸಂಬಂಧ ಪರಿಶೀಲಿಸಿ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:22.10.2023ರಿಂದ 06 ತಿಂಗಳುಗಳ ಕಾಲಾವಕಾಶವನ್ನು ಸದನದ ಸಹಮತಿಯನ್ನು ಕಾಯ್ದಿರಿಸಿ ವಿಸ್ತರಿಸಲಾಗಿರುವ ಪ್ರಸ್ತಾವನೆಗೆ ಸದನದ ಸಹಮತಿ ಕೋರಿ ಪ್ರಸ್ತಾವವನ್ನು ಮಂಡಿಸಿದರು.

ಸದನದ ಸಹಮತಿ ಪಡೆಯುವ ಪ್ರಸ್ತಾವವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

## 05. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಮರಿತಿಬ್ಬೇಗೌಡ** ಅವರು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಲ್ಲಿ ಹಿರಿಯ ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ ಹಾಗೂ ಪ್ರೌಢ ಶಾಲೆಯಿಂದ ಪದವಿ ಪೂರ್ವ ಕಾಲೇಜಿನ ಶಿಕ್ಷಕರುಗಳಿಗೆ ಬಡ್ತಿ ನೀಡುವಲ್ಲಿ ರೂಪಿಸಿರುವ ನಿಯಮಗಳಲ್ಲಿನ ತಾರತಮ್ಯದ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖಾ ಸಚಿವರ ಗಮನ ಸೆಳೆದರು.

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖಾ ಸಚಿವರು ಉತ್ತರಿಸಿದರು.

ಮಧ್ಯಾಹ್ನ 1.08 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿಯವರ ಪೀಠದಲ್ಲಿ ಆಸೀನರಾದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಡಾ: ವೈ.ಎ. ನಾರಾಯಣಸ್ವಾಮಿ
2. ಶ್ರೀ ಶಶೀಲ್ ಜಿ. ನಮೋಶಿ
3. ಶ್ರೀ ಎಸ್.ಎಲ್. ಭೋಜೇಗೌಡ
4. ಶ್ರೀ ಎಸ್.ವ್ಹಿ. ಸಂಕನೂರ
5. ಡಾ: ತೇಜಸ್ವಿನಿಗೌಡ
6. ಶ್ರೀ ಚಿದಾನಂದ್ ಎಂ. ಗೌಡ
7. ಶ್ರೀ ಮರಿತಿಬ್ಬೇಗೌಡ ಅವರುಗಳು ಸ್ಪಷ್ಟೀಕರಣ ಕೋರಿದರು.

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖಾ ಸಚಿವರು ಸ್ಪಷ್ಟೀಕರಣ ನೀಡಿದರು.

2. **ಶ್ರೀಯುತರುಗಳಾದ ಗೋವಿಂದರಾಜು, ಕೆ.ಎ. ತಿಪ್ಪೇಸ್ವಾಮಿ ಹಾಗೂ ಸೂರಜ್ ರೇವಣ್ಣ** ಅವರುಗಳು ಪ್ರಾದೇಶಿಕ ಅಸಮತೋಲನವನ್ನು ನಿರ್ಮೂಲನೆ ಮಾಡುವ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿರುವ ಜಿಲ್ಲೆಗಳಲ್ಲಿ ಉನ್ನತ ಶಿಕ್ಷಣದ ವಾರ್ಷಿಕ ನೋಂದಣಿ ಅನುಪಾತವನ್ನು ಸುಧಾರಿಸುವ ನಿಟ್ಟಿನಲ್ಲಿ ಸ್ಥಾಪಿತವಾಗಿರುವ ವಿಶ್ವವಿದ್ಯಾಲಯಗಳಲ್ಲಿನ ಮೂಲಭೂತ ಸೌಕರ್ಯಗಳ ಕೊರತೆಯನ್ನು ನೀಗಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆದರು.

ಮಾನ್ಯ ಉನ್ನತ ಶಿಕ್ಷಣ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಕೆ.ಎ. ತಿಪ್ಪೇಸ್ವಾಮಿ
2. ಶ್ರೀ ಗೋವಿಂದರಾಜು
3. ಡಾ: ತಳವಾರ್ ಸಾಬಣ್ಣ
4. ಶ್ರೀ ಎನ್. ರವಿಕುಮಾರ್
5. ಶ್ರೀ ನಿರಾಣಿ ಹಣಮಂತ್ ರುದ್ರಪ್ಪ

ಮಾನ್ಯ ಉನ್ನತ ಶಿಕ್ಷಣ ಸಚಿವರು ಸ್ಪಷ್ಟೀಕರಣ ನೀಡಿದರು.

ಮಧ್ಯಾಹ್ನ 2.31 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಪ್ರಕಟಿಸಿದರು.

ಮಧ್ಯಾಹ್ನ 3.45 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 6. ನಿಯಮ 330ರ ಮೇರೆಗೆ

1. **ಶ್ರೀಯುತರುಗಳಾದ ಕೋಟ ಶ್ರೀನಿವಾಸ ಪೂಜಾರಿ, ಎನ್. ರವಿಕುಮಾರ್, ಡಾ: ವೈ.ಎ. ನಾರಾಯಣಸ್ವಾಮಿ, ಶರವಣ ಟಿ.ಎ., ಛಲವಾದಿ ಟಿ. ನಾರಾಯಣಸ್ವಾಮಿ ಹಾಗೂ ಇತರರುಗಳು** ರಾಷ್ಟ್ರೀಯ ಶಿಕ್ಷಣ ನೀತಿ–2020ನ್ನು ರದ್ದುಗೊಳಿಸಿರುವುದರಿಂದ ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳಲ್ಲಿ ತಲೆದೋರಿರುವ ಗೊಂದಲ–ಆತಂಕಗಳ ಗಂಭೀರ ವಿಷಯದ ಕುರಿತು ಪ್ರಸ್ತಾಪಿಸಿದರು.

   ಮಧ್ಯಾಹ್ನ 3.53 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಮಾನ್ಯ ಸಭಾಪತಿಯವರ ಪೀಠದಲ್ಲಿ ಆಸೀನರಾದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಶ್ರೀ ಕೆ.ಎಸ್. ನವೀನ್
2. ಶ್ರೀ ಎಂ. ನಾಗರಾಜು
3. ಡಾ: ವೈ.ಎ. ನಾರಾಯಣಸ್ವಾಮಿ
4. ಶ್ರೀ ಎನ್. ರವಿಕುಮಾರ್
5. ಶ್ರೀ ಮಂಜುನಾಥ್ ಭಂಡಾರಿ

ಸಂಜೆ 5.09 ಗಂಟೆಗೆ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

6. ಶ್ರೀ ಯು.ಬಿ. ವೆಂಕಟೇಶ್
7. ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ
8. ಶ್ರೀ ಶಶೀಲ್ ಜಿ. ನಮೋಶಿ

ಸಂಜೆ 5.39 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿಯವರ ಪೀಠದಲ್ಲಿ ಆಸೀನರಾದರು.

9. ಶ್ರೀ ಶರವಣ ಟಿ.ಎ.
10. ಶ್ರೀ ಎಸ್.ವ್ಹಿ. ಸಂಕನೂರ
11. ಶ್ರೀ ಕೆ.ಎ. ತಿಪ್ಪೇಸ್ವಾಮಿ
12. ಶ್ರೀ ಸುನೀಲ್ ವಲ್ಯಾಪುರ್
13. ಶ್ರೀ ಚಿದಾನಂದ್ ಎಂ. ಗೌಡ
14. ಶ್ರೀ ಡಿ.ಎಸ್. ಅರುಣ್
15. ಶ್ರೀ ಅ. ದೇವೇಗೌಡ
16. ಶ್ರೀ ನಿರಾಣಿ ಹಣಮಂತ್ ರುದ್ರಪ್ಪ

17. ಶ್ರೀ ಕೇಶವ ಪ್ರಸಾದ್ ಎಸ್
18. ಡಾ: ತೇಜಸ್ವಿನಿ ಗೌಡ
19. ಶ್ರೀ ಎಸ್.ಎಲ್. ಭೋಜೇಗೌಡ
20. ಶ್ರೀ ಮರಿತಿಬ್ಬೇಗೌಡ

ಸಂಜೆ 6.50 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:08.12.2023ರಂದು ಬೆಳಿಗ್ಗೆ 10.00 ಗಂಟೆಗೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

*****

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೊಂದನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಶುಕ್ರವಾರ, ದಿನಾಂಕ:08.12.2023**

**(05)**

ಸದನವು ಬೆಳಗ್ಗೆ: 10.13 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಶ್ನೋತ್ತರ

ದಿನಾಂಕ:08.12.2023ರಂದು ಸದನದಲ್ಲಿ ಉತ್ತರಿಸುವ ಸಮೂಹ–V ರ 5ನೇ ಪಟ್ಟಿಯ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 61(506)
2. 62(562)

**"ಧರಣಿ"**

ಬೆಳಗ್ಗೆ 10.33 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಬೆಳಗ್ಗೆ 10.46 ಗಂಟೆಯಲ್ಲಿ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಮಾನ್ಯ ಸಚಿವರು ವಿವರಣೆ ನೀಡಿದರು.

**"ಧರಣಿ"**

ಬೆಳಗ್ಗೆ 10.53 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಬೆಳಗ್ಗೆ 11.13 ಗಂಟೆಯಲ್ಲಿ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಚುಕ್ಕೆ ಪ್ರಶ್ನೆ 62(562)ಕ್ಕೆ ಸಂಬಂಧಿಸಿದಂತೆ

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಡಾ: ತೇಜಸ್ವಿನಿಗೌಡ
2. ಶ್ರೀ ಕೋಟ ಶ್ರೀನಿವಾಸ ಪೂಜಾರಿ
3. ಶ್ರೀ ಕೆ.ಎ. ತಿಪ್ಪೇಸ್ವಾಮಿ
4. ಶ್ರೀ ಎಸ್.ಎಲ್. ಭೋಜೇಗೌಡ
5. ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ

ದಿನಾಂಕ:11.12.2023ರಂದು ಪ್ರಶ್ನೆ ಸಂಖ್ಯೆ: 62(562)ಗೆ ಸಂಬಂಧಿಸಿದಂತೆ ಅರ್ಧಗಂಟೆ ಕಾಲಾವಧಿ ಚರ್ಚೆಗೆ ಅವಕಾಶ ನೀಡುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ದಿನಾಂಕ:08.12.2023ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–Vರ 5ನೇ ಪಟ್ಟಿಯ ಒಟ್ಟು 116 ಪ್ರಶ್ನೆಗಳ ಪೈಕಿ **105** ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

**2. ಶೂನ್ಯವೇಳೆ**

**1. ಶ್ರೀಮತಿ ಹೇಮಲತಾ ನಾಯಕ್** ಅವರು ವಿಜಯಪುರ ಜಿಲ್ಲೆಯಲ್ಲಿರುವ ಆಲಮಟ್ಟಿ ಡ್ಯಾಂ ಎತ್ತರಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ಯು.ಬಿ. ವೆಂಕಟೇಶ್** ಅವರು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿ ನಿಲಯಗಳಿಗೆ ಗುಣಮಟ್ಟದ ಸೌಲಭ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಮಾಜ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ಶಶೀಲ್ ಜಿ. ನಮೋಶಿ** ಅವರು ರಾಜ್ಯಾದ್ಯಾಂತ ಕಾಲಕಾಲಕ್ಕೆ ಗರ್ಭಿಣಿಯರ ಆರೋಗ್ಯ ತಪಾಸಣೆ ಮಾಡಿ ಸಂಪೂರ್ಣ ನಿಗಾವಹಿಸಿ ತಾಯಿ ಮಕ್ಕಳ ಸಾವಿನ ಪ್ರಮಾಣ ತಗ್ಗಿಸುವ ನಿಟ್ಟಿನಲ್ಲಿ ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ರಾಜ್ಯದ 31 ಜಿಲ್ಲೆಗಳಲ್ಲಿರುವ 432 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರುಗಳನ್ನು ಖಾಯಂಗೊಳಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರು ಉತ್ತರ ಒದಗಿಸುವುದಾಗಿ ತಿಳಿಸಿದರು.

5. **ಶ್ರೀ ಕೆ. ಹರೀಶ್ ಕುಮಾರ್** ಅವರು ಬೆಂಗಳೂರು ನಗರದಲ್ಲಿರುವ ಸ್ಕೈವಾಕ್‌ಗಳನ್ನು ಸಜ್ಜುಗೊಳಿಸಿ ಸಾರ್ವಜನಿಕರ ಸೇವೆಗೆ ಮುಕ್ತಗೊಳಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀಯುತರುಗಳಾದ ಮಂಜುನಾಥ್ ಭಂಡಾರಿ ಹಾಗೂ ಎನ್. ರವಿಕುಮಾರ್** ಅವರುಗಳು ಶೈಕ್ಷಣಿಕ ವರ್ಷದಲ್ಲಿ ಮಕ್ಕಳ ಶಾಲೆ

ಸೇರ್ಪಡೆ ಪ್ರಕ್ರಿಯೆಯಲ್ಲಿ ಆಗುತ್ತಿರುವ ವಯೋಮಿತಿ ಗೊಂದಲ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀ ವೈ.ಎಂ. ಸತೀಶ್** ಅವರು ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕು ಮತ್ತು ರಾಜ್ಯದ ಇನ್ನಿತರ ತಾಲ್ಲೂಕುಗಳಲ್ಲಿ ಶಿಕ್ಷಕರ ವಸತಿ ಗೃಹಗಳ ಕಾಮಗಾರಿ ಅನುದಾನದ ಕೊರತೆಯಿಂದ ಅರ್ಧಕ್ಕೆ ನಿಂತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ಮರಿತಿಬ್ಬೇಗೌಡ** ಅವರು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿರುವ ಉಪನ್ಯಾಸಕರು ಯಾವುದೇ ಬಡ್ತಿ ಇಲ್ಲದೆ ನಿವೃತ್ತಿಯಾಗುತ್ತಿದ್ದು, ತೆರವಾಗಲಿರುವ ಪ್ರಾಂಶುಪಾಲರ ಹುದ್ದೆಗಳನ್ನು ಒಳಗೊಂಡಂತೆ ಬಡ್ತಿ ಮೂಲಕ ಭರ್ತಿ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ಎಂ. ನಾಗರಾಜು** ಅವರು ಇತ್ತೀಚಿನ ದಿನಗಳಲ್ಲಿ ಕರ್ನಾಟಕ ರಾಜಧಾನಿ ಬೆಂಗಳೂರಿನಲ್ಲಿ ಕ್ರಿಮಿನಲ್ ಇನ್ನಿತರೆ ಅಪರಾಧಗಳ ಸಂಖ್ಯೆ ಹೆಚ್ಚಾಗುತ್ತಿದ್ದು, "ಬೆಂಗಳೂರು ಅಪರಾಧಿಗಳ ನಗರ" ವೆಂದು ಬಿಂಬಿಸುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 3. ಶೂನ್ಯವೇಳೆಯ ಪ್ರಸ್ತಾವನೆಗಳಿಗೆ ಉತ್ತರ

1. **ಶ್ರೀ ಯು.ಬಿ. ವೆಂಕಟೇಶ್** ಅವರು ರಾಜ್ಯದಲ್ಲಿ ಮಕ್ಕಳ ಮಾರಾಟ ಹಾಗೂ ನಾಪತ್ತೆ ಪ್ರಕರಣಗಳನ್ನು ತಡೆಗಟ್ಟಲು ಸೂಕ್ತ ಕಾನೂನು

ಕ್ರಮಕೈಗೊಳ್ಳುವ ಬಗ್ಗೆ ದಿನಾಂಕ: 05.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

2. **ಶ್ರೀ ಗೋವಿಂದರಾಜು** ಅವರು ಕೋಲಾರ ಜಿಲ್ಲೆಯಲ್ಲಿ ಅಕ್ರಮ ಮದ್ಯ ಮತ್ತು ಮಾದಕ ವಸ್ತುಗಳ ಮಾರಾಟ ಪತ್ತೆ ಹಚ್ಚುವ ಮತ್ತು ಮೆಡಿಕಲ್ ಶಾಪ್‌ಗಳ ನಿರ್ವಹಣೆಗೆ ಲೈಸೆನ್ಸ್ ಪಡೆದಿರುವ ಸಂಬಂಧ ತನಿಖೆ ನಡೆಸುವ ಬಗ್ಗೆ ದಿನಾಂಕ: 05.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

3. **ಶ್ರೀ ಎಂ. ನಾಗರಾಜು** ಅವರು ಬೆಂಗಳೂರು ನಗರ ಹಾಗೂ ಗ್ರಾಮಾಂತರ ಪ್ರದೇಶದ ವ್ಯಾಪ್ತಿಯಲ್ಲಿರುವ ಶಾಲೆಗಳಲ್ಲಿ ಹುಸಿ ಬಾಂಬ್ ಕರೆ ಸ್ವೀಕರಿಸಿದ್ದು, ತನಿಖೆ ನಡೆಸುವಲ್ಲಿ ವಿಳಂಬವಾಗಿರುವ ಬಗ್ಗೆ ದಿನಾಂಕ: 05.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

4. **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರು ಡಯಾಲಿಸಿಸ್ ಸಿಬ್ಬಂದಿಗಳು ESKEG ಸಂಸ್ಥೆಯವರು 20 ತಿಂಗಳಿನಿಂದ PF ಮತ್ತು ESI ಸೌಲಭ್ಯಗಳನ್ನು ನೀಡದಿರುವುದರಿಂದ ಅನಿರ್ಧಿಷ್ಟ ಪ್ರತಿಭಟನೆ ನಡೆಸುತ್ತಿರುವ ಬಗ್ಗೆ ದಿನಾಂಕ: 05.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

5. **ಶ್ರೀ ಕೆ.ಎಸ್. ನವೀನ್** ಅವರು ಬಿಜೆಪಿ ನಾಯಕ ಶ್ರೀ ಪೃಥ್ವಿಸಿಂಗ್‌ರವರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿರುವವರ ವಿರುದ್ಧ ಯಾವುದೇ ಕಾನೂನು ಕ್ರಮ ಜರುಗಿಸದಿರುವ ಬಗ್ಗೆ ದಿನಾಂಕ: 05.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

6. **ಶ್ರೀ ಸಿ.ಎನ್. ಮಂಜೇಗೌಡ** ಅವರು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವು ದೇವನೂರು 3ನೇ ಹಂತದಲ್ಲಿ ಸಾಧಕರಿಗೆ ನಿವೇಶನ ಹಂಚಿಕೆಗಾಗಿ ಅರ್ಜಿ ಅಹ್ವಾನಿಸಿದ್ದು, ಮುಂಗಡ ಹಣ ಪಾವತಿಸಿದವರಿಗೆ ನಿವೇಶನ ಹಂಚಿಕೆ ಮಾಡಲು ವಿಳಂಬವಾಗಿರುವ ಬಗ್ಗೆ ದಿನಾಂಕ: 06.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

7. **ಶ್ರೀ ಕೆ. ಹರೀಶ್ ಕುಮಾರ್** ಅವರು ಮಕ್ಕಳ ಶೈಕ್ಷಣಿಕ ಪ್ರವಾಸಕ್ಕೆ ಅಗತ್ಯವಿರುವ ಬಸ್ಸುಗಳನ್ನು ಒದಗಿಸುವಂತೆ ಆಯಾ ನಿಗಮಗಳಿಗೆ ಸೂಚನೆ ನೀಡುವ ಬಗ್ಗೆ ದಿನಾಂಕ: 06.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

8. **ಶ್ರೀಯುತರುಗಳಾದ ಶಶೀಲ್ ಜಿ. ನಮೋಶಿ ಹಾಗೂ ಎನ್. ರವಿಕುಮಾರ್** ಅವರು ಕೆ.ಪಿ.ಎಸ್.ಸಿ ವತಿಯಿಂದ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಪರೀಕ್ಷೆಗಳನ್ನು ನಡೆಸಿದ್ದರೂ ಆಯ್ಕೆ ಪಟ್ಟಿ ಪ್ರಕಟಿಸಲು ವಿಳಂಬವಾಗುತ್ತಿರುವ ಬಗ್ಗೆ ದಿನಾಂಕ: 06.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

9. **ಶ್ರೀ ಎನ್. ರವಿಕುಮಾರ್** ಅವರು ಕಾರ್ಖಾನೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ರಕ್ಷಣೆ ಒದಗಿಸುವ ಬಗ್ಗೆ ದಿನಾಂಕ: 07.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

**4. ನಿಯಮ 330ರ ಮೇರೆಗೆ**

1. **ಶ್ರೀಯುತರುಗಳಾದ ಕೋಟ ಶ್ರೀನಿವಾಸ ಪೂಜಾರಿ, ಎನ್. ರವಿಕುಮಾರ್, ಡಾ: ವೈ.ಎ. ನಾರಾಯಣಸ್ವಾಮಿ, ಶರವಣ ಟಿ.ಎ., ಛಲವಾದಿ ಟಿ. ನಾರಾಯಣಸ್ವಾಮಿ ಹಾಗೂ ಇತರರು** ರಾಷ್ಟ್ರೀಯ ಶಿಕ್ಷಣ ನೀತಿ–2020ನ್ನು ರದ್ದುಗೊಳಿಸಿರುವುದರಿಂದ ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳಲ್ಲಿ ತಲೆದೋರಿರುವ ಗೊಂದಲ–ಆತಂಕಗಳ ಗಂಭೀರ ವಿಷಯದ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರು ಉತ್ತರಿಸಿದರು.

ಮಧ್ಯಾಹ್ನ 12.22 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿಯವರ ಪೀಠದಲ್ಲಿ ಆಸೀನರಾದರು.

ಮಧ್ಯಾಹ್ನ 1.08 ಗಂಟೆಗೆ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

ಸದನವನ್ನು ಮಧ್ಯಾಹ್ನ 1.42 ಗಂಟೆಗೆ ಮುಂದೂಡಿ ದಿನಾಂಕ:11.12.2023ರಂದು ಬೆಳಿಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

*****

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೊಂದನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಸೋಮವಾರ, ದಿನಾಂಕ:11.12.2023**

**(06)**

ಸದನವು ಬೆಳಗ್ಗೆ: 11.18 ಗಂಟೆಗೆ ಮಾನ್ಯ ಉಪ ಸಭಾಪತಿಯವರ **(ಶ್ರೀ ಎಂ.ಕೆ. ಪ್ರಾಣೇಶ್)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಸಂತಾಪ ಸೂಚನೆ

**ಕನ್ನಡ ಚಲನಚಿತ್ರ ರಂಗದ ಅಭಿಜಾತ ಕಲಾವಿದೆ ಶ್ರೀಮತಿ ಲೀಲಾವತಿ** ಅವರು ದಿನಾಂಕ: 08.12.2023ರಂದು ನಿಧನ ಹೊಂದಿದ್ದು, ಮಾನ್ಯ ಸಭಾಪತಿಯವರು ಸಂತಾಪ ಸೂಚನಾ ನಿರ್ಣಯವನ್ನು ಮಂಡಿಸಿದರು.

ಮಾನ್ಯ ಸಭಾನಾಯಕರು ಮಾನ್ಯ ಸಭಾಪತಿಯವರು ಮಂಡಿಸಿದ ಸಂತಾಪ ಸೂಚನಾ ನಿರ್ಣಯವನ್ನು ಅನುಮೋದಿಸಿ ಮಾತನಾಡಿದರು.

ಮಾನ್ಯ ವಿರೋಧ ಪಕ್ಷದ ಸದಸ್ಯರಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿ ಅವರು ಮಾನ್ಯ ಸಭಾಪತಿಯವರು ಮಂಡಿಸಿದ ಸಂತಾಪ ಸೂಚನಾ ನಿರ್ಣಯವನ್ನು ಅನುಮೋದಿಸಿ ಮಾತನಾಡಿದರು.

ಮಾನ್ಯ ಶಾಸಕರಾದ ಶ್ರೀಮತಿ ಉಮಾಶ್ರೀ ಮತ್ತು ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಮಾನ್ಯ ಸಭಾಪತಿಯವರು ಮಂಡಿಸಿದ ಸಂತಾಪ ಸೂಚನಾ ನಿರ್ಣಯವನ್ನು ಅನುಮೋದಿಸಿ ಮಾತನಾಡಿದರು.

ಮೃತರ ಆತ್ಮಕ್ಕೆ ಶಾಂತಿ ಕೋರಿ ಒಂದು ನಿಮಿಷ ಮೌನ ಆಚರಿಸಲಾಯಿತು.

## 2. ಪ್ರಶ್ನೋತ್ತರ

ದಿನಾಂಕ:11.12.2023ರಂದು ಸದನದಲ್ಲಿ ಉತ್ತರಿಸುವ ಸಮೂಹ–Iರ 6ನೇ ಪಟ್ಟಿಯ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

| | | |
|---|---|---|
| 1. | 76(683) | |
| 2. | 77(690) | |
| 3. | 78(738) | ಗೈರು ಹಾಜರಿ |
| 4. | 79(633) | ಕಾಲಾವಕಾಶ |
| 5. | 80(668) | |
| 6. | 81(627) | |
| 7. | 82(708) | ಗೈರು ಹಾಜರಿ |
| 8. | 83(692) | ಗೈರು ಹಾಜರಿ |
| 9. | 84(742+1090) | |
| 10. | 85(675) | ವರ್ಗಾವಣೆ |
| 11. | 86(727) | ಡಾ: ತಳವಾರ್ ಸಾಬಣ್ಣ ಪರವಾಗಿ ಶ್ರೀ ಕೇಶವ ಪ್ರಸಾದ್ ಎಸ್ |
| 12. | 87(680) | |
| 13. | 88(605) | ತಡೆಹಿಡಿಯಲಾಗಿದೆ |
| 14. | 89(604) | ಶ್ರೀಮತಿ ಭಾರತಿ ಶೆಟ್ಟಿ ಪರವಾಗಿ ಶ್ರೀ ಡಿ.ಎಸ್. ಅರುಣ್ |
| 15. | 90(628) | |

ದಿನಾಂಕ:11.12.2023ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–Iರ 6ನೇ ಪಟ್ಟಿಯ ಒಟ್ಟು **137** ಪ್ರಶ್ನೆಗಳ ಪೈಕಿ **66** ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

**3. ಶೂನ್ಯವೇಳೆ**

1. **ಶ್ರೀ ಕೆ.ಎಸ್. ನವೀನ್** ಅವರು ರಾಜ್ಯದಲ್ಲಿ ವಿದ್ಯುತ್ ಅಭಾವ ಉಂಟಾಗಿರುವುದರಿಂದ ಜಲವಿದ್ಯುತ್ ಉತ್ಪಾದನೆ ಅಣೆಕಟ್ಟು ಹಾಗೂ ಇಂಧನ ಇಲಾಖೆಯಲ್ಲಿನ ಆಸ್ತಿಗಳನ್ನು ಅಡಮಾನವಿಟ್ಟಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಇಂಧನ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ಮರಿತಿಬ್ಬೇಗೌಡ** ಅವರು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅರ್ಹ ಉಪನ್ಯಾಸಕರ ಪರಿವೀಕ್ಷಣಾ ಅವಧಿ ಘೋಷಣೆ ಮಾಡುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ಎನ್. ರವಿಕುಮಾರ್** ಅವರು ಬೆಳಗಾವಿಯ ಸುವರ್ಣಸೌಧದ ಉಭಯ ಸದನಗಳ ಗ್ಯಾಲರಿಯಲ್ಲಿ ಅಳವಡಿಸಿದ ಮಹಾನ್ ರಾಷ್ಟ್ರೀಯವಾದಿ ವೀರ ಸಾವರ್ಕರ್ ಅವರ ಭಾವಚಿತ್ರವನ್ನು ತೆಗೆದು ಹಾಕಲಾಗುವುದು ಎಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಮಾಧ್ಯಮದಲ್ಲಿ ಹೇಳಿಕೆ ನೀಡಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ಡಿ.ಎಸ್. ಅರುಣ್** ಅವರು ಮಲೆನಾಡನ್ನು ಕಾಡುತ್ತಿರುವ ಕ್ಯಾಸನೂರು ಫಾರೆಸ್ಟ್ ಡಿಸೀಸ್ ಎಂಬ ಮಂಗನ ಕಾಯಿಲೆಗೆ ಚಿಕಿತ್ಸೆ ಮತ್ತು ನಿವಾರಣೆಗೆ ಕ್ರಮ ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಉತ್ತರಿಸಿದರು.

5. **ಶ್ರೀ ಎಂ. ನಾಗರಾಜು** ಅವರು ಬೆಳಗಾವಿ ಜಲ್ಲೆಯ ಕಾರ್ಮಿಕ ವಿಮಾ ನಿಗಮದ ಆಸ್ಪತ್ರೆ ಕಟ್ಟಡ ಶಿಥಿಲಗೊಂಡಿದ್ದು, ಹೊಸ ಕಟ್ಟಡ ಮಂಜೂರಾಗಿ ವರ್ಷ ಕಳೆದರೂ ಆಸ್ಪತ್ರೆ ಸ್ಥಳಾಂತರಗೊಳಿಸಲು ಸ್ಥಳ ಸಿಗದ ಕಾರಣಕ್ಕಾಗಿ ಹೊಸ ಕಟ್ಟಡ ನಿರ್ಮಾಣವು ವಿಳಂಬವಾಗುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಾರ್ಮಿಕ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ** ಅವರು ಬೆಳಗಾವಿ ಜಿಲ್ಲೆಯನ್ನು ವಿಭಜಿಸಿ ಚಿಕ್ಕೋಡಿ ಜಿಲ್ಲೆಯೆಂದು ಘೋಷಣೆ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಂದಾಯ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀಮತಿ ತೇಜಸ್ವಿನಿ ಗೌಡ** ಅವರು ಭಾರತೀಯ ಸೇನಾ ಫೀಲ್ಡ್ ಮಾರ್ಷಲ್ ಜನರಲ್ ಕಾರ್ಯಪ್ಪರವರ ಹೆಸರನ್ನು 'ಭಾರತರತ್ನ' ಪ್ರಶಸ್ತಿಗೆ ಪರಿಗಣಿಸಲು ಶಿಫಾರಸ್ಸು ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ಮಂಜುನಾಥ್ ಭಂಡಾರಿ** ಅವರು ಶಿವಮೊಗ್ಗ ವಿಮಾನ ನಿಲ್ದಾಣಕ್ಕೆ ರಾಷ್ಟ್ರಕವಿ ಕುವೆಂಪು ವಿಮಾನ ನಿಲ್ದಾಣ ಎಂದು ಅಧಿಕೃತವಾಗಿ ನಾಮಕರಣ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ಬಿ.ಕೆ. ಹರಿಪ್ರಸಾದ್** ಅವರು ಶ್ರೀಯುತ ಡಿ. ದೇವರಾಜ್ ಅರಸ್‌ರವರ ಪ್ರತಿಮೆಯನ್ನು ಮೈಸೂರಿನ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಹಾಗೂ ಬೆಳಗಾವಿಯ ಸುವರ್ಣ ವಿಧಾನಸೌಧ ಮುಂಭಾಗದಲ್ಲಿ ಪ್ರತಿಷ್ಠಾಪಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

10. **ಶ್ರೀ ಪಿ.ಹೆಚ್. ಪೂಜಾರ್** ಅವರು ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದಲ್ಲಿ ಅನಪೇಕ್ಷಿತ ಕಾಮಗಾರಿ ಕೈಗೊಂಡು ಭ್ರಷ್ಟಾಚಾರ ನಡೆಸುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಜಲಸಂಪನ್ಮೂಲ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

11. **ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಗುತ್ತಿಗೆದಾರರಿಗೆ ಬಿಲ್ ಪಾವತಿ ಮಾಡುವಲ್ಲಿ ಜೇಷ್ಠತೆಯನ್ನು ಪರಿಗಣಿಸದೆ, ಕಮಿಷನ್ ಕೊಟ್ಟವರಿಗೆ ಪಾವತಿ ಮಾಡುತ್ತಿರುವುದು ಹಾಗೂ ವರ್ಗಾವಣೆ ದಂಧೆಯನ್ನು ತಡೆಗಟ್ಟುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 4. ಶೂನ್ಯವೇಳೆಯ ಪ್ರಸ್ತಾವನೆಗಳಿಗೆ ಉತ್ತರ

**1.** **ಶ್ರೀ ಕೇಶವ ಪ್ರಸಾದ್ ಎಸ್.** ಅವರು ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ಹಾಸ್ಟೆಲ್‌ಗಳಲ್ಲಿರುವ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ವರ್ಷದ ಶುಚಿ ಸಂಭ್ರಮ ಕಿಟ್‌ಗಳನ್ನು ವಿತರಿಸದಿರುವ ಬಗ್ಗೆ ದಿನಾಂಕ:06.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ

ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

2. **ಶ್ರೀಮತಿ ಹೇಮಲತಾ ನಾಯಕ್** ಅವರು ಶಿಶು ಕೇಂದ್ರೀಕೃತ ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶೇಷ ಶಾಲಾ ಶಿಕ್ಷಕರು ಮತ್ತು ಶಿಕ್ಷಕರೇತರರಿಗೆ ಸೇವಾ ಭದ್ರತೆ ನೀಡುವ ಬಗ್ಗೆ ದಿನಾಂಕ: 06.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

3. **ಶ್ರೀ ಗೋವಿಂದರಾಜು** ಅವರು ಕೋಲಾರ ಜಿಲ್ಲಾ ಕೇಂದ್ರದ ಶ್ರೀ ನರಸಿಂಹರಾಜ್ (ಎಸ್.ಎನ್.ಆರ್) ಆಸ್ಪತ್ರೆಗೆ ಮೂಲಸೌಲಭ್ಯಗಳನ್ನು ಒದಗಿಸುವ ಬಗ್ಗೆ ದಿನಾಂಕ: 06.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

4. **ಶ್ರೀ ಮುನಿರಾಜು ಗೌಡ ಪಿ.ಎಂ** ಅವರು ವಿಜಯಪುರ ಜಿಲ್ಲೆ ತಾಳಿಕೋಟೆಯಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶ ಕಲ್ಪಿಸಿ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣ ದೊರೆಯುವಂತೆ ಯೋಜನೆ ಕೈಗೊಳ್ಳುವ ಬಗ್ಗೆ ದಿನಾಂಕ: 07.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

5. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಕರ್ನಾಟಕ ಹಾಗೂ ಮಹಾರಾಷ್ಟ್ರ ರಾಜ್ಯದ ಗಡಿ ಭಾಗದಲ್ಲಿ ಕನ್ನಡ ಮಾಧ್ಯಮದ ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ದಿನಾಂಕ:07.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

6. **ಡಾ: ತೇಜಸ್ವಿನಿಗೌಡ** ಅವರು ಕೊಡಗಿನ ವಿಶಿಷ್ಟ ಸಾಂಸ್ಕೃತಿಕ ಧಾರ್ಮಿಕ ಆಚರಣೆಗಳ ಪವಿತ್ರ ತಾಣಗಳಾದ ಕೊಡವರ 'ಮಂದ್'ಗಳು ಹಾಗೂ

ಗೌಡ ಸಮಾಜದ 'ಸುಗ್ಗಿಕಟ್ಟೆ'ಗಳ ಸರ್ವಾಂಗೀಣ ಅಭಿವೃದ್ಧಿ ಬಗ್ಗೆ ದಿನಾಂಕ: 07.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

7. **ಶ್ರೀ ಮರಿತಿಬ್ಬೇಗೌಡ** ಅವರು 2009ನೇ ಸಾಲಿನಲ್ಲಿ ಬಿ.ಇ.ಡಿ ಪದವಿ ವ್ಯಾಸಂಗಕ್ಕೆ ಜೆ.ಒ.ಸಿ ಉಪನ್ಯಾಸಕರಿಗೆ 2 ವರ್ಷ ಕಾರ್ಯನಿರತ ಸೇವಾವಧಿ ಎಂದು ಪರಿಗಣಿಸಿದಂತೆ ಅವರುಗಳಿಗೆ 10 ವರ್ಷಗಳ ಕಾಲಮಿತಿ ವೇತನ ಬಡ್ತಿ ಹಾಗೂ ಅರ್ಹ ಸೌಲಭ್ಯಗಳನ್ನು ನೀಡುವ ಬಗ್ಗೆ ದಿನಾಂಕ: 07.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

8. **ಶ್ರೀ ಗೋವಿಂದರಾಜು** ಅವರು ಕೋಲಾರ ಜಿಲ್ಲೆಯಲ್ಲಿ ಕೆ.ಸಿ. ವ್ಯಾಲಿಯಿಂದ ನೀರು ಹರಿಯುತ್ತಿರುವ ಕೆರೆಗಳಲ್ಲಿನ ಜೊಂಡು ನಿವಾರಣೆ ಹಾಗೂ ಕೆರೆಗಳ ಸಂರಕ್ಷಣೆ ಬಗ್ಗೆ ದಿನಾಂಕ: 07.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

9. **ಶ್ರೀ ವೈ.ಎಂ. ಸತೀಶ್** ಅವರು ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕು ಮತ್ತು ರಾಜ್ಯದ ಇನ್ನಿತರ ತಾಲ್ಲೂಕುಗಳಲ್ಲಿ ಶಿಕ್ಷಕರ ವಸತಿ ಗೃಹಗಳ ಕಾಮಗಾರಿ ಅನುದಾನದ ಕೊರತೆಯಿಂದ ಅರ್ಧಕ್ಕೆ ನಿಂತಿರುವ ಬಗ್ಗೆ ದಿನಾಂಕ:08.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

## 5. ನಿಯಮ 68ರ ಮೇರೆಗೆ ಚರ್ಚೆ

**ಶ್ರೀಯುತರುಗಳಾದ ಕೋಟ ಶ್ರೀನಿವಾಸ ಪೂಜಾರಿ, ಎನ್. ರವಿಕುಮಾರ್, ನಿರಾಣಿ ಹಣಮಂತ್ ರುದ್ರಪ್ಪ ಹಾಗೂ ಛಲವಾದಿ ಟಿ. ನಾರಾಯಣಸ್ವಾಮಿ** ಅವರುಗಳು ರಾಜ್ಯದಲ್ಲಿ ಉಂಟಾಗಿರುವ ಬರಗಾಲದ ಪರಿಸ್ಥಿತಿಯನ್ನು

ನಿಭಾಯಿಸಲು ಮುಂಜಾಗ್ರತಾ ಕ್ರಮಕೈಗೊಳ್ಳುವಲ್ಲಿ ಸರ್ಕಾರ ವಿಫಲವಾಗಿರುವ ಕುರಿತು ಪ್ರಸ್ತಾಪಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ

ಮಧ್ಯಾಹ್ನ 1.25 ಗಂಟೆಯಲ್ಲಿ **ಶ್ರೀ ಮಂಜುನಾಥ್ ಭಂಡಾರಿ** ಅವರು ಸಭಾಪತಿಯವರ ಪೀಠದಲ್ಲಿ ಆಸೀನರಾದರು.

ಮಧ್ಯಾಹ್ನ 1.43 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಸಭಾಪತಿಯವರ ಪೀಠದಲ್ಲಿ ಆಸೀನರಾದರು.

2. ಶ್ರೀ ನಿರಾಣಿ ಹಣಮಂತ್ ರುದ್ರಪ್ಪ

ಮಧ್ಯಾಹ್ನ 2.04 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಪ್ರಕಟಿಸಿದರು.

ಮಧ್ಯಾಹ್ನ 3.22 ಗಂಟೆಗೆ ಮಾನ್ಯ ಉಪ ಸಭಾಪತಿಯವರ (**ಶ್ರೀ ಎಂ.ಕೆ. ಪ್ರಾಣೇಶ್**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**ನಿಯಮ 68ರ ಮೇರೆಗೆ ಮುಂದುವರೆದ ಚರ್ಚೆ**

**ಶ್ರೀಯುತರುಗಳಾದ ಕೋಟ ಶ್ರೀನಿವಾಸ ಪೂಜಾರಿ, ಎನ್. ರವಿಕುಮಾರ್, ನಿರಾಣಿ ಹಣಮಂತ್ ರುದ್ರಪ್ಪ ಹಾಗೂ ಛಲವಾದಿ ಟಿ. ನಾರಾಯಣಸ್ವಾಮಿ** ಅವರುಗಳು ರಾಜ್ಯದಲ್ಲಿ ಉಂಟಾಗಿರುವ ಬರಗಾಲದ ಪರಿಸ್ಥಿತಿಯನ್ನು ನಿಭಾಯಿಸಲು ಮುಂಜಾಗ್ರತಾ ಕ್ರಮಕೈಗೊಳ್ಳುವಲ್ಲಿ ಸರ್ಕಾರ ವಿಫಲವಾಗಿರುವ ಕುರಿತು ಮುಂದುವರೆದ ಚರ್ಚೆ.

3. ಡಾ: ತೇಜಸ್ವಿನಿಗೌಡ

4. ಶ್ರೀ ಯು.ಬಿ. ವೆಂಕಟೇಶ್

5. ಶ್ರೀ ಪಿ.ಹೆಚ್. ಪೂಜಾರ್

## 6. ಪ್ರಕಟಣೆ

**1.** ನಮ್ಮ ರಾಜ್ಯಕ್ಕೆ ಕರ್ನಾಟಕ ಎಂದು ಮರುನಾಮಕರಣವಾಗಿ 1ನೇ ನವೆಂಬರ್ 2023ರಂದು 50 ವರ್ಷ ಪೂರ್ಣಗೊಂಡ ಸುವರ್ಣ ಮಹೋತ್ಸವದ ಸುಸಂದರ್ಭದಲ್ಲಿ "ಕರ್ನಾಟಕ ಸಂಭ್ರಮ-50" "ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ" ಎಂಬ ಶೀರ್ಷಿಕೆಯಡಿ ರಾಜ್ಯದಾದ್ಯಂತ ವರ್ಷ ಪೂರ್ತಿ ವೈವಿಧ್ಯಮಯ, ವರ್ಣಮಯ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ತೀರ್ಮಾನಿಸಿರುವ ಹಿನ್ನೆಲೆಯಲ್ಲಿ ಕರ್ನಾಟಕ ಸುವರ್ಣ ಸಂಭ್ರಮವನ್ನು ದಿನಾಂಕ:12.12.2023ರ ಮಂಗಳವಾರದಂದು ಸಂಜೆ 06.30 ಗಂಟೆಗೆ ಸುವರ್ಣ ವಿಧಾನ ಸೌಧದ ಆವರಣದಲ್ಲಿ ಕರ್ನಾಟಕ ವಿಧಾನ ಮಂಡಲದ ವತಿಯಿಂದ ಆಚರಿಸಲು ತೀರ್ಮಾನಿಸಲಾಗಿದೆ.

ಈ ಸುಸಂದರ್ಭದಲ್ಲಿ ಕರ್ನಾಟಕ ವಿಧಾನ ಮಂಡಲದ ಉಭಯ ಸದನಗಳಲ್ಲಿ ಸಭಾಪತಿಗಳು/ಸಭಾಧ್ಯಕ್ಷರಾಗಿ ಸೇವೆ ಸಲ್ಲಿಸಿದ ಗಣ್ಯರುಗಳನ್ನು ಸನ್ಮಾನಿಸಲಾಗುವುದು. ಈ ಕಾರ್ಯಕ್ರಮದಲ್ಲಿ ಗೌರವಾನ್ವಿತ ರಾಜ್ಯಪಾಲರು, ಸನ್ಮಾನ್ಯ ಮುಖ್ಯಮಂತ್ರಿಗಳು ಹಾಗೂ ಇತರೆ ಗಣ್ಯರುಗಳು ಭಾಗವಹಿಸಲಿರುವರು.

ಸದರಿ ಸಮಾರಂಭದಲ್ಲಿ ಎಲ್ಲಾ ಮಾನ್ಯ ಶಾಸಕರುಗಳು ಪಾಲ್ಗೊಳ್ಳಬೇಕೆಂದು ಮಾನ್ಯ ಸಭಾಪತಿಯವರು ಪ್ರಕಟಿಸಿದರು.

## ನಿಯಮ 68ರ ಮೇರೆಗೆ ಮುಂದುವರೆದ ಚರ್ಚೆ

6. ಶ್ರೀ ಕೆ.ಎ. ತಿಪ್ಪೇಸ್ವಾಮಿ

## ಪ್ರಕಟಣೆ

**2.** ವಿಧಾನ ಪರಿಷತ್ತಿನ ಮಾನ್ಯ ಶಾಸಕರಾದ ಶ್ರೀ ಎನ್. ನಾಗರಾಜು (ಎಂ.ಟಿ.ಬಿ)ರವರು ಅನಾರೋಗ್ಯದ ನಿಮಿತ್ತ ಸದನದ ಕಾರ್ಯಕಲಾಪಗಳಲ್ಲಿ ಭಾಗವಹಿಸಲು ಸಾಧ್ಯವಾಗುತ್ತಿಲ್ಲದ ಕಾರಣ ಸದನದ ಕಾರ್ಯಕಲಾಪಗಳಲ್ಲಿ ಗೈರು ಹಾಜರಾಗಲು ಅನುಮತಿ

ಕೋರಿರುವ ಬಗ್ಗೆ ಮಾನ್ಯ ಸಭಾಪತಿಯವರು ಪ್ರಕಟಿಸಿ ಸದನದ ಸಹಮತಿಯನ್ನು ಪಡೆಯಲಾಯಿತು.

**ನಿಯಮ 68ರ ಮೇರೆಗೆ ಮುಂದುವರೆದ ಚರ್ಚೆ**

7. ಶ್ರೀ ಎನ್. ರವಿಕುಮಾರ್

**ಪ್ರಕಟಣೆ**

**ಮಾನ್ಯ ಸಭಾಧ್ಯಕ್ಷರಿಂದ ಬಂದಿರುವ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.**

**3.** ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ 104ನೇ ನಿಯಮದ ಮೇರೆಗೆ ವಿಧಾನ ಸಭೆಯು ದಿನಾಂಕ:13.12.2023ರಂದು ಕರ್ನಾಟಕ ಉಚ್ಚ ನ್ಯಾಯಾಲಯ (ತಿದ್ದುಪಡಿ) ವಿಧೇಯಕ, 2023ನ್ನು ತಿದ್ದುಪಡಿಯೊಂದಿಗೆ ಹಾಗೂ ಈ ಕೆಳಕಂಡ ವಿಧೇಯಕಗಳನ್ನು ಯಾವುದೇ ತಿದ್ದುಪಡಿಗಳಿಲ್ಲದೇ ಅಂಗೀಕರಿಸಿರುತ್ತದೆಂದು ಹಾಗೂ ಸದರಿ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಲಾಗಿದೆ.

01. ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ, 2023

02. ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ, 2023

03. ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ (ತಿದ್ದುಪಡಿ) ವಿಧೇಯಕ, 2023

04. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2023

05. ಕರಾವಳಿ ಅಭಿವೃದ್ಧಿ ಮಂಡಲಿ ವಿಧೇಯಕ, 2023

**ನಿಯಮ 68ರ ಮೇರೆಗೆ ಮುಂದುವರೆದ ಚರ್ಚೆ**

8. ಶ್ರೀ ಎಸ್.ವ್ಹಿ. ಸಂಕನೂರ

9. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.

ಸಂಜೆ 5.01 ಗಂಟೆಗೆ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

10. ಶ್ರೀ ಮರಿತಿಬ್ಬೇಗೌಡ

ಸಂಜೆ 5.58 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿಯವರ ಪೀಠದಲ್ಲಿ ಆಸೀನರಾದರು.

11. ಶ್ರೀ ಕೆ.ಎಸ್. ನವೀನ್

12. ಡಾ: ತಳವಾರ್ ಸಾಬಣ್ಣ

**7. ನಿಯಮ 330ರ ಮೇರೆಗೆ ನಡೆದ ಚರ್ಚೆಗೆ ಸರ್ಕಾರದಿಂದ ಉತ್ತರ**

**ಶ್ರೀಯುತರುಗಳಾದ ಕೋಟ ಶ್ರೀನಿವಾಸ ಪೂಜಾರಿ, ಎನ್. ರವಿಕುಮಾರ್, ಡಾ: ವೈ.ಎ. ನಾರಾಯಣಸ್ವಾಮಿ, ಶರವಣ ಟಿ.ಎ., ಛಲವಾದಿ ಟಿ. ನಾರಾಯಣಸ್ವಾಮಿ ಹಾಗೂ ಇತರರು** ರಾಷ್ಟ್ರೀಯ ಶಿಕ್ಷಣ ನೀತಿ–2020ನ್ನು ರದ್ದುಗೊಳಿಸಿರುವುದರಿಂದ ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳಲ್ಲಿ ತಲೆದೋರಿರುವ ಗೊಂದಲ–ಆತಂಕಗಳ ಗಂಭೀರ ವಿಷಯದ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರು ಹಾಗೂ ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಡಾ: ವೈ.ಎ. ನಾರಾಯಣಸ್ವಾಮಿ
2. ಡಾ: ತೇಜಸ್ವಿನಿಗೌಡ
3. ಶ್ರೀ ಕೆ.ಎ. ತಿಪ್ಪೇಸ್ವಾಮಿ
4. ಶ್ರೀ ಎನ್. ರವಿಕುಮಾರ್
5. ಶ್ರೀ ಎಸ್.ವ್ಹಿ. ಸಂಕನೂರ
6. ಶ್ರೀ ಕೆ.ಎಸ್. ನವೀನ್

7. ಡಾ: ತಳವಾರ್ ಸಾಬಣ್ಣ

8. ಶ್ರೀ ಡಿ.ಎಸ್. ಅರುಣ್

ಸಂಜೆ 7.40 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:12.12.2023ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಪೀಠದಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

****

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೊಂದನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಮಂಗಳವಾರ, ದಿನಾಂಕ:12.12.2023**

**(07)**

ಸದನವು ಬೆಳಗ್ಗೆ: 11.19 ಗಂಟೆಗೆ ಮಾನ್ಯ ಉಪ ಸಭಾಪತಿಯವರ **(ಶ್ರೀ ಎಂ.ಕೆ. ಪ್ರಾಣೇಶ್)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಶ್ನೋತ್ತರ

ದಿನಾಂಕ:12.12.2023ರಂದು ಸದನದಲ್ಲಿ ಉತ್ತರಿಸುವ ಸಮೂಹ–IIರ 7ನೇ ಪಟ್ಟಿಯ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

| | | |
|---|---|---|
| 1. | 91(850) | |
| 2. | 92(787) | |
| 3. | 93(837) | ಕಾಲಾವಕಾಶ |
| 4. | 94(853) | |
| 5. | 95(768) | |
| 6. | 96(824) | |
| 7. | 97(798) | |
| 8. | 98(808) | |
| 9. | 99(801) | |
| 10. | 100(814) | ಕಾಲಾವಕಾಶ |
| 11. | 101(812) | |

12. 102(786)

13. 103(773)

14. 104(832)

15. 105(844)

**ದಿನಾಂಕ:05.12.2023ರ ಸಮೂಹ–IIರ 2ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆಗಳು**

1. 19(174)

2. 21(152)

ದಿನಾಂಕ:12.12.2023ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IIರ 7ನೇ ಪಟ್ಟಿಯ ಒಟ್ಟು 80 ಪ್ರಶ್ನೆಗಳ ಪೈಕಿ 48 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

**2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು**

**ಕಾರ್ಯದರ್ಶಿಯವರು ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದೆ ಮಂಡಿಸಿದರು.**

01. ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ, 2023

02. ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ, 2023

03. ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ (ತಿದ್ದುಪಡಿ) ವಿಧೇಯಕ, 2023

04. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2023

05. ಕರಾವಳಿ ಅಭಿವೃದ್ಧಿ ಮಂಡಲಿ ವಿಧೇಯಕ, 2023

## 3. ವಿತ್ತೀಯ ಕಾರ್ಯಕಲಾಪ

ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಮಾನ್ಯ ಸಭಾನಾಯಕರು 2023–24ನೇ ಸಾಲಿನ ಪೂರಕ ಅಂದಾಜುಗಳನ್ನು (ಮೊದಲನೇ ಕಂತು) ಮಂಡಿಸಿದರು.

## 4. ಶೂನ್ಯವೇಳೆ

1. **ಶ್ರೀ ಪ್ರದೀಪ್ ಶೆಟ್ಟರ್** ಅವರು ಹುಬ್ಬಳ್ಳಿ ನಗರದ ರಾಣಿ ಚೆನ್ನಮ್ಮ ವೃತ್ತ ಎಂಟು ರಸ್ತೆಗಳು ಸಂಧಿಸುವ ಟ್ರಾಫಿಕ್ ಜಂಕ್ಷನ್ ಆಗಿದ್ದು, ಮೇಲ್ಸೇತುವೆ ಕಾಮಗಾರಿ ಸ್ಥಗಿತಗೊಂಡಿರುವುದರಿಂದ ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಲೋಕೋಪಯೋಗಿ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ಎನ್. ರವಿಕುಮಾರ್** ಅವರು ಈಡಿಗ, ಬಿಲ್ಲವ, ನಾಮಧಾರಿ, ದೀವರು ಸಮುದಾಯದ ಅಭಿವೃದ್ಧಿಗಾಗಿ ನಾರಾಯಣಗುರು ನಿಗಮಕ್ಕೆ 500 ಕೋಟಿ ರೂಪಾಯಿಗಳ ಅನುದಾನ ಬಿಡುಗಡೆ ಮಾಡುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀಮತಿ ಹೇಮಲತಾ ನಾಯಕ್** ಅವರು ಸರ್ಕಾರಿ ಆಸ್ಪತ್ರೆಗಳಿಗೆ ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮವು ಜೀವ ರಕ್ಷಕ ಔಷಧಗಳನ್ನು ಖರೀದಿಸಿ ಒದಗಿಸದಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ಎಸ್.ವ್ಹಿ. ಸಂಕನೂರ** ಅವರು ರಾಜ್ಯದಲ್ಲಿ ತಾಂತ್ರಿಕ ಶಿಕ್ಷಣ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ

ವೇತನ ಪರಿಷ್ಕರಣೆ ಮಾಡದಿರುವುದರಿಂದ 12 ದಿನಗಳಿಂದ ತರಗತಿಗಳಿಗೆ ಬಹಿಷ್ಕಾರ ಮಾಡಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮಹಿಳಾ ಅಧ್ಯಯನ ವಿಷಯವನ್ನು ಪಠ್ಯ ಕ್ರಮವಾಗಿ ಪ್ರಾರಂಭಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ಅ. ದೇವೇಗೌಡ** ಅವರು ರಾಜ್ಯದಲ್ಲಿ ಗಾಂಜಾ, ಡ್ರಗ್ಸ್‌ಗಳ ಕಳ್ಳ ಸಾಗಾಣಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಕಾನೂನು ರೂಪಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀ ಮರಿತಿಬ್ಬೇಗೌಡ** ಅವರು ಸರ್ಕಾರಿ ಪದವಿ ಪೂರ್ವ ಕಾಲೇಜಿನ ಎಲ್ಲಾ ವಿದ್ಯಾರ್ಥಿಗಳಿಗೂ “ವಿಶ್ವಾಸ ಕಿರಣ” ಯೋಜನೆಯನ್ನು ಪುನಃ ಪ್ರಾರಂಭಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ಹರೀಶ್ ಕುಮಾರ್ ಕೆ.** ಅವರು ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಮೀನುಗಾರಿಕೆ ಉದ್ಯಮ ಸಂಕಷ್ಟದಲ್ಲಿದ್ದು, ಮೀನುಗಾರರಿಗೆ ವಿಶೇಷ ಪ್ಯಾಕೇಜ್ ಪ್ರಕಟಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಉತ್ತರಿಸಿದರು.

ಮಧ್ಯಾಹ್ನ 1.27 ಗಂಟೆಯಲ್ಲಿ ಮಾನ್ಯ ಸಭಾಪತಿಯವರ ಪೀಠದಲ್ಲಿ **ಶ್ರೀ ಶಶೀಲ್ ಜಿ. ನಮೋಶಿ** ಅವರು ಆಸೀನರಾದರು.

9. **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರು ರಾಷ್ಟ್ರಮಟ್ಟದ ಸಾಂಸ್ಕೃತಿಕ ಕ್ರೀಡೆಗಳಲ್ಲಿ ಸಾಧನೆ ಮಾಡಿದ ವಿಜೇತರಿಗೆ ಬಾಗಲಕೋಟೆ ತೋಟಗಾರಿಕೆ ವಿಶ್ವವಿದ್ಯಾಲಯದಲ್ಲಿ ವಿಶೇಷ ಕೋಟಾದಡಿ 2 ಸೀಟುಗಳನ್ನು ಎಂ.ಎಸ್ಸಿ. ವಿದ್ಯಾಭ್ಯಾಸಕ್ಕೆ ಕಾಯ್ದಿರಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

10. **ಶ್ರೀ ಡಿ.ಎಸ್. ಅರುಣ್** ಅವರು ಭದ್ರಾವತಿಯಲ್ಲಿ ಭಾರತೀಯ ಜನತಾ ಪಕ್ಷದ ಯುವ ಮೋರ್ಚಾ ಕಾರ್ಯಕರ್ತ ಗೋಕುಲ್ ಕೃಷ್ಣನ್ ಅವರು ಜಾಲತಾಣದಲ್ಲಿ ಪೋಸ್ಟ್ ಮಾಡಿರುವುದನ್ನು ಖಂಡಿಸಿ ಹಲ್ಲೆ ನಡೆಸಿರುವ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಗೃಹ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 5. ಶೂನ್ಯವೇಳೆಯ ಪ್ರಸ್ತಾವನೆಗಳಿಗೆ ಉತ್ತರ

1. **ಶ್ರೀ ಡಿ.ಎಸ್. ಅರುಣ್** ಅವರು ಹೊಸನಗರ ತಾಲ್ಲೂಕಿನ ನಗರ ಹೋಬಳಿಯ ಬಿದನೂರಿನ ಕೊಪ್ಪಲ ಮಠದಲ್ಲಿರುವ ಕೆಳದಿ ಅರಸರ ಐತಿಹಾಸಿಕ ಸ್ಮಾರಕಗಳನ್ನು ಸಂರಕ್ಷಿಸುವ ಬಗ್ಗೆ ದಿನಾಂಕ:05.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

2. **ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ)** ಅವರು ಕೊಡಗು ಜಿಲ್ಲೆಯ ಮಾಂದಲಪಟ್ಟಿ ಪ್ರವಾಸ ತಾಣವನ್ನು ಅಭಿವೃದ್ಧಿಗೊಳಿಸುವ ಬಗ್ಗೆ ದಿನಾಂಕ: 05.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ

ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

3. **ಶ್ರೀ ಮರಿತಿಬ್ಬೇಗೌಡ** ಅವರು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿರುವ ಉಪನ್ಯಾಸಕರು ಯಾವುದೇ ಬಡ್ತಿ ಇಲ್ಲದೆ ನಿವೃತ್ತಿಯಾಗುತ್ತಿದ್ದು, ಖಾಲಿಯಾಗಲಿರುವ ಪ್ರಾಂಶುಪಾಲರ ಹುದ್ದೆಗಳನ್ನು ಒಳಗೊಂಡಂತೆ ಬಡ್ತಿ ಮೂಲಕ ಭರ್ತಿ ಮಾಡುವ ಬಗ್ಗೆ ದಿನಾಂಕ: 08.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

4. **ಶ್ರೀ ಮರಿತಿಬ್ಬೇಗೌಡ** ಅವರು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅರ್ಹ ಉಪನ್ಯಾಸಕರ ಪರಿವೀಕ್ಷಣಾ ಅವಧಿ ಘೋಷಣೆ ಮಾಡುವ ಬಗ್ಗೆ ದಿನಾಂಕ: 11.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

5. **ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ** ಅವರು ಬೆಳಗಾವಿ ಜಿಲ್ಲೆಯನ್ನು ವಿಭಜಿಸಿ ಚಿಕ್ಕೋಡಿ ಜಿಲ್ಲೆಯೆಂದು ಘೋಷಣೆ ಮಾಡುವ ಬಗ್ಗೆ ದಿನಾಂಕ:11.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

6. **ಡಾ: ತಳವಾರ್ ಸಾಬಣ್ಣ** ಅವರು ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕಿ ಡಾ॥ ರಮಾ ಜಿ. ಗುಂಡೂರಾವ್ ಅವರ ಕೊಠಡಿಯಲ್ಲಿ ವಾಮಾಚಾರ ನಡೆದಿರುವ ಬಗ್ಗೆ ದಿನಾಂಕ: 11.12.2023ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

## 6. ನಿಲುವಳಿ ಸೂಚನೆ

ಶ್ರೀ ಕೋಟ ಶ್ರೀನಿವಾಸ ಪೂಜಾರಿ ಅವರು ರಾಜ್ಯದಲ್ಲಿ ಹಿಂದುಳಿದ ವರ್ಗಗಳು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳು ಹಾಗೂ ಅಲೆಮಾರಿ ಜನಾಂಗದ ಕಲ್ಯಾಣ ಯೋಜನೆಗಳು ಸ್ಥಗಿತಗೊಂಡಿರುವ ಕುರಿತು ನಿಯಮ 59ರ ಅಡಿಯಲ್ಲಿ ಪ್ರಸ್ತಾಪಿಸಲು ಮಾನ್ಯ ಸಭಾಪತಿಯವರಲ್ಲಿ ಅನುಮತಿ ಕೋರಿದರು.

59ರಡಿಯ ಸೂಚನೆಯನ್ನು ನಿಯಮ 68ಕ್ಕೆ ಪರಿವರ್ತಿಸಿ ಚರ್ಚೆಗೆ ಅವಕಾಶ ಕಲ್ಪಿಸಿಕೊಡುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

## 07. ಗಮನ ಸೆಳೆಯುವ ಸೂಚನೆ

**ಶ್ರೀಯುತರುಗಳಾದ ಕೆ.ಎ. ತಿಪ್ಪೇಸ್ವಾಮಿ, ಉಮಾಶ್ರೀ, ಭಾರತಿ ಶೆಟ್ಟಿ, ಶರವಣ ಟಿ.ಎ, ಬಿ.ಎಂ. ಫಾರೂಖ್ ಹಾಗೂ** ಸಿ.ಎನ್. **ಮಂಜೇಗೌಡ** ಅವರುಗಳು ರಾಜ್ಯದಲ್ಲಿ ಕಾನೂನು ಬಾಹಿರವಾಗಿ ಭ್ರೂಣ ಪರೀಕ್ಷೆ ಮತ್ತು ಭ್ರೂಣ ಹತ್ಯೆ ಪ್ರಕರಣಗಳು ವ್ಯಾಪಕವಾಗಿ ಹೆಚ್ಚುತ್ತಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಸದಸ್ಯರು ಸ್ಪಷ್ಟೀಕರಣ ಕೋರಿದರು.

1. ಶ್ರೀಮತಿ ಭಾರತಿ ಶೆಟ್ಟಿ

ಮಧ್ಯಾಹ್ನ 2.09 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.15 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಶಶೀಲ್ ಜಿ. ನಮೋಶಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.35 ಗಂಟೆಗೆ ಮಾನ್ಯ ಉಪ ಸಭಾಪತಿಯವರ **(ಶ್ರೀ ಎಂ.ಕೆ. ಪ್ರಾಣೇಶ್)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**ಗಮನ ಸೆಳೆಯುವ ಸೂಚನೆ**

**ಶ್ರೀಯುತರುಗಳಾದ ಕೆ.ಎ. ತಿಪ್ಪೇಸ್ವಾಮಿ, ಉಮಾಶ್ರೀ, ಭಾರತಿ ಶೆಟ್ಟಿ, ಶರವಣ ಟಿ.ಎ, ಬಿ.ಎಂ. ಫಾರೂಖ್ ಹಾಗೂ ಸಿ.ಎನ್. ಮಂಜೇಗೌಡ** ಅವರುಗಳು ರಾಜ್ಯದಲ್ಲಿ ಕಾನೂನು ಬಾಹಿರವಾಗಿ ಭ್ರೂಣ ಪರೀಕ್ಷೆ ಮತ್ತು ಭ್ರೂಣ ಹತ್ಯೆ ಪ್ರಕರಣಗಳು ವ್ಯಾಪಕವಾಗಿ ಹೆಚ್ಚುತ್ತಿರುವ ಕುರಿತು ಮುಂದುವರೆದ ಚರ್ಚೆ.

2. ಶ್ರೀಮತಿ ಉಮಾಶ್ರೀ

3. ಡಾ: ತೇಜಸ್ವಿನಿ ಗೌಡ

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸ್ಪಷ್ಟೀಕರಣ ನೀಡಿದರು.

4. ಶ್ರೀಮತಿ ಹೇಮಲತಾ ನಾಯಕ್

5. ಶ್ರೀ ಕೆ.ಎ. ತಿಪ್ಪೇಸ್ವಾಮಿ

6. ಶ್ರೀ ಶರವಣ ಟಿ.ಎ.

7. ಡಾ: ಡಿ. ತಿಮ್ಮಯ್ಯ

8. ಶ್ರೀ ವೈ.ಎಂ. ಸತೀಶ್

9. ಶ್ರೀ ಕೇಶವ ಪ್ರಸಾದ್ ಎಸ್

10. ಶ್ರೀ ಚಿದಾನಂದ್ ಎಂ. ಗೌಡ

11. ಶ್ರೀ ಎನ್. ರವಿಕುಮಾರ್

ಸಂಜೆ 5.07 ಗಂಟೆಯಲ್ಲಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಸ್ಪಷ್ಟೀಕರಣ ನೀಡಿದರು.

**8. ಶಾಸನ ರಚನೆ**

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**“ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ”, 2023**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ **“ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ”, 2023**ನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ **ಮಾನ್ಯ ಕಂದಾಯ ಸಚಿವರು** ವಿಧೇಯಕದ ಕುರಿತು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಕೇಶವ ಪ್ರಸಾದ್ ಎಸ್
2. ಶ್ರೀ ಕೆ.ಎ. ತಿಪ್ಪೇಸ್ವಾಮಿ
3. ಶ್ರೀ ಕೆ.ಎಸ್. ನವೀನ್
4. ಶ್ರೀ ಪಿ.ಹೆಚ್. ಪೂಜಾರ್
5. ಡಾ: ತೇಜಸ್ವಿನಿಗೌಡ
6. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.
7. ಶ್ರೀ ಶರವಣ ಟಿ.ಎ
8. ಶ್ರೀ ನಿರಾಣಿ ಹಣಮಂತ್ ರುದ್ರಪ್ಪ
9. ಶ್ರೀ ಎನ್. ರವಿಕುಮಾರ್

ಮಾನ್ಯ ಕಂದಾಯ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

ಸಂಜೆ 6.24 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:13.12.2023ರಂದು ಬೆಳಗ್ಗೆ 10.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

****

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೊಂದನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಬುಧವಾರ, ದಿನಾಂಕ:13.12.2023**

**(08)**

ಸದನವು ಬೆಳಗ್ಗೆ: 10.33 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. **ಪ್ರಶ್ನೋತ್ತರ**

ದಿನಾಂಕ:13.12.2023ರಂದು ಸದನದಲ್ಲಿ ಉತ್ತರಿಸುವ ಸಮೂಹ–ಖಖಖರ 8ನೇ ಪಟ್ಟಿಯ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 106(934)
2. 107(860)
3. 108(932)

**"ಗದ್ದಲ"**

ಬೆಳಗ್ಗೆ 10.48 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಬೆಳಗ್ಗೆ 11.14 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಪುನ: ಸಭೆ ಸೇರಿತು.

ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಹೇಳಿಕೆಯನ್ನು ಮಾನ್ಯ ಶಾಸಕರುಗಳು ವಿರೋಧಿಸಿ ಮಾತನಾಡಿದರು.

**"ಗದ್ದಲ"**

ಬೆಳಗ್ಗೆ 11.32 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಬೆಳಗ್ಗೆ 11.55 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**ಭಾರತೀಯ ಜನತಾ ಪಕ್ಷದ** ಮಾನ್ಯ ಶಾಸಕರುಗಳು ಸಭಾತ್ಯಾಗ ಮಾಡಿದರು.

| | | |
|---|---|---|
| 4. | 109(899) | |
| 5. | 110(939) | |
| 6. | 111(884) | |
| 7. | 112(931) | |
| 8. | 113(965) | ವರ್ಗಾವಣೆ |
| 9. | 114(915) | |
| 10. | 115(854) | |
| 11. | 116(950) | |
| 12. | 117(966) | |
| 13. | 118(948) | |
| 14. | 119(880) | ಗೈರುಹಾಜರಿ |
| 15. | 120(945) | |

**ದಿನಾಂಕ:06.12.2023ರ ಸಮೂಹ–IIIರ 3ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆಗಳು**

| | | |
|---|---|---|
| 1. | 35(316) | ಗೈರು ಹಾಜರಿ |
| 2. | 37(252) | ಉತ್ತರಿಸಲಾಗಿದೆ |

**ದಿನಾಂಕ:08.12.2023ರ ಸಮೂಹ–Vರ 5ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆ**

1. 66(478) ಗೈರು ಹಾಜರಿ

**ದಿನಾಂಕ:11.12.2023ರ ಸಮೂಹ–Iರ 6ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆ**

1. 88(605) ಉತ್ತರಿಸಲಾಗಿದೆ

ದಿನಾಂಕ:13.12.2023ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IIIರ 8ನೇ ಪಟ್ಟಿಯ ಒಟ್ಟು 100 ಪ್ರಶ್ನೆಗಳ ಪೈಕಿ 73 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 2. ವರದಿಯನ್ನೊಪ್ಪಿಸುವುದು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ಪರವಾಗಿ ಶ್ರೀ ಪ್ರಕಾಶ್ ಹುಕ್ಕೇರಿ** ಅವರು 2023–24ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಸಾರ್ವಜನಿಕ ಉದ್ಯಮಗಳ ಸಮಿತಿಯ 136ನೇ ವರದಿಯನ್ನೊಪ್ಪಿಸಿದರು.

## 3. ಶೂನ್ಯವೇಳೆ

**1.** **ಶ್ರೀಮತಿ ಹೇಮಲತಾ ನಾಯಕ್** ಅವರು ಸವದತ್ತಿ ತಾಲ್ಲೂಕಿನ ಮುರಗೋಡ ಗ್ರಾಮದ ಅಂಗನವಾಡಿ ಕಟ್ಟಡ ಶಿಥಿಲಾವಸ್ಥೆಯಲ್ಲಿದ್ದು ಮಕ್ಕಳಿಗೆ ಬೀಡಾ ಅಂಗಡಿಯಲ್ಲಿ ಕಲಿಕೆಯನ್ನು ನಡೆಸುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

**2.** **ಶ್ರೀ ಎಂ. ನಾಗರಾಜು** ಅವರು ಖಾನಾಪುರ ಪಟ್ಟಣದಲ್ಲಿರುವ ವಿವಿಧ ಇಲಾಖೆಗಳ ಸರ್ಕಾರಿ ಕಟ್ಟಡಗಳು ಬಳಕೆಯಾಗದೆ ಇರುವುದರಿಂದ

ಸ್ವಂತ ಕಟ್ಟಡವಿಲ್ಲದ ಸರ್ಕಾರಿ ಕಚೇರಿಗಳನ್ನು ಇದರ ಬಳಕೆ ಮಾಡಿಕೊಳ್ಳಲು ಅಗತ್ಯ ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಲೋಕೋಪಯೋಗಿ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ಶರವಣ ಟಿ.ಎ.** ಅವರು ರೇರಾ ವೆಬ್‌ಸೈಟ್ ವಸತಿ ಯೋಜನೆಗಳ ಕಾಮಗಾರಿ ಹಾಗೂ ಇನ್ನಿತರೆ ನೋಂದಣಿ ಕಾರ್ಯಗಳು ಪೂರ್ಣಗೊಂಡ ನಂತರ ಎಲ್ಲಾ ದಾಖಲೆಗಳನ್ನು ಅಪ್‌ಲೋಡ್ ಮಾಡಲು ಕ್ರಮವಹಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ಸೂರಜ್ ರೇವಣ್ಣ** ಅವರು ಅರಸೀಕೆರೆ ನಗರಸಭೆಯ 31 ವಾರ್ಡ್‌ಗಳ ಮೂಲಭೂತ ಸೌಕರ್ಯಕ್ಕಾಗಿ ಅನುದಾನ ಮಂಜೂರಾಗಿದ್ದರೂ ಕೆಲವೊಂದು ವಾರ್ಡ್‌ಗಳಿಗೆ ಅನುದಾನ ಮಂಜೂರು ಮಾಡಿ ತಾರತಮ್ಯವೆಸಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ಶಾಂತಾರಾಮ್ ಬುಡ್ನ** ಸಿದ್ದಿ ಅವರು ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕಿನ ನಾಗರಗಾಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಹುಂಬ್ರಾಪಾಣಿ, ಕೊಸೆಕೊಪ್ಪ ಮತ್ತು ಬಾಳಗುಂದ ಗ್ರಾಮಗಳಲ್ಲಿ ವಾಸಿಸುತ್ತಿರುವ ಧನಗರ ಗೌಳಿ ಜನಾಂಗದವರು ಮೂಲಸೌಕರ್ಯಗಳಿಂದ ವಂಚಿತರಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ಎಸ್.ಎಲ್. ಭೋಜೇಗೌಡ** ಅವರು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅನುದಾನ ಮತ್ತು ಅನುದಾನ ರಹಿತ ಶಾಲೆಗಳ ಮಾನ್ಯತೆ ನವೀಕರಣಕ್ಕೆ ನೋಂದಣಿ ಶುಲ್ಕ ಪಾವತಿಸಲಾಗಿದ್ದು, ಅರ್ಜಿ

ತಿರಸ್ಕೃತಗೊಂಡ ಕಾರಣ ಪುನಃ ಎರಡನೇ ಬಾರಿ ನೋಂದಣಿ ಶುಲ್ಕ ಕಟ್ಟಿಸಿಕೊಂಡಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಡಾ: ತೇಜಸ್ವಿನಿ ಗೌಡ** ಅವರು ಮೈಸೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಶಿಥಿಲಾವಸ್ಥೆಯಲ್ಲಿರುವ ಅಮೂಲ್ಯ ಸ್ಮಾರಕಗಳು ಮತ್ತು ಪಾರಂಪರಿಕ ಕಟ್ಟಡಗಳನ್ನು ಜೀರ್ಣೋದ್ದಾರಗೊಳಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀಯುತರುಗಳಾದ ಹೆಚ್.ಎಸ್. ಗೋಪಿನಾಥ್ ಹಾಗೂ ಮಂಜುನಾಥ್ ಭಂಡಾರಿ** ಅವರುಗಳು ಹಳ್ಳಿಗಳಲ್ಲಿ ನಕಲಿ ವೈದ್ಯರ ಹಾವಳಿ ತಡೆಗಟ್ಟುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

ಮಧ್ಯಾಹ್ನ 1.42 ಗಂಟೆಯಲ್ಲಿ **ಡಾ: ತೇಜಸ್ವಿನಿ ಗೌಡ** ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

9. **ಶ್ರೀ ಕೇಶವ ಪ್ರಸಾದ್ ಎಸ್** ಅವರು ಕಿತ್ತೂರು ಅಭಿವೃದ್ಧಿಗೆ ಮಂಜೂರಾಗಿರುವ ಹಣ ದುರ್ಬಳಕೆಯಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

10. **ಡಾ: ವೈ.ಎ. ನಾರಾಯಣಸ್ವಾಮಿ** ಅವರು ಕೊಪ್ಪಳ ಜಿಲ್ಲೆ/ತಾಲ್ಲೂಕಿನ ಹಿರೇಬಗನಾಳ ಮತ್ತು ಹಾಲವರ್ತಿ ಗ್ರಾಮ ಪಾಂಚಾಯಿತಿಗಳ

ವ್ಯಾಪ್ತಿಯಲ್ಲಿರುವ ಕಾರ್ಖಾನೆಗಳು ಹೊರಸೂಸುತ್ತಿರುವ ಹೊಗೆ ಮತ್ತು ಧೂಳಿನಿಂದ ಪರಿಸರ ಮಾಲಿನ್ಯವಾಗುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

ಮಧ್ಯಾಹ್ನ 1.48 ಗಂಟೆಯಲ್ಲಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

**11.** **ಶ್ರೀ ಚಿದಾನಂದ್ ಎಂ. ಗೌಡ** ಅವರು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳಾಗಿ ಕಾರ್ಯ ನಿರ್ವಹಿಸುತ್ತಿರುವವರಿಗೆ ವೇತನ ಪರಿಷ್ಕರಣೆ ಮತ್ತು ಸೇವಾ ಭದ್ರತೆ ಒದಗಿಸುವಂತೆ ಕೋರಿ 15 ದಿನಗಳಿಂದ ತರಗತಿ ಬಹಿಷ್ಕರಿಸಿ ಮುಷ್ಕರ ನಡೆಸುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರು ಉತ್ತರಿಸಿದರು.

**12.** **ಶ್ರೀ ಯು.ಬಿ. ವೆಂಕಟೇಶ್** ಅವರು ಕೇಂದ್ರ ಸರ್ಕಾರದ ಉದ್ದಿಮೆಗಳಲ್ಲಿ ಗ್ರೂಪ್ 'ಸಿ' ಮತ್ತು 'ಡಿ' ದರ್ಜೆಯ ಹುದ್ದೆಗಳಿಗೆ ಹಿಂದಿ ಮತ್ತು ಆಂಗ್ಲ ಭಾಷೆಯಲ್ಲಿ ಮಾತ್ರವೇ ಪರೀಕ್ಷೆ ನಡೆಸಿದ್ದು ಕನ್ನಡಿಗರಿಗೆ ಅವಕಾಶ ವಂಚಿತರನ್ನಾಗಿ ಮಾಡಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 4. ಶೂನ್ಯವೇಳೆ ಪ್ರಸ್ತಾವನೆಗಳಿಗೆ ಉತ್ತರ

**1.** **ಶ್ರೀಯುತರುಗಳಾದ ಮಂಜುನಾಥ್ ಭಂಡಾರಿ ಹಾಗೂ ಎನ್. ರವಿಕುಮಾರ್** ಅವರು ಶೈಕ್ಷಣಿಕ ವರ್ಷದಲ್ಲಿ ಮಕ್ಕಳ ಶಾಲೆ ಸೇರ್ಪಡೆ ಪ್ರಕ್ರಿಯೆಯಲ್ಲಿ ಆಗುತ್ತಿರುವ ವಯೋಮಿತಿ ಗೊಂದಲ ಕುರಿತು ದಿನಾಂಕ:08.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

2. **ಶ್ರೀ ಡಿ.ಎಸ್. ಅರುಣ್** ಅವರು ಮಲೆನಾಡನ್ನು ಕಾಡುತ್ತಿರುವ ಕ್ಯಾಸನೂರು ಫಾರೆಸ್ಟ್ ಡಿಸೀಸ್ ಎಂಬ ಮಂಗನ ಕಾಯಿಲೆಗೆ ಚಿಕಿತ್ಸೆ ಮತ್ತು ನಿವಾರಣೆಗೆ ಕ್ರಮ ಕೈಗೊಳ್ಳುವ ಕುರಿತು ದಿನಾಂಕ:11.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

3. **ಶ್ರೀಮತಿ ಹೇಮಲತಾ ನಾಯಕ್** ಅವರು ಸರ್ಕಾರಿ ಆಸ್ಪತ್ರೆಗಳಿಗೆ ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮವು ಜೀವ ರಕ್ಷಕ ಔಷಧಿಗಳನ್ನು ಖರೀದಿಸಿ ಒದಗಿಸದಿರುವ ಕುರಿತು ದಿನಾಂಕ:12.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

## 5. ಶಾಸನ ರಚನೆ

### ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

**1. "ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ(ತಿದ್ದುಪಡಿ) ವಿಧೇಯಕ", 2023**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ **"ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ(ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. **ಡಾ: ತೇಜಸ್ವಿನಿ ಗೌಡ**
2. **ಶ್ರೀ ಎಸ್.ವ್ಹಿ. ಸಂಕನೂರ**
3. **ಶ್ರೀ ಕೆ.ಎ. ತಿಪ್ಪೇಸ್ವಾಮಿ**
4. **ಡಾ: ಡಿ. ತಿಮ್ಮಯ್ಯ**

5. **ಡಾ: ವೈ.ಎ. ನಾರಾಯಣಸ್ವಾಮಿ**

6. **ಶ್ರೀ ಎಸ್.ಎಲ್. ಭೋಜೇಗೌಡ**

7. **ಶ್ರೀ ಪಿ.ಹೆಚ್. ಪೂಜಾರ್**

8. **ಶ್ರೀ ಕೆ.ಎಸ್. ನವೀನ್**

9. **ಶ್ರೀ ಡಿ.ಎಸ್. ಅರುಣ್**

10. **ಶ್ರೀ ಎನ್.ರವಿಕುಮಾರ್**

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

ಮಧ್ಯಾಹ್ನ 2.43 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಮಧ್ಯಾಹ್ನ 3.45 ಗಂಟೆಗೆ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

## 6. ಹಕ್ಕುಚ್ಯುತಿ ಪ್ರಸ್ತಾವ

ಮಾನ್ಯ ಶಾಸಕರಾದ ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. ಅವರು ಮಂಗಳೂರಿನ ಬೆಳ್ತಂಗಡಿ ತಾಲ್ಲೂಕಿನ ಅರಣ್ಯ ಅಧಿಕಾರಿಗಳ ವಿರುದ್ಧ ಹಕ್ಕುಚ್ಯುತಿ ನಿರ್ಣಯವನ್ನು ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 174ನೇ ನಿಯಮದ ಮೇರೆಗೆ ಹಕ್ಕುಚ್ಯುತಿಯನ್ನು ಸದನದಲ್ಲಿ ಮಂಡಿಸಿದರು. ಸದರಿ ಸೂಚನೆಯನ್ನು ಪರಿಶೀಲಿಸಿ ವರದಿ ಸಲ್ಲಿಸಲು ಹಕ್ಕುಬಾಧ್ಯತಾ ಸಮಿತಿಗೆ ವಹಿಸಿರುವುದಾಗಿ ಮಾನ್ಯ ಸಭಾನಾಯಕರು ಪ್ರಕಟಿಸಿದರು.

## 7. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲೆ ಸರ್ಕಾರದಿಂದ ಉತ್ತರ

**ಶ್ರೀಯುತರುಗಳಾದ ಕೋಟ ಶ್ರೀನಿವಾಸ ಪೂಜಾರಿ, ಎನ್. ರವಿಕುಮಾರ್, ನಿರಾಣಿ ಹಣಮಂತ್ ರುದ್ರಪ್ಪ ಹಾಗೂ ಛಲವಾದಿ ಟಿ. ನಾರಾಯಣಸ್ವಾಮಿ** ಅವರುಗಳು ರಾಜ್ಯದಲ್ಲಿ ಉಂಟಾಗಿರುವ ಬರಗಾಲದ ಪರಿಸ್ಥಿತಿಯನ್ನು ನಿಭಾಯಿಸಲು ಮುಂಜಾಗ್ರತಾ ಕ್ರಮಕೈಗೊಳ್ಳುವಲ್ಲಿ ಸರ್ಕಾರ ವಿಫಲವಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಂದಾಯ ಸಚಿವರು ಉತ್ತರಿಸಿದರು.

ಮಧ್ಯಾಹ್ನ 3.54 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿಯವರ ಪೀಠದಲ್ಲಿ ಆಸೀನರಾದರು.

ಮಧ್ಯಾಹ್ನ 4.26 ಗಂಟೆಗೆ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

ಈ ಕೆಳಕಂಡ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಕೆ.ಎಸ್. ನವೀನ್
2. ಡಾ: ತೇಜಸ್ವಿನಿ ಗೌಡ
3. ಶ್ರೀ ಕೆ.ಎ. ತಿಪ್ಪೇಸ್ವಾಮಿ
4. ಶ್ರೀ ಕೇಶವ ಪ್ರಸಾದ್ ಎಸ್
5. ಶ್ರೀ ಎಸ್.ವ್ಹಿ. ಸಂಕನೂರ
6. ಶ್ರೀ ಎಸ್.ಎಲ್. ಭೋಜೇಗೌಡ
7. ಶ್ರೀ ಎಂ.ಎಲ್. ಅನಿಲ್ ಕುಮಾರ್
8. ಶ್ರೀ ಮರಿತಿಬ್ಬೇಗೌಡ
9. ಶ್ರೀಮತಿ ಭಾರತಿಶೆಟ್ಟಿ
10. ಡಾ: ವೈ.ಎ. ನಾರಾಯಣಸ್ವಾಮಿ
11. ಶ್ರೀ ಎಂ. ನಾಗರಾಜು

ಮಾನ್ಯ ಕಂದಾಯ ಸಚಿವರು ಸ್ಪಷ್ಟೀಕರಣ ನೀಡಿದರು.

ಮಾನ್ಯ ಕಂದಾಯ ಸಚಿವರು ನೀಡಿದ ಉತ್ತರವನ್ನು ಒಪ್ಪದೆ ವಿರೋಧ ಪಕ್ಷದ **(ಭಾರತೀಯ ಜನತಾ ಪಕ್ಷ)** ಮಾನ್ಯ ಶಾಸಕರುಗಳು ಸಭಾತ್ಯಾಗ ಮಾಡಿದರು.

**ಶಾಸನ ರಚನೆ**

**2. "ಕರಾವಳಿ ಅಭಿವೃದ್ಧಿ ಮಂಡಲಿ ವಿಧೇಯಕ", 2023**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ **"ಕರಾವಳಿ ಅಭಿವೃದ್ಧಿ ಮಂಡಲಿ ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

**3. "ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ", 2023**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ **"ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

**8. ಗಮನ ಸೆಳೆಯುವ ಸೂಚನೆ**

1. **ಶ್ರೀ ತಿಪ್ಪಣ್ಣಪ್ಪ** ಅವರು ವಿಶ್ವಗುರು ನಿಜಶರಣ ಅಂಬಿಗರ ಚೌಡಯ್ಯನವರ ಪ್ರತಿಮೆಯನ್ನು ಬೆಂಗಳೂರಿನ ಪ್ರತಿಷ್ಠಿತ ಸ್ಥಳದಲ್ಲಿ ಸ್ಥಾಪಿಸುವ ಕುರಿತು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆದರು.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಉತ್ತರಿಸಿದರು.

**9. ನಿಯಮ 330ರ ಮೇರೆಗೆ ನಡೆದ ಚರ್ಚೆಗೆ ಸರ್ಕಾರದಿಂದ ಉತ್ತರ**

**ಶ್ರೀಯುತರುಗಳಾದ ಕೋಟ ಶ್ರೀನಿವಾಸ ಪೂಜಾರಿ, ಎನ್. ರವಿಕುಮಾರ್, ಡಾ: ವೈ.ಎ. ನಾರಾಯಣಸ್ವಾಮಿ, ಶರವಣ ಟಿ.ಎ., ಛಲವಾದಿ ಟಿ. ನಾರಾಯಣಸ್ವಾಮಿ ಹಾಗೂ ಇತರರು** ರಾಷ್ಟ್ರೀಯ ಶಿಕ್ಷಣ ನೀತಿ–2020ನ್ನು ರದ್ದುಗೊಳಿಸಿರುವುದರಿಂದ ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳಲ್ಲಿ ತಲೆದೋರಿರುವ ಗೊಂದಲ–ಆತಂಕಗಳ ಗಂಭೀರ ವಿಷಯದ ಕುರಿತು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಮರಿತಿಬ್ಬೇಗೌಡ
2. ಶ್ರೀ ಕೆ.ಎ. ತಿಪ್ಪೇಸ್ವಾಮಿ

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಸ್ಪಷ್ಟೀಕರಣ ನೀಡಿದರು.

**ಗಮನ ಸೆಳೆಯುವ ಸೂಚನೆ**

**2. ಶ್ರೀ ಯು.ಬಿ. ವೆಂಕಟೇಶ್** ಅವರು ತುಮಕೂರು ತಾಲ್ಲೂಕಿನ ಮಲ್ಲೇನಹಳ್ಳಿ ಗ್ರಾಮದಲ್ಲಿ ಮೌಢ್ಯ ಆಚರಣೆಯಿಂದಾಗಿ ಹೆರಿಗೆ ನಂತರ ಊರ ಹೊರಗಿನ ಗುಡಿಸಲಿನಲ್ಲಿ ಬಾಣಂತಿ ಮತ್ತು ಮಗುವನ್ನು ಇರಿಸಲಾಗಿದ್ದ ಪರಿಣಾಮ ನವಜಾತ ಶಿಶು ಅನಾರೋಗ್ಯದಿಂದ ಸಾವನ್ನಪ್ಪಿರುವುದರಿಂದ ಮೌಢ್ಯ ಆಚರಣೆಯ ಅನಿಷ್ಟ ಪದ್ಧತಿಯನ್ನು ಹೋಗಲಾಡಿಸಲು ಕಾನೂನು ಕ್ರಮ ಕೈಗೊಳ್ಳುವ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆದರು.

ಮಾನ್ಯ ಸಮಾಜ ಕಲ್ಯಾಣ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀಮತಿ ಉಮಾಶ್ರೀ
2. ಶ್ರೀ ಎಸ್.ಎಲ್. ಭೋಜೇಗೌಡ

ಮಾನ್ಯ ಸಮಾಜ ಕಲ್ಯಾಣ ಸಚಿವರು ಸ್ಪಷ್ಟೀಕರಣ ನೀಡಿದರು.

## 10. ನಿಯಮ 330ರ ಮೇರೆಗೆ

1. **ಶ್ರೀ ಬಿ.ಎಂ. ಫಾರೂಖ್** ಅವರು ಮಂಗಳೂರಿನ ಉಲ್ಲಾಳ ನಗರದಲ್ಲಿ ಸ್ಥಾಪಿತವಾಗಿರುವ ಫಿಶ್ ಮಿಲ್ ತಯಾರಿಕಾ ಘಟಕದಿಂದ ಪರಿಸರ ಹಾಗೂ ಅಲ್ಲಿನ ಜನರ ಆರೋಗ್ಯ ಮತ್ತು ದೈನಂದಿನ ಚಟುವಟಿಕೆಗಳ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವುದರಿಂದ ಫಿಶ್ ಮಿಲ್ ತಯಾರಿಕಾ ಘಟಕವನ್ನು ಸ್ಥಳಾಂತರಿಸಲು ಅವಶ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಮೀನುಗಾರರು ಮತ್ತು ಮೀನು ರಫ್ತುದಾರರಿಗೆ ಅನುಕೂಲ ಮಾಡಿಕೊಡುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಉತ್ತರಿಸಿದರು.

### ಶಾಸನ ರಚನೆ

### 10. "ಕರಾವಳಿ ಅಭಿವೃದ್ಧಿ ಮಂಡಲಿ ವಿಧೇಯಕ", 2023

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ **"ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಕಂದಾಯ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಕೆ.ಎ. ತಿಪ್ಪೇಸ್ವಾಮಿ
2. ಶ್ರೀ ಎಸ್.ಎಲ್. ಭೋಜೇಗೌಡ

ಮಾನ್ಯ ಕಂದಾಯ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

## 11. ಪ್ರಕಟಣೆ

**ಮಾನ್ಯ ಸಭಾಪತಿಯವರು ಈ ಕೆಳಕಂಡ ಪ್ರಕಟಣೆಗಳನ್ನು ಪ್ರಕಟಿಸಿದರು.**

**ಮಾನ್ಯ ಸಭಾಧ್ಯಕ್ಷರಿಂದ ಬಂದಿರುವ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.**

**1.** ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ 104ನೇ ನಿಯಮದ ಮೇರೆಗೆ ವಿಧಾನ ಸಭೆಯು ದಿನಾಂಕ:13.12.2023ರಂದು **"ಕರ್ನಾಟಕ ಉಚ್ಚ ನ್ಯಾಯಾಲಯ (ತಿದ್ದುಪಡಿ) ವಿಧೇಯಕ," 2023**ನ್ನು ತಿದ್ದುಪಡಿಯೊಂದಿಗೆ ಹಾಗೂ ಈ ಕೆಳಕಂಡ ವಿಧೇಯಕಗಳನ್ನು ತಿದ್ದುಪಡಿಯಿಲ್ಲದೆ ಅಂಗೀಕರಿಸಿರುತ್ತದೆಂದು ಹಾಗೂ ಸದರಿ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

01. ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2023

02. ಕರ್ನಾಟಕ ಅನುಸೂಚಿತ ಜಾತಿಗಳ ಉಪಹಂಚಿಕೆ ಮತ್ತು ಬುಡಕಟ್ಟು ಉಪಹಂಚಿಕೆ (ಹಂಚಿಕೆ ಮಾಡಬಹುದಾದ ಆಯವ್ಯಯ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) (ತಿದ್ದುಪಡಿ) ವಿಧೇಯಕ, 2023

03. ಶ್ರೀ ರೇಣುಕಾ ಯಲ್ಲಮ್ಮ ಕ್ಷೇತ್ರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ ವಿಧೇಯಕ, 2023

04. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2023

05. ಕರ್ನಾಟಕ ಸಿವಿಲ್ ನ್ಯಾಯಾಲಯಗಳ (ತಿದ್ದುಪಡಿ) ವಿಧೇಯಕ, 2023

06. ಕರ್ನಾಟಕ ಸಾರ್ವಜನಿಕ ಪರೀಕ್ಷೆ (ನೇಮಕಾತಿಯಲ್ಲಿನ ಭ್ರಷ್ಟಾಚಾರ ಮತ್ತು ಅನುಚಿತ ವಿಧಾನಗಳ ಪ್ರತಿಬಂಧಕ ಕ್ರಮಗಳು) ವಿಧೇಯಕ, 2023

**2.** ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ 104ನೇ ನಿಯಮದ ಮೇರೆಗೆ ವಿಧಾನ ಸಭೆಯು ದಿನಾಂಕ:13.12.2023ರಂದು **"ಕರ್ನಾಟಕ ಧನವಿನಿಯೋಗ (ಸಂಖ್ಯೆ:4) ವಿಧೇಯಕ, 2023"**ನ್ನು ಅಂಗೀಕರಿಸಿರುತ್ತದೆಂದು ಹಾಗೂ ಸದರಿ ವಿಧೇಯಕಕ್ಕೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

**3.** ವಿಧಾನ ಪರಿಷತ್ತಿನ ಮಾನ್ಯ ಶಾಸಕರಾದ ಶ್ರೀ ಪ್ರಕಾಶ್ ಕೆ. ರಾಥೋಡ್ ಅವರು ಪ್ರಸಕ್ತ ಅಧಿವೇಶನದಲ್ಲಿ ಅನಾರೋಗ್ಯದ ನಿಮಿತ್ತ ಸದನದ ಕಾರ್ಯಕಲಾಪಗಳಲ್ಲಿ ಭಾಗವಹಿಸಲು ಸಾಧ್ಯವಾಗುತ್ತಿಲ್ಲದ ಕಾರಣ ಸದನದ ಕಾರ್ಯಕಲಾಪಗಳಲ್ಲಿ ಗೈರು ಹಾಜರಾಗಲು ಅನುಮತಿಸಬೇಕಾಗಿ ಕೋರಿರುವ ಬಗ್ಗೆ ಮಾನ್ಯ ಸಭಾಪತಿಯವರು ಪ್ರಕಟಿಸಿ ಸದನದ ಸಹಮತಿಯನ್ನು ಪಡೆಯಲಾಯಿತು.

**ನಿಯಮ 330ರ ಮೇರೆಗೆ**

**2.** **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಎಸ್.ಎಲ್. ಭೋಜೇಗೌಡ, ಮಧು ಜಿ. ಮಾದೇಗೌಡ, ಶಶೀಲ್ ಜಿ. ನಮೋಶಿ ಹಾಗೂ ಎಸ್.ವ್ಹಿ. ಸಂಕನೂರ** ಅವರುಗಳು ಪ್ರತಿ ತಾಲ್ಲೂಕಿನಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷಾ ಕೇಂದ್ರಗಳನ್ನು ಕಡಿಮೆ ಮಾಡಲು ಹಾಗೂ ಯಾವುದೇ ಅನುಭವ ತರಬೇತಿ ಇಲ್ಲದ ಪಂಚಾಯತ್ ರಾಜ್ ಇಲಾಖೆಯ ಸಿಬ್ಬಂದಿಗಳಿಂದ ಪರೀಕ್ಷೆ ನಡೆಸಲು ಉದ್ದೇಶಿಸಿರುವುದರಿಂದ ವಿದ್ಯಾರ್ಥಿಗಳ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುವುದಲ್ಲದೆ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ಕಾರ್ಯಭಾರವನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರ ಮೇಲುಸ್ತುವಾರಿಗೆ ನೀಡುವುದರಿಂದ ಉದ್ಭವಿಸುವ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರ ಪರವಾಗಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಉತ್ತರಿಸಿದರು.

**ಗಮನ ಸೆಳೆಯುವ ಸೂಚನೆ**

**3.** **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಅವರು ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನ ಕಂಕಣವಾಡಿ ಗ್ರಾಮದ ಆಲಮಟ್ಟಿ ಜಲಾಶಯದ ಹಿನ್ನೀರಿನ ನಡುಗಡ್ಡೆಯಲ್ಲಿ ಜನರಿಗೆ ಪ್ರಯಾಣಿಸಲು ಹಾಗೂ ಬೆಳೆದ ಬೆಳೆಗಳನ್ನು ಸಾಗಿಸಲು **"ಬೋಟಿಂಗ್ ವ್ಯವಸ್ಥೆ"** ಕಲ್ಪಿಸುವ ಬಗ್ಗೆ ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆದರು.

ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಪರವಾಗಿ ಮಾನ್ಯ ಸಭಾನಾಯಕರು ಉತ್ತರಿಸಿದರು.

ಸದನವನ್ನು ಸಂಜೆ 7.37 ಗಂಟೆಯಲ್ಲಿ ಮುಂದೂಡಿ ದಿನಾಂಕ:14.12.2023ರಂದು ಬೆಳಿಗ್ಗೆ 10.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**

**ಕಾರ್ಯದರ್ಶಿ**

*****

# **ಕರ್ನಾಟಕ ವಿಧಾನ ಪರಿಷತ್ತು**

ನೂರ ಐವತ್ತೊಂದನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

ಗುರುವಾರ, ದಿನಾಂಕ:14.12.2023

(09)

ಸದನವು ಬೆಳಗ್ಗೆ: 10.15 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## **1. ಪ್ರಕಟಣೆ**

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ 104ನೇ ನಿಯಮದ ಮೇರೆಗೆ ವಿಧಾನ ಸಭೆಯು ದಿನಾಂಕ:13.12.2023ರಂದು **"ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ಎರಡನೇ ತಿದ್ದುಪಡಿ) ವಿಧೇಯಕ, 2023"**ನ್ನು ತಿದ್ದುಪಡಿಯೊಂದಿಗೆ ಅಂಗೀಕರಿಸಿರುತ್ತದೆಂದು ಹಾಗೂ ಸದರಿ ವಿಧೇಯಕಕ್ಕೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

## **2. ಪ್ರಶ್ನೋತ್ತರ**

**ಮಾನ್ಯ ಸಭಾಧ್ಯಕ್ಷರಿಂದ ಬಂದಿರುವ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.**

ದಿನಾಂಕ:14.12.2023ರಂದು ಸದನದಲ್ಲಿ ಉತ್ತರಿಸುವ ಸಮೂಹ–IVರ 9ನೇ ಪಟ್ಟಿಯ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 121(1010)
2. 122(1064)
3. 123(1078)
4. 124(1021)

5. 125(1020)

6. 126(1065) ಗೈರು ಹಾಜರಿ

7. 127(1071) ಗೈರು ಹಾಜರಿ

8. 128(1052)

9. 129(1070)

10. 130(991)

11. 131(988) ಶ್ರೀ ಚಿದಾನಂದ್ ಎಂ. ಗೌಡ ಪರವಾಗಿ ಶ್ರೀ ವೈ.ಎಂ. ಸತೀಶ್

12. 132(1031)

13. 133(498) ಕಾಲಾವಕಾಶ

14. 134(1068)

15. 135(1053) ಕಾಲಾವಕಾಶ

**ದಿನಾಂಕ:07.12.2023ರ ಸಮೂಹ–IVರ 4ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆ**

1. 57(453)

**ದಿನಾಂಕ:11.12.2023ರ ಸಮೂಹ–Iರ 6ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆ**

2. 85(675)

ದಿನಾಂಕ:14.12.2023ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IVರ 9ನೇ ಪಟ್ಟಿಯ ಒಟ್ಟು 113 ಪ್ರಶ್ನೆಗಳ ಪೈಕಿ 66 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಕಾರ್ಯದರ್ಶಿಯವರು ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ ಕರ್ನಾಟಕ ಉಚ್ಚನ್ಯಾಯಾಲಯ (ತಿದ್ದುಪಡಿ) ವಿಧೇಯಕ, 2023 ಹಾಗೂ ತಿದ್ದುಪಡಿಗಳಿಲ್ಲದೆ ಅಂಗೀಕೃತಗೊಂಡಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದೆ ಮಂಡಿಸಿದರು.

01. ಕರ್ನಾಟಕ ಧನವಿನಿಯೋಗ (ಸಂಖ್ಯೆ–4) ವಿಧೇಯಕ, 2023

02. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2023

03. ಶ್ರೀ ರೇಣುಕಾ ಯಲ್ಲಮ್ಮ ಕ್ಷೇತ್ರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ ವಿಧೇಯಕ, 2023

04. ಕರ್ನಾಟಕ ಸಿವಿಲ್ ನ್ಯಾಯಾಲಯಗಳ (ತಿದ್ದುಪಡಿ) ವಿಧೇಯಕ, 2023

05. ಕರ್ನಾಟಕ ಸಾರ್ವಜನಿಕ ಪರೀಕ್ಷೆ (ನೇಮಕಾತಿಯಲ್ಲಿನ ಭ್ರಷ್ಟಾಚಾರ ಮತ್ತು ಅನುಚಿತ ವಿಧಾನಗಳ ಪ್ರತಿಬಂಧಕ ಕ್ರಮಗಳು) ವಿಧೇಯಕ, 2023

06. ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2023

07. ಕರ್ನಾಟಕ ಅನುಸೂಚಿತ ಜಾತಿಗಳ ಉಪಹಂಚಿಕೆ ಮತ್ತು ಬುಡಕಟ್ಟು ಉಪಹಂಚಿಕೆ (ಹಂಚಿಕೆ ಮಾಡಬಹುದಾದ ಆಯವ್ಯಯ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) (ತಿದ್ದುಪಡಿ) ವಿಧೇಯಕ, 2023

## 4. ಅರ್ಜಿಯನ್ನೊಪ್ಪಿಸುವುದು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ರಾಜ್ಯದಲ್ಲಿರುವ ಶಿಳ್ಳೇಕ್ಯಾತಸ್ ಮತ್ತು ಕಿಳ್ಳೇಕ್ಯಾತಸ್ ಜನರು ಒಂದೇ ಸಮುದಾಯದವರಾಗಿದ್ದು, ಪದಗಳ

ಗೊಂದಲದಿಂದ ಜಾತಿ ಪ್ರಮಾಣ ಪತ್ರ ವಿತರಿಸುವಲ್ಲಿ ಆಗಿರುವ ಸಮಸ್ಯೆಗಳನ್ನು ಸರಿಪಡಿಸುವ ಕುರಿತು ಅರ್ಜಿಯನ್ನೊಪ್ಪಿಸಿದರು.

**5. ಪರಿಶೀಲನಾ ಸಮಿತಿಯ ಕಾಲಾವಕಾಶವನ್ನು ವಿಸ್ತರಿಸಲು ಪ್ರಸ್ತಾವ**

ಶ್ರೀ ಶಿವಾನಂದ ಎಸ್. ಪಾಟೀಲ, ಅಧ್ಯಕ್ಷರು, ಪರಿಶೀಲನಾ ಸಮಿತಿ ಹಾಗೂ ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು **"ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ",** 2023ನ್ನು ಪರಿಶೀಲಿಸಲು ರಚಿಸಲಾಗಿರುವ ಪರಿಶೀಲನಾ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:09.12.2023ರಿಂದ 03 ತಿಂಗಳುಗಳ ಕಾಲಾವಕಾಶವನ್ನು ವಿಸ್ತರಿಸುವ ಪ್ರಸ್ತಾವನೆಗೆ ಸದನದ ಸಹಮತಿ ಕೋರಿ ಪ್ರಸ್ತಾವವನ್ನು ಮಂಡಿಸಿದರು.

ಪ್ರಸ್ತಾವನೆಗೆ ಸದನದ ಸಹಮತಿಯನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**6. ವಿತ್ತೀಯ ಕಾರ್ಯಕಲಾಪ**

2023–2024ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯವಾರ್ಷಿಕ ಪರಿಶೀಲನಾ ವರದಿಯನ್ನು ಮಾನ್ಯ ಮುಖ್ಯಮಂತ್ರಿಗಳು ಮಂಡಿಸಿದರು.

**7. ಶಾಸನ ರಚನೆ**

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**1. "ಕರ್ನಾಟಕ ಧನವಿನಿಯೋಗ (ಸಂಖ್ಯೆ–4) ವಿಧೇಯಕ", 2023**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ **"ಕರ್ನಾಟಕ ಧನವಿನಿಯೋಗ (ಸಂಖ್ಯೆ–4) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಮುಖ್ಯಮಂತ್ರಿಗಳು ವಿಧೇಯಕದ ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಡಿ.ಎಸ್. ಅರುಣ್

2. ಡಾ: ವೈ.ಎ. ನಾರಾಯಣಸ್ವಾಮಿ

3. ಶ್ರೀ ಕೆ.ಎ. ತಿಪ್ಪೇಸ್ವಾಮಿ

4. ಶ್ರೀ ಎನ್. ರವಿಕುಮಾರ್

5. ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ

6. ಶ್ರೀ ನಿರಾಣಿ ಹಣಮಂತ್ ರುದ್ರಪ್ಪ

7. ಶ್ರೀ ಶರವಣ ಟಿ.ಎ.

8. ಶ್ರೀ ಕೋಟ ಶ್ರೀನಿವಾಸ ಪೂಜಾರಿ

9. ಶ್ರೀ ಕೆ.ಎಸ್. ನವೀನ್

10. ಶ್ರೀ ಎಂ. ನಾಗರಾಜು

ಮಾನ್ಯ ಮುಖ್ಯಮಂತ್ರಿಗಳು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

ಮಧ್ಯಾಹ್ನ 1.20 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.10 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## ಶಾಸನ ರಚನೆ

## ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

**2. “ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ”, 2023**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ **“ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಕೆಲವು ಇತರ ಕಾನೂನು**

**(ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಉಪ ಮುಖ್ಯಮಂತ್ರಿಗಳು ವಿಧೇಯಕದ ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಶರವಣ ಟಿ.ಎ.
2. ಶ್ರೀ ಕೇಶವ ಪ್ರಸಾದ್ ಎಸ್

ಮಾನ್ಯ ಉಪ ಮುಖ್ಯಮಂತ್ರಿಗಳು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**3. "ಶ್ರೀ ರೇಣುಕಾ ಯಲ್ಲಮ್ಮ ಕ್ಷೇತ್ರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ ವಿಧೇಯಕ", 2023**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ **"ಶ್ರೀ ರೇಣುಕಾ ಯಲ್ಲಮ್ಮ ಕ್ಷೇತ್ರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿಧೇಯಕದ ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಎನ್. ರವಿಕುಮಾರ್
2. ಡಾ: ತೇಜಸ್ವಿನಿ ಗೌಡ
3. ಶ್ರೀ ಕೇಶವ ಪ್ರಸಾದ್ ಎಸ್
4. ಶ್ರೀ ಕೆ.ಎಸ್. ನವೀನ್
5. ಶ್ರೀ ಶರವಣ ಟಿ.ಎ
6. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ
7. ಶ್ರೀ ಎಂ. ನಾಗರಾಜು
8. ಶ್ರೀಮತಿ ಭಾರತಿ ಶೆಟ್ಟಿ

9. ಶ್ರೀಮತಿ ಹೇಮಲತಾ ನಾಯಕ್

10. ಶ್ರೀ ಚನ್ನರಾಜ್ ಬಸವರಾಜ್ ಹಟ್ಟಿಹೊಳಿ

11. ಶ್ರೀ ಕೋಟ ಶ್ರೀನಿವಾಸ ಪೂಜಾರಿ

12. ಶ್ರೀ ಬಿ.ಕೆ. ಹರಿಪ್ರಸಾದ್

13. ಶ್ರೀ ಕೆ.ಎ. ತಿಪ್ಪೇಸ್ವಾಮಿ

14. ಶ್ರೀಮತಿ ಉಮಾಶ್ರೀ

15. ಶ್ರೀ ಪಿ.ಹೆಚ್. ಪೂಜಾರ್

16. ಶ್ರೀ ನಿರಾಣಿ ಹಣಮಂತ್ ರುದ್ರಪ್ಪ

17. ಶ್ರೀ ಸುನೀಲ್ ವಲ್ಯಾಪೂರೆ

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**4. "ಕರ್ನಾಟಕ ಸಿವಿಲ್ ನ್ಯಾಯಾಲಯಗಳ (ತಿದ್ದುಪಡಿ) ವಿಧೇಯಕ", 2023**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ **"ಕರ್ನಾಟಕ ಸಿವಿಲ್ ನ್ಯಾಯಾಲಯಗಳ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಾನೂನು, ನ್ಯಾಯ ಮಾನವ ಹಕ್ಕುಗಳು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿಧೇಯಕದ ವಿವರಣೆ ನೀಡಿದರು.

ಮಧ್ಯಾಹ್ನ 4.39 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು (ಶ್ರೀ ಎಂ.ಕೆ. ಪ್ರಾಣೇಶ್) ಮಾನ್ಯ ಸಭಾಪತಿಯವರ ಪೀಠದಲ್ಲಿ ಆಸೀನರಾದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಪಿ.ಹೆಚ್. ಪೂಜಾರ್

2. ಶ್ರೀ ನಿರಾಣಿ ಹಣಮಂತ್ ರುದ್ರಪ್ಪ

3. ಶೀ ಕೇಶವ ಪ್ರಸಾದ್ ಎಸ್
4. ಶ್ರೀ ಎನ್. ರವಿಕುಮಾರ್
5. ಶ್ರೀ ಎಸ್.ವ್ಹಿ. ಸಂಕನೂರ
6. ಶ್ರೀ ಕೆ.ಎ. ತಿಪ್ಪೇಸ್ವಾಮಿ
7. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ
8. ಡಾ: ತೇಜಸ್ವಿನಿ ಗೌಡ

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**5. "ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ", 2023**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ **"ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ನಗರಾಭಿವೃದ್ಧಿ ಸಚಿವರು ವಿಧೇಯಕದ ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಡಾ: ತೇಜಸ್ವಿನಿ ಗೌಡ
2. ಶ್ರೀ ಕೆ.ಎ. ತಿಪ್ಪೇಸ್ವಾಮಿ
3. ಶ್ರೀ ವೈ.ಎಂ. ಸತೀಶ್
4. ಶ್ರೀ ಕೇಶವ ಪ್ರಸಾದ್ ಎಸ್

ಮಾನ್ಯ ನಗರಾಭಿವೃದ್ಧಿ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

## 8. ಶೂನ್ಯವೇಳೆ

1. **ಶ್ರೀ ಎಸ್.ವ್ಹಿ. ಸಂಕನೂರ** ಅವರು ರಾಜ್ಯದ ಎಲ್ಲಾ ಜಿಲ್ಲೆಗಳ ಕಿರಾಣಿ ಅಂಗಡಿ ಮತ್ತು ಫಾಸ್ಟ್ ಫುಡ್ ಅಂಗಡಿಗಳಲ್ಲಿ ಕಳಪೆ ಗುಣಮಟ್ಟದ ಅಜಿನೋಮೋಟವನ್ನು ಮಾರಾಟ ಮಾಡುತ್ತಿರುವುದನ್ನು ತಡೆಗಟ್ಟಲು ಕ್ರಮವಹಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ವೈ.ಎಂ. ಸತೀಶ್ ಹಾಗೂ ಶ್ರೀ ಮುನಿರಾಜು ಗೌಡ ಪಿ.ಎಂ.** ಅವರುಗಳು ಬೆಂಗಳೂರು ನಗರದಲ್ಲಿನ ಕೆರೆಗಳ ಮಾಲಿನ್ಯವನ್ನು ತಡೆಗಟ್ಟಲು ಹಾಗೂ ನೀರಿನ ಸುಸ್ಥಿರತೆಗೆ ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಅರಣ್ಯ ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ಕೆ.ಎಸ್. ನವೀನ್** ಅವರು ಸಹಕಾರಿ ಹಾಲು ಒಕ್ಕೂಟಗಳು ಸರ್ಕಾರದ ಗಮನಕ್ಕೆ ತರದೆ ಹಾಲಿನ ಖರೀದಿಯಲ್ಲಿ ಮನಸೋಇಚ್ಛೆ ದರಗಳನ್ನು ನಿಗದಿಗೊಳಿಸುತ್ತಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಸಹಕಾರ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಆಲಮಟ್ಟಿ ಜಲಾಶಯದ ಅಣೆಕಟ್ಟಿನ ಎತ್ತರವನ್ನು ಹೆಚ್ಚಿಸುವ ನೀರಾವರಿ ಯೋಜನೆಯನ್ನು ಶೀಘ್ರವಾಗಿ ಜಾರಿಗೊಳಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಜಲಸಂಪನ್ಮೂಲ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ಪಿ.ಹೆಚ್. ಪೂಜಾರ್** ಅವರು ವಿದ್ಯುತ್ ಅಭಾವವನ್ನು ನೀಗಿಸಲು ವಿದ್ಯುತ್ ಉತ್ಪಾದನೆಯನ್ನು ಹೆಚ್ಚಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಇಂಧನ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀಮತಿ ಉಮಾಶ್ರೀ** ಅವರು ಸಕ್ಕರೆ ಕಾರ್ಖಾನೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರ ವೇತನ ಮತ್ತು ಇನ್ನಿತರೆ ಸೌಲಭ್ಯಗಳನ್ನು ಪರಿಷ್ಕರಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಾರ್ಮಿಕ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀಮತಿ ಭಾರತಿ ಶೆಟ್ಟಿ** ಅವರು ಬೆಳಗಾವಿ ತಾಲ್ಲೂಕಿನ ಹೊಸವಂಟಮೂರಿ ಗ್ರಾಮದಲ್ಲಿ ಮಹಿಳೆಯೊಬ್ಬರ ಮೇಲೆ ಅಮಾನವೀಯವಾಗಿ ದೌರ್ಜನ್ಯ ಎಸಗಿರುವವರ ವಿರುದ್ಧ ಶೀಘ್ರವಾಗಿ ಕಾನೂನು ಕ್ರಮ ಜರುಗಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರು ಉತ್ತರಿಸಿದರು.

8. **ಶ್ರೀ ಮರಿತಿಬ್ಬೇಗೌಡ** ಅವರು ದಿನಾಂಕ:01.04.2018 ರಂದು ನೇಮಕ ಹೊಂದಿರುವ ಸರ್ಕಾರಿ/ಅನುದಾನಿತ ಶಾಲಾ ಶಿಕ್ಷಕರು ಹಾಗೂ ಉಪನ್ಯಾಸಕರುಗಳಿಗೆ ವಿಶೇಷ ಭತ್ಯೆ ಮಂಜೂರು ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ಶರವಣ ಟಿ.ಎ.** ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

10. **ಶ್ರೀ ಬಿ.ಕೆ. ಹರಿಪ್ರಸಾದ್** ಅವರು ಸರ್ಕಾರಿ ಪ್ರೌಢಶಾಲೆಯಿಂದ ಪದವಿ ಪೂರ್ವ ಕಾಲೇಜುಗಳಿಗೆ ಬಡ್ತಿ ಹೊಂದುವ ಉಪನ್ಯಾಕರುಗಳಿಗೆ 10,

15, 20, 25 ವರ್ಷಗಳ ಕಾಲಮಿತಿ ಬಡ್ತಿ ಹಾಗೂ 20, 25 ವರ್ಷಗಳ ಸ್ವಯಂಚಾಲಿತ ವೇತನ ಬಡ್ತಿಗಳನ್ನು ಮಂಜೂರು ಮಾಡದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

11. **ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಹಿಂದುಳಿದ ವರ್ಗಗಳ ಸಣ್ಣ ಸಣ್ಣ ವರ್ಗಗಳಿಗೆ ಅನ್ಯಾಯವಾಗದಂತೆ ಭಕ್ತ ವತ್ಸಲ ಆಯೋಗದ ವರದಿಯನ್ನು ಸಂಪೂರ್ಣವಾಗಿ ಅಂಗೀಕರಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 9. ಶೂನ್ಯವೇಳೆ ಪ್ರಸ್ತಾವನೆಗಳಿಗೆ ಉತ್ತರ

1. **ಶ್ರೀ ವೈ.ಎಂ. ಸತೀಶ್** ಅವರು ಬಳ್ಳಾರಿ ಜಿಲ್ಲೆಯ ಕುರುಗೋಡು ತಾಲ್ಲೂಕಿನಲ್ಲಿ ಕುರುಗೋಡು ಪಟ್ಟಣ ಮತ್ತು ಚೆಲ್ಲಗುರ್ಕಿ ಗ್ರಾಮದಲ್ಲಿ ಬಾಲಕಿಯರ ವಸತಿ ಶಾಲೆಗಳಿಗೆ ಮೂಲಸೌಕರ್ಯ ಮತ್ತು ಕಟ್ಟಡ ಒದಗಿಸುವ ಕುರಿತು ದಿನಾಂಕ:06.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

2. **ಶ್ರೀ ಚಿದಾನಂದ್ ಎಂ. ಗೌಡ** ಅವರು ಪತ್ರಕರ್ತರ ಜ್ವಲಂತ ಸಮಸ್ಯೆಗಳ ನಿವಾರಣೆಗೆ ರಕ್ಷಣಾ ಕಾಯ್ದೆ ಜಾರಿಗೊಳಿಸುವ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು ದಿನಾಂಕ:07.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

3. **ಶ್ರೀ ಯು.ಬಿ. ವೆಂಕಟೇಶ್** ಅವರು ಬೆಂಗಳೂರು ನಗರದಲ್ಲಿ ಆರೋಗ್ಯ ಇಲಾಖೆಯವರು ನ್ಯೂಮೋನಿಯಾ ತಡೆಗಟ್ಟಲು ಹಾಗೂ ರಕ್ಷಣೆಗೆ ಅಗತ್ಯ ಕ್ರಮವಹಿಸುವ ಕುರಿತು ದಿನಾಂಕ:07.12.2023ರಂದು

ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

4. **ಶ್ರೀ ಶಶೀಲ್ ಜಿ. ನಮೋಶಿ** ಅವರು ರಾಜ್ಯಾದ್ಯಂತ ಕಾಲಕಾಲಕ್ಕೆ ಗರ್ಭಿಣಿಯರ ಆರೋಗ್ಯ ತಪಾಸಣೆ ಮಾಡಿ ಸಂಪೂರ್ಣ ನಿಗಾವಹಿಸಿ ತಾಯಿ ಮಕ್ಕಳ ಸಾವಿನ ಪ್ರಮಾಣ ತಗ್ಗಿಸುವ ನಿಟ್ಟಿನಲ್ಲಿ ಕ್ರಮಕೈಗೊಳ್ಳುವ ಕುರಿತು ದಿನಾಂಕ:08.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

5. **ಶ್ರೀ ಎಂ. ನಾಗರಾಜು** ಅವರು ಇತ್ತೀಚಿನ ದಿನಗಳಲ್ಲಿ ಕರ್ನಾಟಕ ರಾಜಧಾನಿ ಬೆಂಗಳೂರಿನಲ್ಲಿ ಕ್ರಿಮಿನಲ್ ಇನ್ನಿತರ ಅಪರಾಧಗಳ ಸಂಖ್ಯೆ ಹೆಚ್ಚಾಗುತ್ತಿದ್ದು, "ಬೆಂಗಳೂರು ಅಪರಾಧಿಗಳ ನಗರ" ವೆಂದು ಬಿಂಬಿಸುತ್ತಿರುವ ಕುರಿತು ದಿನಾಂಕ:08.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

6. **ಶ್ರೀ ಪಿ.ಹೆಚ್. ಪೂಜಾರ್** ಅವರು ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದಿರುವ ಅನಪೇಕ್ಷಿತ ಕಾಮಗಾರಿ ಕೈಗೊಂಡು ಭ್ರಷ್ಟಾಚಾರ ನಡೆಸುತ್ತಿರುವ ಕುರಿತು ದಿನಾಂಕ:11.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಮಂಡಿಸಿದರು.

7. **ಶ್ರೀ ಅ. ದೇವೇಗೌಡ** ಅವರು ರಾಜ್ಯದಲ್ಲಿ ಗಾಂಜಾ, ಡ್ರಗ್ಸ್‌ಗಳ ಕಳ್ಳ ಸಾಗಾಣಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಕಾನೂನು ರೂಪಿಸುವ ಕುರಿತು ದಿನಾಂಕ:12.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

8. **ಶ್ರೀ ಮರಿತಿಬ್ಬೇಗೌಡ** ಅವರು ಸರ್ಕಾರಿ ಪದವಿ ಪೂರ್ವ ಕಾಲೇಜಿನ ಎಲ್ಲಾ ವಿದ್ಯಾರ್ಥಿಗಳಿಗೆ "ವಿಶ್ವಾಸ ಕಿರಣ" ಯೋಜನೆಯನ್ನು ಪುನಃ ಪ್ರಾರಂಭಿಸುವ ಕುರಿತು ದಿನಾಂಕ:12.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

9. **ಶ್ರೀ ಡಿ.ಎಸ್. ಅರುಣ್** ಅವರು ಭದ್ರಾವತಿಯಲ್ಲಿ ಭಾರತೀಯ ಜನತಾ ಪಕ್ಷದ ಯುವ ಮೋರ್ಚಾ ಕಾರ್ಯಕರ್ತ ಗೋಕುಲ್ ಕೃಷ್ಣನ್

ಅವರು ಜಾಲತಾಣದಲ್ಲಿ ಪೋಸ್ಟ್ ಮಾಡಿರುವುದನ್ನು ಖಂಡಿಸಿ ಹಲ್ಲೆ ನಡೆಸಿರುವ ಕುರಿತು ದಿನಾಂಕ:12.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

**10**. **ಶ್ರೀ ಚಿದಾನಂದ ಎಂ. ಗೌಡ** ಅವರು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳಾಗಿ ಕಾರ್ಯ ನಿರ್ವಹಿಸುತ್ತಿರುವವರಿಗೆ ವೇತನ ಪರಿಷ್ಕರಣೆ ಮತ್ತು ಸೇವಾ ಭದ್ರತೆ ಒದಗಿಸುವಂತೆ ಕೋರಿ 15 ದಿನಗಳಿಂದ ತರಗತಿ ಬಹಿಷ್ಕರಿಸಿ ಮುಷ್ಕರ ನಡೆಸುತ್ತಿರುವ ಕುರಿತು ದಿನಾಂಕ:13.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

## ಶಾಸನ ರಚನೆ

## ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

### 6. "ಕರ್ನಾಟಕ ಸಾರ್ವಜನಿಕ ಪರೀಕ್ಷೆ (ನೇಮಕಾತಿಯಲ್ಲಿನ ಭ್ರಷ್ಟಾಚಾರ ಮತ್ತು ಅನುಚಿತ ವಿಧಾನಗಳ ಪ್ರತಿಬಂಧಕ ಕ್ರಮಗಳು) ವಿಧೇಯಕ", 2023

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ **"ಕರ್ನಾಟಕ ಸಾರ್ವಜನಿಕ ಪರೀಕ್ಷೆ (ನೇಮಕಾತಿಯಲ್ಲಿನ ಭ್ರಷ್ಟಾಚಾರ ಮತ್ತು ಅನುಚಿತ ವಿಧಾನಗಳ ಪ್ರತಿಬಂಧಕ ಕ್ರಮಗಳು) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಗೃಹ ಸಚಿವರು ವಿಧೇಯಕದ ವಿವರಣೆ ನೀಡಿದರು.

ಸಾಯಂಕಾಲ 6.13 ಗಂಟೆಯಲ್ಲಿ ಡಾ: ತೇಜಸ್ವಿನಿ ಗೌಡ ಅವರು ಮಾನ್ಯ ಸಭಾಪತಿಯವರ ಪೀಠದಲ್ಲಿ ಆಸೀನರಾದರು.

ಈ ಕೆಳಕಂಡ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಅಡಗೂರ್ ಹೆಚ್ ವಿಶ್ವನಾಥ್
2. ಶ್ರೀ ಕೆ.ಎಸ್. ನವೀನ್

ಸಾಯಂಕಾಲ 6.24 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಸಭಾಪತಿಯವರ ಪೀಠದಲ್ಲಿ ಆಸೀನರಾದರು.

3. ಶ್ರೀ ಎನ್. ರವಿಕುಮಾರ್
4. ಶ್ರೀ ಡಿ.ಎಸ್. ಅರುಣ್
5. ಶ್ರೀ ಎಸ್.ವ್ಹಿ. ಸಂಕನೂರ
6. ಡಾ: ತೇಜಸ್ವಿನಿ ಗೌಡ
7. ಶ್ರೀ ಎಂ.ಆರ್. ಸೀತಾರಾಂ
8. ಶ್ರೀ ಮರಿತಿಬ್ಬೇಗೌಡ
9. ಶ್ರೀ ಕೇಶವ ಪ್ರಸಾದ್ ಎಸ್
10. ಶ್ರೀ ಕೆ.ಎ. ತಿಪ್ಪೇಸ್ವಾಮಿ
11. ಶ್ರೀಮತಿ ಭಾರತಿ ಶೆಟ್ಟಿ
12. ಡಾ: ವೈ.ಎ. ನಾರಾಯಣಸ್ವಾಮಿ
13. ಶ್ರೀ ಎಂ. ನಾಗರಾಜು
14. ಶ್ರೀ ನಿರಾಣಿ ಹಣಮಂತ್ ರುದ್ರಪ್ಪ
15. ಡಾ: ತಳವಾರ್ ಸಾಬಣ್ಣ

ಮಾನ್ಯ ಗೃಹ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**7. "ಕರ್ನಾಟಕ ಅನುಸೂಚಿತ ಜಾತಿಗಳ ಉಪಹಂಚಿಕೆ ಮತ್ತು ಬುಡಕಟ್ಟು ಉಪಹಂಚಿಕೆ (ಹಂಚಿಕೆ ಮಾಡಬಹುದಾದ ಆಯವ್ಯಯ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) (ತಿದ್ದುಪಡಿ) ವಿಧೇಯಕ", 2023**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ **"ಕರ್ನಾಟಕ ಅನುಸೂಚಿತ ಜಾತಿಗಳ ಉಪಹಂಚಿಕೆ ಮತ್ತು ಬುಡಕಟ್ಟು ಉಪಹಂಚಿಕೆ (ಹಂಚಿಕೆ ಮಾಡಬಹುದಾದ ಆಯವ್ಯಯ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಸಮಾಜ ಕಲ್ಯಾಣ ಸಚಿವರು ವಿಧೇಯಕದ ವಿವರಣೆ ನೀಡಿದರು.

ಈ ಕೆಳಕಂಡ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಕೆ.ಎ. ತಿಪ್ಪೇಸ್ವಾಮಿ
2. ಶ್ರೀ ಕೇಶವ ಪ್ರಸಾದ್ ಎಸ್
3. ಡಾ: ತೇಜಸ್ವಿನಿ ಗೌಡ
4. ಶ್ರೀ ಅಡಗೂರ್ ಹೆಚ್. ವಿಶ್ವನಾಥ್
5. ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ
6. ಶ್ರೀ ಎನ್. ರವಿಕುಮಾರ್
7. ಶ್ರೀ ಮರಿತಿಬ್ಬೇಗೌಡ
8. ಶ್ರೀ ಎಂ. ನಾಗರಾಜು
9. ಶ್ರೀಮತಿ ಹೇಮಲತಾ ನಾಯಕ್
10. ಶ್ರೀ ಕೆ.ಎಸ್. ನವೀನ್

ಮಾನ್ಯ ಸಮಾಜ ಕಲ್ಯಾಣ ಸಚಿವರು ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**8. "ಕರ್ನಾಟಕ ಉಚ್ಚನ್ಯಾಯಾಲಯ (ತಿದ್ದುಪಡಿ) ವಿಧೇಯಕ", 2023**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ **"ಕರ್ನಾಟಕ ಉಚ್ಚನ್ಯಾಯಾಲಯ (ತಿದ್ದುಪಡಿ) ವಿಧೇಯಕ"**ವನ್ನು

ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಾನೂನು, ನ್ಯಾಯ ಮಾನವ ಹಕ್ಕುಗಳು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿಧೇಯಕದ ವಿವರಣೆ ನೀಡಿದರು.

ಈ ಕೆಳಕಂಡ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ರಾತ್ರಿ 8.17 ಗಂಟೆಯಲ್ಲಿ ಡಾ: ತೇಜಸ್ವಿನಿ ಗೌಡ ಅವರು ಮಾನ್ಯ ಸಭಾಪತಿಯವರ ಪೀಠದಲ್ಲಿ ಆಸೀನರಾದರು.

1. ಶ್ರೀ ಪಿ.ಹೆಚ್. ಪೂಜಾರ್
2. ಶ್ರೀ ಅಡಗೂರು ಹೆಚ್. ವಿಶ್ವನಾಥ್
3. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.
4. ಶ್ರೀ ಕೇಶವ ಪ್ರಸಾದ್ ಎಸ್

ಮಾನ್ಯ ಕಾನೂನು, ನ್ಯಾಯ ಮಾನವ ಹಕ್ಕುಗಳು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**ಸಭೆಯ ಮುಂದಿಡಲಾಗುವ ಕಾಗದ ಪತ್ರ**

ಕಾರ್ಯದರ್ಶಿಯವರು ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ **“ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ಎರಡನೇ ತಿದ್ದುಪಡಿ) ವಿಧೇಯಕ”,** 2023ನ್ನು ಸಭೆಯ ಮುಂದೆ ಮಂಡಿಸಿದರು.

**ಶಾಸನ ರಚನೆ**

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**9. "ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ಎರಡನೇ ತಿದ್ದುಪಡಿ) ವಿಧೇಯಕ", 2023**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ **"ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ಎರಡನೇ ತಿದ್ದುಪಡಿ) ವಿಧೇಯಕ", 2023**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ವಿಧೇಯಕದ ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**10. ನಿರ್ಣಯ**

**ಶ್ರೀ ಹೆಚ್.ಕೆ. ಪಾಟೀಲ್ (ಮಾನ್ಯ ಕಾನೂನು, ನ್ಯಾಯ ಮಾನವ ಹಕ್ಕುಗಳು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು) ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.**

"ಕರ್ನಾಟಕ ರಾಜ್ಯದ ವಿಮಾನ ನಿಲ್ದಾಣಗಳಿಗೆ ಗಣ್ಯವ್ಯಕ್ತಿಗಳ ಹೆಸರನ್ನು ನಾಮಕರಣ ಮಾಡುವ ಮೂಲಕ ಆ ಐತಿಹಾಸಿಕ ವ್ಯಕ್ತಿಗಳ ಹೆಸರುಗಳನ್ನು ಅನ್ವರ್ಥಕಗೊಳಿಸಿ ಗೌರವಿಸುವ ಉದಾತ್ತ ಉದ್ದೇಶದಿಂದ ರಾಜ್ಯದ ನಾಲ್ಕು ವಿಮಾನ ನಿಲ್ದಾಣಗಳಿಗೆ ಈ ಕೆಳಕಂಡ ಮಹಾನ್ ಐತಿಹಾಸಿಕ ವ್ಯಕ್ತಿಗಳ ಹೆಸರುಗಳನ್ನು ನಾಮಕರಣ ಮಾಡಬೇಕೆಂದು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಸರ್ವಾನುಮತದಿಂದ ಈ ಸದನವು ಒತ್ತಾಯಿಸುತ್ತದೆ."

| | | | |
|---|---|---|---|
| 1. | **ಹುಬ್ಬಳ್ಳಿ ವಿಮಾನ ನಿಲ್ದಾಣ** | – | **ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ವಿಮಾನ ನಿಲ್ದಾಣ** |
| 2. | **ಬೆಳಗಾವಿ ವಿಮಾನ ನಿಲ್ದಾಣ** | – | **ಕಿತ್ತೂರ ರಾಣಿ ಚೆನ್ನಮ್ಮ ವಿಮಾನ ನಿಲ್ದಾಣ** |

| | | | |
|---|---|---|---|
| 3. | **ಶಿವಮೊಗ್ಗ ವಿಮಾನ ನಿಲ್ದಾಣ** | **–** | **ರಾಷ್ಟ್ರಕವಿ ಡಾ:ಕೆ.ವಿ. ಪುಟ್ಟಪ್ಪ(ಕುವೆಂಪು) ವಿಮಾನ ನಿಲ್ದಾಣ** |
| 4. | **ವಿಜಯಪುರ ವಿಮಾನ ನಿಲ್ದಾಣ** | **–** | **ಜಗಜ್ಯೋತಿ ಬಸವೇಶ್ವರ ವಿಮಾನ ನಿಲ್ದಾಣ** |

ನಿರ್ಣಯವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

ಸದನವನ್ನು ರಾತ್ರಿ 8.50 ಗಂಟೆಯಲ್ಲಿ ಮುಂದೂಡಿ ದಿನಾಂಕ:15.12.2023ರಂದು ಬೆಳಿಗ್ಗೆ 10.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು(**ಡಾ: ತೇಜಸ್ವಿನಿ ಗೌಡ**) ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

*****

# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೊಂದನೆಯ ಅಧಿವೇಶನ

## ಲಘು ಪ್ರಕಟಣೆ ಭಾಗ–1

## ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಶುಕ್ರವಾರ, ದಿನಾಂಕ:15.12.2023**

**(10)**

ಸದನವು ಬೆಳಗ್ಗೆ: 10.38 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

### 1. ಪ್ರಕಟಣೆ

**ಮಾನ್ಯ ಸಭಾಧ್ಯಕ್ಷರಿಂದ ಬಂದಿರುವ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.**

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ 104ನೇ ನಿಯಮದ ಮೇರೆಗೆ ವಿಧಾನ ಸಭೆಯು ದಿನಾಂಕ:15.12.2023ರಂದು ಈ ಕೆಳಕಂಡ ವಿಧೇಯಕಗಳನ್ನು ಅಂಗೀಕರಿಸಿರುತ್ತದೆಂದು ಹಾಗೂ ಸದರಿ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

01. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ಎರಡನೇ ತಿದ್ದುಪಡಿ) ವಿಧೇಯಕ, 2023

02. ಕರ್ನಾಟಕ ನ್ಯಾಯವಾದಿಗಳ ಮೇಲಿನ ಹಿಂಸಾಚಾರ ನಿಷೇಧ ವಿಧೇಯಕ, 2023

03. ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ, 2023

## 2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಕಾರ್ಯದರ್ಶಿಯವರು ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದೆ ಮಂಡಿಸಿದರು.

01. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ಎರಡನೇ ತಿದ್ದುಪಡಿ) ವಿಧೇಯಕ, 2023

02. ಕರ್ನಾಟಕ ನ್ಯಾಯವಾದಿಗಳ ಮೇಲಿನ ಹಿಂಸಾಚಾರ ನಿಷೇಧ ವಿಧೇಯಕ, 2023

03. ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ, 2023

## 3. ಅರ್ಜಿಯನ್ನೊಪ್ಪಿಸುವುದು

**ಶ್ರೀ ಎಸ್.ಎಲ್. ಭೋಜೇಗೌಡ** ಅವರ ಪರವಾಗಿ ಮಾನ್ಯ ಸಭಾಪತಿಯವರು ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್. ಪುರಂ ಹೋಬಳಿ, ಚಿನ್ನಪ್ಪನಹಳ್ಳಿ ಗ್ರಾಮದ ಸರ್ವೆ ನಂ.1/1, 3/3, 22, 21/1, 21/2 ಮತ್ತು 21/3ರಲ್ಲಿರುವ ಕಾಲುದಾರಿಯ ಅತಿಕ್ರಮವನ್ನು ತೆರವುಗೊಳಿಸಲು ವಿಫಲರಾಗಿರುವ ಕುರಿತು ಅರ್ಜಿಯನ್ನೊಪ್ಪಿಸಿದರು.

## 4. ನಿಲುವಳಿ ಸೂಚನೆ

ಶ್ರೀ ಕೋಟ ಶ್ರೀನಿವಾಸ ಪೂಜಾರಿ ಅವರು ಮಾನ್ಯ ಉಪ ಮುಖ್ಯಮಂತ್ರಿಯವರು ಆದಾಯಕ್ಕೂ ಮೀರಿ ಆಸ್ತಿಗಳಿಸಿರುವುರೆಂದು ಆರೋಪಿಸಿ ಸಿಬಿಐ ತನಿಖೆಗೆ ವಹಿಸಲಾಗಿದ್ದ ಪ್ರಕರಣವನ್ನು ರಾಜ್ಯ ಸರ್ಕಾರ ಹಿಂಪಡೆದಿರುವ ಬಗ್ಗೆ ನಿಯಮ 59ರ ಅಡಿಯಲ್ಲಿ ಪ್ರಸ್ತಾಪಿಸಲು ಮಾನ್ಯ ಸಭಾಪತಿಯವರಲ್ಲಿ ಅನುಮತಿ ಕೋರಿದರು.

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸದರಿ ಸೂಚನೆಯ ಬಗ್ಗೆ ಸ್ಪಷ್ಟೀಕರಣ ನೀಡಿ ಸೂಚನೆಯನ್ನು ಕೈಬಿಡಬೇಕೆಂದು ಕೋರಿದರು.

ಮಾನ್ಯ ಸಭಾಪತಿಯವರು ತಿರಸ್ಕರಿಸಲಾಗಿದೆ ಎಂದು ತೀರ್ಪು ನೀಡಿದರು.

## 5. ಶಾಸನ ರಚನೆ

### ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

**1. "ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ಎರಡನೇ ತಿದ್ದುಪಡಿ) ವಿಧೇಯಕ", 2023**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ **"ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ಎರಡನೇ ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸೂಚಿಸಿ ವಿಧೇಯಕದ ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಪಿ.ಹೆಚ್. ಪೂಜಾರ್
2. ಶ್ರೀ ಕೆ.ಎ. ತಿಪ್ಪೇಸ್ವಾಮಿ
3. ಶ್ರೀ ಕೇಶವ ಪ್ರಸಾದ್ ಎಸ್
4. ಶ್ರೀ ಎಂ. ನಾಗರಾಜು
5. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ
6. ಶ್ರೀಮತಿ ಉಮಾಶ್ರೀ
7. ಶ್ರೀ ನಸೀರ್ ಅಹ್ಮದ್
8. ಶ್ರೀ ಎನ್. ರವಿಕುಮಾರ್
9. ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ
10. ಶ್ರೀ ಅಡಗೂರ್ ಹೆಚ್. ವಿಶ್ವನಾಥ್

11. ಶ್ರೀ ಮರಿತಿಬ್ಬೇಗೌಡ
12. ಶ್ರೀ ಎಂ.ಆರ್. ಸೀತಾರಾಂ
13. ಶ್ರೀಮತಿ ಹೇಮಲತಾ ನಾಯಕ್

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**2. "ಕರ್ನಾಟಕ ನ್ಯಾಯವಾದಿಗಳ ಮೇಲಿನ ಹಿಂಸಾಚಾರ ನಿಷೇಧ ವಿಧೇಯಕ", 2023**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ **"ಕರ್ನಾಟಕ ನ್ಯಾಯವಾದಿಗಳ ಮೇಲಿನ ಹಿಂಸಾಚಾರ ನಿಷೇಧ ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸೂಚಿಸಿ ವಿಧೇಯಕದ ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಡಿ.ಎಸ್. ಅರುಣ್
2. ಶ್ರೀ ಕೇಶವ ಪ್ರಸಾದ್ ಎಸ್.
3. ಡಾ: ತೇಜಸ್ವಿನಿ ಗೌಡ
4. ಶ್ರೀ ಕೆ.ಎ. ತಿಪ್ಪೇಸ್ವಾಮಿ
5. ಶ್ರೀ ಶಶೀಲ್ ಜಿ. ನಮೋಶಿ
6. ಶ್ರೀ ನಿರಾಣಿ ಹಣಮಂತ್ ರುದ್ರಪ್ಪ
7. ಶ್ರೀ ಪಿ.ಹೆಚ್. ಪೂಜಾರ್
8. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ
9. ಶ್ರೀ ಅಡಗೂರ್ ಹೆಚ್. ವಿಶ್ವನಾಥ್

10. ಶ್ರೀ ಬಿ.ಕೆ. ಹರಿಪ್ರಸಾದ್

11. ಶ್ರೀ ಮರಿತಿಬ್ಬೇಗೌಡ

ಮಧ್ಯಾಹ್ನ 12.32 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿಯವರ ಪೀಠದಲ್ಲಿ ಆಸೀನರಾದರು.

12. ಶ್ರೀ ಪ್ರದೀಪ್ ಶೆಟ್ಟರ್

13. ಶ್ರೀ ಎನ್. ರವಿಕುಮಾರ್

14. ಶ್ರೀ ಎಸ್.ವ್ಹಿ. ಸಂಕನೂರ

15. ಶ್ರೀ ಜಗದೀಶ್ ಶೆಟ್ಟರ್

ಮಾನ್ಯ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**10. "ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ", 2023**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ **"ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಸೂಚಿಸಿ ವಿಧೇಯಕದ ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಜಗದೀಶ್ ಶೆಟ್ಟರ್

2. ಶ್ರೀ ಕೆ.ಎ. ತಿಪ್ಪೇಸ್ವಾಮಿ

3. ಡಾ: ತೇಜಸ್ವಿನಿ ಗೌಡ

4. ಶ್ರೀ ಪಿ.ಹೆಚ್. ಪೂಜಾರ್

ಮಧ್ಯಾಹ್ನ 1.21 ಗಂಟೆಗೆ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪೀಠದಲ್ಲಿ ಆಸೀನರಾದರು.

ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**6. ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿ ಕುರಿತು ವಿಶೇಷ ಚರ್ಚೆ**

**ಶ್ರೀ ಅಡಗೂರ್ ಹೆಚ್. ವಿಶ್ವನಾಥ್** ಅವರು ಉತ್ತರ ಕರ್ನಾಟಕದಲ್ಲಿರುವ ನದಿಗಳ ನೀರನ್ನು ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ನದಿಗಳ ಜೋಡಣೆ ಮುಖಾಂತರ ನೀರಾವರಿ ಯೋಜನೆಗಳನ್ನು ಜಾರಿಗೊಳಿಸುವುದು. ಉತ್ತರ ಕರ್ನಾಟಕದ ಕೃಷ್ಣ, ತುಂಗಾ–ಭದ್ರ, ಮಲಪ್ರಭ, ಘಟಪ್ರಭ, ಮಹದಾಯಿ ನದಿಗಳ ನೀರಾವರಿ ಯೋಜನೆಗಳ ಅನುಷ್ಠಾನ, ಶಿಕ್ಷಣ ಹಾಗೂ ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿ ಕುರಿತು ಚರ್ಚೆ ಪ್ರಾರಂಭಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯನ್ನು ಭಾಗವಹಿಸಿದರು.

1. ಶ್ರೀ ನಿರಾಣಿ ಹಣಮಂತ್ ರುದ್ರಪ್ಪ
2. ಶ್ರೀ ಪ್ರದೀಪ್ ಶೆಟ್ಟರ್
3. ಶ್ರೀ ಕೆ.ಎ. ತಿಪ್ಪೇಸ್ವಾಮಿ
4. ಶ್ರೀ ಎನ್. ರವಿಕುಮಾರ್

ಮಧ್ಯಾಹ್ನ 2.30 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

ಮಧ್ಯಾಹ್ನ 3.10 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

5. ಶ್ರೀ ಪಿ.ಹೆಚ್. ಪೂಜಾರ್

ಮಾನ್ಯ ಮುಖ್ಯಮಂತ್ರಿಗಳು ಉತ್ತರಿಸಿದರು.

ಸರ್ಕಾರದ ಉತ್ತರವನ್ನು ಒಪ್ಪದೆ ಮಾನ್ಯ ವಿರೋಧ ಪಕ್ಷದ ಶಾಸಕರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾದರು.

**ಮಾನ್ಯ ಸಭಾನಾಯಕರು ಪ್ರಶ್ನೆಗಳು ಹಾಗೂ ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಿದರು**

1. ದಿನಾಂಕ:15.12.2023ರ ಚುಕ್ಕೆ ಗುರುತಿನ 15 ಪ್ರಶ್ನೆಗಳಿಗೆ, ತಡೆಹಿಡಿಯಲಾದ 01 ಪ್ರಶ್ನೆಗೆ ಹಾಗೂ ಲಿಖಿತ ಮೂಲಕ ಉತ್ತರಿಸುವ 69 ಪ್ರಶ್ನೆಗಳಿಗೆ ಉತ್ತರಗಳನ್ನು ಮಂಡಿಸಿದರು.

**2. ಈ ಕೆಳಗಿನ ಶೂನ್ಯವೇಳೆ ಪ್ರಸ್ತಾವನೆಗಳಿಗೆ ಉತ್ತರಗಳನ್ನು ಮಂಡಿಸಿದರು.**

ಅ. **ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ)** ಅವರು ಕೊಡಗು ಜಿಲ್ಲೆಯ ಕೊಳತೋಡು ಗ್ರಾಮದಲ್ಲಿ ವನ್ಯ ಜೀವಿಗಳ ಹಾವಳಿಯನ್ನು ತಡೆಗಟ್ಟಲು ಕ್ರಮಕೈಗೊಳ್ಳುವ ಕುರಿತು ದಿನಾಂಕ:07.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಉತ್ತರ ಮಂಡಿಸಿದರು.

ಆ. **ಶ್ರೀಮತಿ ಹೇಮಲತಾ ನಾಯಕ್** ಅವರು ವಿಜಯಪುರ ಜಿಲ್ಲೆಯಲ್ಲಿರುವ ಆಲಮಟ್ಟಿ ಡ್ಯಾಂ ಎತ್ತರಿಸುವ ಕುರಿತು ದಿನಾಂಕ:08.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಉತ್ತರ ಮಂಡಿಸಿದರು.

ಇ. **ಶ್ರೀ ಕೆ.ಎಸ್. ನವೀನ್** ಅವರು ರಾಜ್ಯದಲ್ಲಿ ವಿದ್ಯುತ್ ಅಭಾವ ಉಂಟಾಗಿರುವುದರಿಂದ ಜಲವಿದ್ಯುತ್ ಉತ್ಪಾದನೆ ಅಣೆಕಟ್ಟು ಹಾಗೂ ಇಂಧನ ಇಲಾಖೆಯಲ್ಲಿನ ಆಸ್ತಿಗಳನ್ನು ಅಡಮಾನವಿಟ್ಟಿರುವ ಕುರಿತು ದಿನಾಂಕ:11.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಉತ್ತರ ಮಂಡಿಸಿದರು.

**ಈ.** **ಶ್ರೀ ಎಂ. ನಾಗರಾಜು** ಅವರು ಬೆಳಗಾವಿ ಜಿಲ್ಲೆಯ ಕಾರ್ಮಿಕ ವಿಮಾ ನಿಗಮದ ಆಸ್ಪತ್ರೆ ಕಟ್ಟಡ ಶಿಥಿಲಗೊಂಡಿದ್ದು, ಹೊಸ ಕಟ್ಟಡ ಮಂಜೂರಾಗಿ ವರ್ಷ ಕಳೆದರೂ ಆಸ್ಪತ್ರೆ ಸ್ಥಳಾಂತರಗೊಳಿಸಲು ಸ್ಥಳ ಸಿಗದ ಕಾರಣಕ್ಕಾಗಿ ಹೊಸ ಕಟ್ಟಡ ನಿರ್ಮಾಣವು

ವಿಳಂಬವಾಗುತ್ತಿರುವ ಕುರಿತು ದಿನಾಂಕ:11.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಉತ್ತರ ಮಂಡಿಸಿದರು.

ಉ. **ಶ್ರೀ ಎಸ್.ಎಲ್. ಭೋಜೇಗೌಡ** ಅವರು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅನುದಾನ ಮತ್ತು ಅನುದಾನ ರಹಿತ ಶಾಲೆಗಳ ಮಾನ್ಯತೆ ನವೀಕರಣಕ್ಕೆ ನೋಂದಣಿ ಶುಲ್ಕ ಪಾವತಿಸಲಾಗಿದ್ದು, ಅರ್ಜಿ ತಿರಸ್ಕೃತಗೊಂಡ ಕಾರಣ ಪುನಃ ಎರಡನೇ ಬಾರಿ ನೋಂದಣಿ ಶುಲ್ಕ ಕಟ್ಟಿಸಿಕೊಂಡಿರುವ ಕುರಿತು ದಿನಾಂಕ:13.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಉತ್ತರ ಮಂಡಿಸಿದರು.

ಊ. **ಶ್ರೀಮತಿ ಹೇಮಲತಾ ನಾಯಕ್** ಅವರು ಸವದತ್ತಿ ತಾಲ್ಲೂಕಿನ ಮುರಗೋಡ ಗ್ರಾಮದ ಅಂಗನವಾಡಿ ಕಟ್ಟಡ ಶಿಥಿಲಾವಸ್ಥೆಯಲ್ಲಿದ್ದು ಮಕ್ಕಳಿಗೆ ಬೀಡಾ ಅಂಗಡಿಯಲ್ಲಿ ಕಲಿಕೆಯನ್ನು ನಡೆಸುತ್ತಿರುವ ಕುರಿತು ದಿನಾಂಕ:13.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಉತ್ತರ ಮಂಡಿಸಿದರು.

ಋ. **ಶ್ರೀ ಎಂ. ನಾಗರಾಜು** ಅವರು ಖಾನಾಪುರ ಪಟ್ಟಣದಲ್ಲಿರುವ ವಿವಿಧ ಇಲಾಖೆಗಳ ಸರ್ಕಾರಿ ಕಟ್ಟಡಗಳು ಬಳಕೆಯಾಗದೆ ಇರುವುದರಿಂದ ಸ್ವಂತ ಕಟ್ಟಡವಿಲ್ಲದ ಸರ್ಕಾರಿ ಕಚೇರಿಗಳನ್ನು ಇದರ ಬಳಕೆ ಮಾಡಿಕೊಳ್ಳಲು ಅಗತ್ಯ ಕ್ರಮಕೈಗೊಳ್ಳುವ ಕುರಿತು ದಿನಾಂಕ:13.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಉತ್ತರ ಮಂಡಿಸಿದರು.

ಎ. **ಶ್ರೀಮತಿ ಭಾರತಿ ಶೆಟ್ಟಿ** ಅವರು ಬೆಳಗಾವಿ ತಾಲ್ಲೂಕಿನ ಹೊಸವಂಟಮೂರಿ ಗ್ರಾಮದಲ್ಲಿ ಮಹಿಳೆಯೊಬ್ಬರ ಮೇಲೆ ಅಮಾನವೀಯವಾಗಿ ದೌರ್ಜನ್ಯ ಎಸಗಿರುವವರ ವಿರುದ್ಧ ಶೀಘ್ರವಾಗಿ ಕಾನೂನು ಕ್ರಮ ಜರುಗಿಸುವ ಕುರಿತು ದಿನಾಂಕ:13.12.2023ರಂದು ಪ್ರಸ್ತಾಪಿಸಿದ ಸೂಚನೆಗೆ ಉತ್ತರ ಮಂಡಿಸಿದರು.

3. ದಿನಾಂಕ:04.12.2023 ರಿಂದ 15.12.2023ರವರೆಗೆ ನಡೆದ 151ನೇ ಅಧಿವೇಶನದಲ್ಲಿ ಲಿಖಿತ ಮೂಲಕ ಉತ್ತರಿಸುವ 313 ಪ್ರಶ್ನೆಗಳಿಗೆ, ನಿಯಮ

72ರ ಒಟ್ಟು 164 ಸೂಚನೆಗಳ ಪೈಕಿ 69 ಸೂಚನೆಗಳಿಗೆ ಹಾಗೂ ನಿಯಮ 330ರ ಒಟ್ಟು 93 ಸೂಚನೆಗಳ ಪೈಕಿ 35 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಿದರು.

## ಸಾರಾಂಶ

**ಮಾನ್ಯ ಸಭಾಪತಿಯವರು:**

ವಿಧಾನ ಪರಿಷತ್ತಿನ 151ನೇ ಅಧಿವೇಶನದ ಉಪವೇಶನದಲ್ಲಿ ನಡೆದಿರುವ ಕಾರ್ಯಕಲಾಪಗಳ ವಿವರವನ್ನು ಸದನಕ್ಕೆ ತಿಳಿಸಲು ಇಚ್ಛಿಸುತ್ತೇನೆ. ಪ್ರಸ್ತುತ ಅಧಿವೇಶನವು ದಿನಾಂಕ:04.12.2023 ರಿಂದ 15.12.2023 ರವರೆಗೆ ಒಟ್ಟು 10 ದಿನಗಳು ಅಂದರೆ, **57**+29 ಗಂಟೆಗಳು ನಡೆಸಲಾಗಿರುತ್ತದೆ.

ಆ ಪೈಕಿ ಗದ್ದಲ ಹಾಗೂ ಧರಣಿಗಾಗಿ ಒಟ್ಟು 4 ಗಂಟೆ 30 ನಿಮಿಷಗಳನ್ನು ವ್ಯಯಿಸಲಾಗಿದೆ.

ಕಳೆದ ಅಧಿವೇಶನದಿಂದೀಚೆಗೆ ನಿಧನರಾದ ಒಟ್ಟು 11 ಗಣ್ಯರುಗಳಿಗೆ, ಸೇನಾ ಕ್ಯಾಪ್ಟನ್ ಪ್ರಾಂಜಲ್ ಸೇರಿದಂತೆ ಕ್ಯಾಪ್ಟನ್ ಶುಭಂ ಗುಪ್ತಾ, ಹವಲ್ದಾರ ಅಬ್ದುಲ ಮಜಿಕ್, ಲಾನ್ಸ್ ನಾಯ್ಕ್ ಸಂಜಯ್ ಬಿಸ್ಟ್ ಮತ್ತು ಸಚಿನ್ ಲಾರ್ ಹಾಗೂ ಇತರೆ ವೀರ ಯೋಧರುಗಳಿಗೆ ಮತ್ತು ಐತಿಹಾಸಿಕ ಮೈಸೂರು ದಸರಾದ ಕೇಂದ್ರ ಬಿಂದುವಾಗಿದ್ದ ಗಜರಾಜ ವೀರ ಅರ್ಜುನನಿಗೆ ಸದನವು ತನ್ನ ಸಂತಾಪವನ್ನು ವ್ಯಕ್ತಪಡಿಸಿತು.

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ 01 ಮತ್ತು 02 ಪಟ್ಟಿಗಳನ್ನು ಮಂಡಿಸಲಾಯಿತು.

ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 2023-24ನೇ ಸಾಲಿನ ಮೊದಲನೇ ಹಾಗೂ ಮಧ್ಯಂತರ ವರದಿ ಹಾಗೂ ಕರ್ನಾಟಕ ವಿಧಾನ

ಮಂಡಲದ ಸಾರ್ವಜನಿಕ ಉದ್ಯಮಗಳ ಸಮಿತಿಯ 2023–24ನೇ ಸಾಲಿನ 136ನೇ ವರದಿಗಳನ್ನು ಒಪ್ಪಿಸಲಾಯಿತು.

2023–2024ನೇ ಸಾಲಿನ ಆಯವ್ಯಯ ಅಂದಾಜುಗಳ ಮೊದಲನೆ ಕಂತು ಹಾಗೂ 2023–24ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯವಾರ್ಷಿಕ ಪರಿಶೀಲನಾ ವರದಿಯನ್ನು ಮಂಡಿಸಲಾಯಿತು.

ರಾಜ್ಯದ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳ ಸಂಬಂಧ ಪರಿಶೀಲಿಸಿ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯ ಕಾಲಾವಧಿಯನ್ನು ದಿನಾಂಕ:22.10.2023 ರಿಂದ 06 ತಿಂಗಳವರೆಗೆ, ರಾಜ್ಯದಲ್ಲಿರುವ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಕ್ಲಬ್‌ಗಳ ಕಾರ್ಯವೈಖರಿ ಮತ್ತು ಚಟುವಟಿಕೆಗಳನ್ನು ಪರಿಶೀಲಿಸಲು ರಚಿಸಲಾಗಿರುವ ಸದನ ಸಮಿತಿಯ ಕಾಲಾವಧಿಯನ್ನು ದಿನಾಂಕ:22.09.2023 ರಿಂದ 06 ತಿಂಗಳವರೆಗೆ ಹಾಗೂ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ, 2023ನ್ನು ಪರಿಶೀಲಿಸಲು ರಚಿಸಲಾಗಿರುವ ಪರಿಶೀಲನಾ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:09.12.2023 ರಿಂದ 03 ತಿಂಗಳವರೆಗೆ ವಿಸ್ತರಿಸುವ ಪ್ರಸ್ತಾವಗಳನ್ನು ಮಂಡಿಸಿ, ಸದನದ ಸಹಮತಿಯನ್ನು ಪಡೆಯಲಾಯಿತು.

ನಿಯಮ 59 ರಡಿಯಲ್ಲಿ ಒಟ್ಟು 05 ಸೂಚನೆಗಳನ್ನು ಸ್ವೀಕರಿಸಲಾಗಿದ್ದು, ಆ ಪೈಕಿ 01 ಸೂಚನೆಯನ್ನು ನಿಯಮ 330ರಡಿ ಚರ್ಚಿಸಿ, ಉತ್ತರಿಸಲಾಯಿತು. ಉಳಿದ 03 ಸೂಚನೆಗಳನ್ನು ನಿಯಮ 68ಕ್ಕೆ ಪರಿವರ್ತಿಸಲಾಗಿದ್ದು, 01 ಸೂಚನೆಯನ್ನು ಚರ್ಚಿಸಿ ಉತ್ತರಿಸಲಾಗಿರುತ್ತದೆ ಹಾಗೂ 01 ಸೂಚನೆಯನ್ನು ತಿರಸ್ಕರಿಸಲಾಗಿರುತ್ತದೆ.

ಪ್ರಸ್ತುತ ಅಧಿವೇಶನದಲ್ಲಿ ಒಟ್ಟು 1219 ಪ್ರಶ್ನೆಗಳನ್ನು ಸ್ವೀಕರಿಸಿದ್ದು, ಅದರಲ್ಲಿ 150 ಪ್ರಶ್ನೆಗಳನ್ನು ಚುಕ್ಕೆ ಗುರುತಿನ ಪ್ರಶ್ನೆಗಳನ್ನಾಗಿ ಅಂಗೀಕರಿಸಿದ್ದು, ಅವುಗಳ ಪೈಕಿ 103 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 41 ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು.

ಲಿಖಿತ ಮೂಲಕ ಉತ್ತರಿಸುವ ಒಟ್ಟು 1057 ಪ್ರಶ್ನೆಗಳ ಪೈಕಿ 970 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 58ರಡಿಯಲ್ಲಿ ಅರ್ಧಗಂಟೆ ಕಾಲಾವಧಿ ಚರ್ಚೆಗಾಗಿ ಒಟ್ಟು 04 ಸೂಚನೆಗಳನ್ನು ಸ್ವೀಕರಿಸಲಾಗಿರುತ್ತದೆ. ಯಾವುದೇ ಸೂಚನೆಗಳನ್ನು ಚರ್ಚಿಸಿರುವುದಿಲ್ಲ.

ನಿಯಮ 72ರಡಿಯಲ್ಲಿ 164 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 09 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 69 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 330ರಡಿಯಲ್ಲಿ 93 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 06 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 35 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ಎರಡು ಅರ್ಜಿಗಳು ಹಾಗೂ ಒಂದು ಹಕ್ಕುಚ್ಯುತಿ ಸೂಚನೆಯನ್ನು ಸದನದಲ್ಲಿ ಮಂಡಿಸಲಾಯಿತು.

ಶೂನ್ಯ ವೇಳೆ ಪ್ರಸ್ತಾವನೆಯ ಒಟ್ಟು 90+ ಸೂಚನೆಗಳ ಪೈಕಿ 52 ಸೂಚನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಯಿತು.

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಒಟ್ಟು 17 ವಿಧೇಯಕಗಳಿಗೆ ವಿಧಾನ ಪರಿಷತ್ತು ತನ್ನ ಸಹಮತಿಯನ್ನು ನೀಡಿರುತ್ತದೆ. ಒಂದು ಅಧಿಕೃತ ನಿರ್ಣಯವು ಸರ್ವಾನುಮತದಿಂದ ಅಂಗೀಕಾರವಾಗಿರುತ್ತದೆ.

ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿ ಕುರಿತು ಚರ್ಚಿಸಿ ಉತ್ತರಿಸಲಾಯಿತು.

**ಮಾನ್ಯ ಸಭಾನಾಯಕರು ಹಾಗೂ ವಿರೋಧ ಪಕ್ಷದ ಸದಸ್ಯರು ಮಾತನಾಡಿದ ನಂತರ:–**

ಮಾನ್ಯ ಮುಖ್ಯಮಂತ್ರಿಗಳಿಗೆ, ಮಾನ್ಯ ಸಭಾನಾಯಕರಿಗೆ, ಎಲ್ಲಾ ಮಂತ್ರಿ ವರ್ಗದವರಿಗೆ, ಸರ್ಕಾರದ ಮುಖ್ಯ ಸಚೇತಕರಿಗೆ, ಪತ್ರಿಕಾ ಹಾಗೂ

ಮಾಧ್ಯಮ ವರದಿಗಾರರಿಗೆ, ವಿಧಾನ ಪರಿಷತ್ತಿನ ಸಚಿವಾಲಯದ ಅಧಿಕಾರಿ/ನೌಕರವರ್ಗದವರಿಗೆ ಮತ್ತು ಸರ್ಕಾರದ ಎಲ್ಲಾ ಅಧಿಕಾರಿ/ನೌಕರ ವೃಂದದವರಿಗೆ ಸದನದ ಕಾರ್ಯಕಲಾಪಗಳನ್ನು ಸುಗಮವಾಗಿ ನಡೆಸಲು ಸಹಕರಿಸಿದ್ದಕ್ಕೆ ತುಂಬು ಹೃದಯದ ಧನ್ಯವಾದಗಳನ್ನು ಸಲ್ಲಿಸುತ್ತಾ, ಮಧ್ಯಾಹ್ನ 3.55 ಗಂಟೆಯಲ್ಲಿ ರಾಷ್ಟ್ರಗೀತೆಯನ್ನು ನುಡಿಸುವುದರ ಮೂಲಕ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ) ಸದನವನ್ನು ಅನಿರ್ದಿಷ್ಟ ಕಾಲದವರೆಗೆ ಮುಂದೂಡಿದರು**.

**ಕೆ.ಆರ್. ಮಹಾಲಕ್ಷ್ಮಿ,**
**ಕಾರ್ಯದರ್ಶಿ.**

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು. ಕಾ.ಸೂ.738/ಪಿ5